ಸಂಪುಟ: ೦೬/ ಸಂಚಿಕೆ: ೨೬೪/ಬುಧವಾರ ದಿನಾಂಕ : ೧೮-೧೨-೨೦೨೪/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 06/ ISSUE : 264/ WENDESDAY Date : 18-12-2024/ RNI No. KARKAN/2019/77640/ Postal Reg No. PMG/KA/NK/BM/135/21-24 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಬಾಣಂತಿಯರ ಸಾವು ಪ್ರಕರಣ ಎಸ್‌ಐಟಿಗೊಳಪಡಿಸಲು ಒತ್ತಾಯ
## ಫಾರ್ಮಾ ಲಾಬಿ ಮಣಿಸಲು ವಿಪಕ್ಷದ ಸದಸ್ಯರಿಂದ ಸರ್ಕಾರಕ್ಕೆ ಸಲಹೆ

ಬೆಳಗಾವಿ ಸುವರ್ಣಸೌಧ : ರಾಜ್ಯದ ವಿವಿಧೆಡೆ ಇತ್ತೀಚೆಗೆ ಸಂಭವಿಸಿದ ಬಾಣಂತಿಯರ ಸರಣಿ ಸಾವು ವಿಷಯವು ವಿಧಾನ ಪರಿಷತ್ತಿನಲ್ಲಿ ಡಿ.17ರಂದು ಚರ್ಚೆಗೆ ಬಂದಿತು.

ಆರೋಗ್ಯ ಸಚಿವರಾದ ದಿನೇಶ್ ಗುಂಡೂರಾವ್ ಅವರು, ಬಾಣಂತಿಯರ ಸಾವಿನ ಕುರಿತು ಪರಿಷತ್ ಗೆ ಹೇಳಿಕೆ ನೀಡಿದರು.

ನವೆಂಬರ್.11ರಿಂದ ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ತಾಯಂದಿರ ಸಾವು ವರದಿಯಾಗಿದೆ. 5 ಬಾಣಂತಿಯರು ಸಾವಿಗೀಡಾದ ವಿಷಯ ತಿಳಿಯುತ್ತದ್ದಂತೆ ತಜ್ಞವೈದ್ಯರ ತಂಡ ರಚಿಸಲಾಗಿದೆ. ತಂಡವು ಈ ಬಗ್ಗೆ ಪರಿಶೀಲನೆ ನಡೆಸಿ ವರದಿ ಸಲ್ಲಿಸಿದೆ. ಈ ವರದಿ ಆಧರಿಸಿ ಆರೋಗ್ಯ ಇಲಾಖೆಯು ರಿಂಗರ್ ಲ್ಯಾಕ್ಟೇಟ್ ದ್ರಾವಣ ಬಳಕೆಯನ್ನು ಈಗಾಗಲೇ ಹಿಂಪಡೆಯಲಾಗಿದೆ. ಮಾನ್ಯ ಮುಖ್ಯಮಂತ್ರಿಗಳು ಬಾಣಂತಿಯರ ಸಾವು ಕುರಿತು ಪರಿಶೀಲನಾ ಸಭೆ ನಡೆಸಿದ್ದಾರೆ. ಸಂತ್ರಸ್ತ ಕುಟುಂಬದವರಿಗೆ 5 ಲಕ್ಷ ಪರಿಹಾರ ಘೋಷಿಸಿದ್ದಾರೆ. ಎಂಎಸ್ ಪಶ್ಚಿಮ ಬಂಗಾಳ ಕಂಪನಿ ಮತ್ತು ಸಂಬಂಧಿಸಿದವರ ವಿರುದ್ಧ ತನಿಖೆ ನಡೆಸಿ ಸೂಕ್ತ ಕ್ರಮವಾಗುವಂತೆ ಪ್ರಕರಣ ಕುರಿತು ಭಾರತ ಸರ್ಕಾರದ ಡ್ರಗ್ ಕಂಟ್ರೋಲರ್ ಜನರಲ್ ಅವರಿಗೆ ಪತ್ರ ಬರೆಯಲಾಗಿದೆ. ಪ್ರಕರಣದ ಹಿನ್ನೆಲೆಯಲ್ಲಿ ನಾನಾ ಕ್ರಮಕ್ಕಾಗಿ ಎಂ.ಕನಗವಲ್ಲಿ ನೇತೃತ್ವದಲ್ಲಿ ಪರಿಶೀಲನಾ ತಂಡ ರಚಿಸಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

ಕೆಲವು ಫಾರ್ಮಾ ಕಂಪನಿಗಳು ನಮ್ಮ ದೇಶಕ್ಕೆ ಒಂದು ರೀತಿ, ವಿದೇಶಕ್ಕೆ ಒಂದು ರೀತಿಯಲ್ಲಿ ಔಷಧಿಯನ್ನು ವಿತರಿಸುತ್ತಿವೆ. ಗುಣಮಟ್ಟದ ಔಷಧಿ ತಯಾರಿಕೆಯ ವಿಷಯದಲ್ಲಿ ಉಂಟಾದ ಏರುಪೇರಿನ ಕಾರಣದಿಂದಲೇ ಬಾಣಂತಿಯರ ಮರಣ ಸಂಭವಿಸಿದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆ.



ಈ ಪ್ರಕರಣವನ್ನು ಎಸ್‌ಐಟಿಗೆ, ಲೋಕಾಯುಕ್ತಕ್ಕೆ ಕೊಡಬೇಕು ಎಂದು ವಿಪಕ್ಷಗಳು ಸದಸ್ಯರ ನೀಡಿದ ಸಲಹೆಯನ್ನು ಪರಿಗಣಿಸಲಾಗುವುದು. ಅತ್ಯಂತ ಗಂಭೀರವಾದ ಈ ಪ್ರಕರಣವನ್ನು ಉನ್ನತ ಮಟ್ಟದ ನ್ಯಾಯಾಂಗ ತನಿಖೆಗೊಳಪಡಿಸಬೇಕು ಎನ್ನುವ ವಿಪಕ್ಷ ಸದಸ್ಯರ ಒತ್ತಾಯದ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ನಿರ್ಣಯಿಸಲಾಗುವುದು ಎಂದು ಸಚಿವರು ತಿಳಿಸಿದರು. ಎಸ್‌ಐಟಿ ತನಿಖೆಗೆ ಒತ್ತಾಯ: ರಿಂಗರ್ ಲ್ಯಾಕ್ಟೇಟ್ ದ್ರಾವಣ ಮಾದರಿ ಪರೀಕ್ಷೆಯಲ್ಲಿ ನಿರ್ಲಕ್ಷ್ಯ ತೋರಿದ್ದಾರೆ ಎಂದು ಔಷಧಿ ನಿಯಂತ್ರಕರಾದ ಡಾ.ಉಮೇಶ್ ಅವರನ್ನು ಅಮಾನತ್ತುಗೊಳಿಸಲಾಗಿದೆ. ಉಮೇಶ ಅವರು ಇತ್ತೀಚೆಗಷ್ಟೇ ಬಂದಿರುತ್ತಾರೆ. ಈ ಪ್ರಕರಣದ ಹಿಂದೆ ಯಾರಿದ್ದಾರೆಂಬುದನ್ನು ಪತ್ತೆ ಹಚ್ಚಿ ಎಸ್ ಐಟಿ ತನಿಖೆಗೊಳಪಡಿಸಬೇಕು ಎಂದು ವಿರೋಧ ಪಕ್ಷದ ನಾಯಕರಾದ ಛಲವಾದಿ ನಾರಾಯಣಸ್ವಾಮಿ ಅವರು ಸದನಕ್ಕೆ ಸಲಹೆ ಮಾಡಿದರು.

ಡ್ರಗ್ ಮಾಫಿಯಾವನ್ನು ಕಂಟ್ರೋಲ್ ಮಾಡಲು ನಾವೇನು ಅಸಹಾಯಕನಲ್ಲ, ಸರ್ಕಾರ ದೊಡ್ಡದು. ದೊಡ್ಡಮಟ್ಟದ ಅಧಿಕಾರಿಗಳ ಶಕ್ತಿ ಇದೆ. ಫಾರ್ಮಾ ಕಂಪನಿಯವರು ಕೋರ್ಟಿಗೆ ಹೋದರು; ಎಷ್ಟೇ ಪ್ರಭಾವಿಗಳಾಗಿದ್ದರು ಸಹ ಅದನ್ನು ನಾವು ಸಮರ್ಥವಾಗಿ ಎದುರಿಸಬೇಕು ಎಂದು ಸಚಿವರಾದ ಭೋಸರಾಜು ಅವರು ತಿಳಿಸಿದರು.

ಬಳ್ಳಾರಿ, ರಾಯಚೂರ, ಸಿಂಧನೂರ ಸೇರಿದಂತೆ ನಾನಾ ಕಡೆ ಸರಣಿ ಸಾವು ಸಂಭವಿಸಿವೆ. ಈ ಬಗ್ಗೆ ಎಚ್ಚರಿಕೆ ವಹಿಸಬೇಕು. ಮತ್ತಷ್ಟು ಜನರು ಸಾವಿಗೀಡಾಗುವ ಮೊದಲೇ ಎಚ್ಚೆತ್ತುಕೊಳ್ಳಬೇಕು. ತಪ್ಪಿತಸ್ಥ ಫಾರ್ಮಾ ಕಂಪನಿಗಳ ಮೇಲೆ ಕಠಿಣ ಕಾನೂನು ಕ್ರಮ ವಹಿಸಬೇಕು. ಈ ಪ್ರಕರಣವನ್ನು ಲೋಕಾಯುಕ್ತ ತನಿಖೆಗೊಳಪಡಿಸಬೇಕು ಎಂದು ಸಿ.ಟಿ. ರವಿ ಅವರು ಆಗ್ರಹಿಸಿದರು.

ಈ ಸಾವುಗಳು ಸ್ವಾಭಾವಿಕವಲ್ಲ. ಕಳಪೆ ಔಷಧಿಯಿಂದಲೇ ಸಾವಿಗೀಡಾಗಿದ್ದಾರೆ ಎಂಬುದು ಸ್ಪಷ್ಟವಾಗಿದ್ದರಿಂದ ಇನ್ಮುಂದೆ ಕಳಪೆ ಔಷಧಿ ಪೂರೈಕೆಯಾಗದಂತೆ ಎಚ್ಚರಿಕೆ ವಹಿಸಬೇಕು. ಸಂತ್ರಸ್ತ ಮಕ್ಕಳ ಜೀವನೋಪಾಯಕ್ಕೆ ಅನುಕೂಲವಾಗಲು ಹೆಚ್ಚಿನ ಮೊತ್ತದ ಪರಿಹಾರ ನೀಡಬೇಕು ಎಂದು ಸದಸ್ಯರಾದ ಭಾರತಿ ಶೆಟ್ಟಿ ಅವರು ಸಲಹೆ ಮಾಡಿದರು.

ಸಿಜೇರಿಯನ್ ಆದ್ಮೆಲೆಯೂ ಬಾಣಂತಿಯರ ಆರಾಮಿದ್ದಾರೆ. ಮಕ್ಕಳಿಗೆ ಹಾಲು ನೀಡಿದ ಬಳಿಕ ಅವರು ತೀರಿದ್ದಾರೆ. ವಿಷಕಾರಿ ದ್ರಾವಣ ಸೇವಿಸಿದ್ದರಿಂದಲೇ ಅವರು ಸಾವನಪ್ಪಿರುವುದು ಸ್ಪಷ್ಟವಾಗುತ್ತದೆ. ಆಸ್ಪತ್ರೆಗಳಲ್ಲಿ

ಬಹುತೇಕ ಸಂದರ್ಭದಲ್ಲಿ ವೈದ್ಯಕೀಯ ಶಿಕ್ಷಣ ಕೋರ್ಸ್ ಓದಲು ಬಂದ ವಿದ್ಯಾರ್ಥಿಗಳಿಂದ ಚಿಕಿತ್ಸೆ ಕೊಡಿಸುವುದು ತಪ್ಪಬೇಕು. ಚಿಕಿತ್ಸೆ ಕೊಡುವ ವೇಳೆ ವೈದ್ಯರಿಗೆ ಫೋಟೊ ಹಾಕುವುದು, ಆ ಫೋಟೊ ನೋಡಿ ಸೂಚಿಸುವ ಔಷಧಿ ನೀಡುವುದು ತಪ್ಪಬೇಕು. ಕಠಿಣ ಸಂದರ್ಭದಲ್ಲಿ ವೈದ್ಯರೆ ಸ್ಥಳದಲ್ಲಿದ್ದು ಚಿಕಿತ್ಸೆ ಕೊಡುವ ಕಾರ್ಯವಾಗಬೇಕು ಎಂದು ಸದಸ್ಯರಾದ ಹೇಮಲತಾ ನಾಯಕ ಅವರು ಸಲಹೆ ಮಾಡಿದರು.

ಔಷಧಿಯ ಗುಣಮಟ್ಟ ಪರೀಕ್ಷಿಸುವ ಕಾರ್ಯ ನಿರಂತರವಾಗಿ ನಡೆಯಬೇಕು. ಈ ವಿಷಯದಲ್ಲಿ ಪ್ರಾಮಾಣಿಕತೆ ಕಾಯ್ದುಕೊಳ್ಳಬೇಕು. ಪ್ರಕರಣವನ್ನು ಎಸ್ ಐಟಿ ತನಿಖೆಗೊಳಪಡಿಸಬೇಕು ಎಂದು ಸದಸ್ಯರಾದ ಎನ್ ರವಿಕುಮಾರ ಅವರು ಸಲಹೆ ಮಾಡಿದರು. ಸದಸ್ಯರಾದ ನವೀನ ಅವರು ಮಾತನಾಡಿ, ಸಹಜ ಹೆರಿಗೆಯನ್ನು ತಪ್ಪಿಸಿ ಮಹಿಳೆಯರನ್ನು ಆಸ್ಪತ್ರೆಗೆ ಕರೆತಂದು ಆಸ್ಪತ್ರೆಯಲ್ಲಿ ಸಿಜೇರಿಯನ್ ಮಾಡಿಸುವ ಪ್ರಕರಣಗಳು ಬೇರೆ ರಾಜ್ಯಗಳಿಗೆ ಹೋಲಿಸಿದರೆ ನಮ್ಮ ರಾಜ್ಯದಲ್ಲಿ ಅತಿ ಹೆಚ್ಚಿನ ಪ್ರಮಾಣದಲ್ಲಿ ಶೆ.40ರಷ್ಟು ನಡೆಯುತ್ತಿವೆ ಎಂದರು. ಈ ಪ್ರಕರಣಗಳ ಬಗ್ಗೆ ನಿಗಾವಹಿಸಿ ಭೇದಿಸಲು ಪ್ರತಿ ಜಿಲ್ಲೆಯಲ್ಲೂ ಟಾಸ್ಕಫೋರ್ಸ ರಚನೆ ಮಾಡಲು ಸಲಹೆ ಮಾಡಿದರು.

ಸದಸ್ಯರಾದ ಟಿ.ಎ.ಶರವಣ ಮಾತನಾಡಿ, ನಮ್ಮ ರಾಜ್ಯದಲ್ಲಿ ಸಹ ಮೆಡಿಕಲ್ ಲಾಬಿ ದೊಡ್ಡಮಟ್ಟದ್ದಿದೆ. ಇದಕ್ಕೆ ಕಡಿವಾಣ ಹಾಕಲೇಬೇಕು. ಕಳಪೆ ಔಷಧಿ ಪೂರೈಕೆಗೆ ಪರೋಕ್ಷವಾಗಿ ಸಹಕಾರ ನೀಡುವ ಅಧಿಕಾರಿಗಳ ಮೇಲೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ಇದಕ್ಕೆ ಕಡಿವಾಣ ಹಾಕಬೇಕು ಎಂದು ತಿಳಿಸಿದರು. ಸದಸ್ಯರಾದ ಡಾ.ಧನಂಜಯ್ಯ ಸರ್ಜಿ, ಕೇಶವ್ ಪ್ರಸಾದ ಹಾಗೂ ಇನ್ನಿತರರು ಮಾತನಾಡಿ, ಕಳಪೆ ಔಷಧಿ ಸರಬರಾಜಿಗೆ ಸಹಕರಿಸುವ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಕೇಸ್ ದಾಖಲಿಸಬೇಕು. ತಾಯಂದಿರ ಜೀವ ಬಲಿ ಪಡೆದ ಈ ಪ್ರಕರಣವನ್ನು ಸಮರ್ಥವಾಗಿ ನಿರ್ವಹಿಸಲು ತಜ್ಞರ ಸಮಿತಿ ರಚಿಸಬೇಕು. ಆರೋಗ್ಯ ಕ್ಷೇತ್ರದಲ್ಲಿ ಆಮೂಲಾಗ್ರ ಬದಲಾವಣೆ ತರಬೇಕು ಎಂದು ಸಭೆಗೆ ಸಲಹೆ ಮಾಡಿದರು.

## ಕ್ರೀಡಾಪಟುಗಳಿಗೆ ನೀಡಲಾಗುವ ಸಹಾಯಧನ ಪರಿಷ್ಕರಣೆಗೆ ಕ್ರಮ– ಸಿ.ಎಂ. ಸಿದ್ದರಾಮಯ್ಯ



ಬೆಳಗಾವಿ ಸುವರ್ಣ ವಿಧಾನಸೌಧ :– ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಸ್ಪರ್ಧಿಸುವ ಕ್ರೀಡಾಪಟುಗಳಿಗೆ ರಾಜ್ಯ ಸರ್ಕಾರದಿಂದ ನೀಡಲಾಗುವ ಸಹಾಯಧನ ಮೊತ್ತವನ್ನು ಹೆಚ್ಚಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು.

ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದ ವಿಧಾನಸಭೆಯಲ್ಲಿ ಮಂಗಳವಾರ ಪ್ರಶ್ನೋತ್ತರ ಕಲಾಪದಲ್ಲಿ ಮಂಗಳೂರು ನಗರ(ಉತ್ತರ) ಕ್ಷೇತ್ರದ ಶಾಸಕ ಡಾ. ಭರತ್ ಶೆಟ್ಟಿ ಅವರು ಕೇಳಿದ ಚುಕ್ಕೆ ಗುರುತಿನ ಪ್ರಶ್ನೆಗೆ ಮುಖ್ಯಮಂತ್ರಿಗಳು ಉತ್ತರ ನೀಡಿದರು. ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಸ್ಪರ್ಧಿಸುವ ವಿದ್ಯಾರ್ಥಿಗಳಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ನೇರವಾಗಿ ಸಹಾಯಧನ ನೀಡುವ ಯಾವುದೇ ಕಾರ್ಯಕ್ರಮವಿರುವುದಿಲ್ಲ. ಆದರೆ ಕರ್ನಾಟಕ ಕ್ರೀಡಾ ಪ್ರಾಧಿಕಾರದಲ್ಲಿ ಮಾನ್ಯತೆ ಪಡೆದ ರಾಜ್ಯ ಕ್ರೀಡಾ ಸಂಸ್ಥೆಗಳು ರಾಷ್ಟ್ರ ಮಟ್ಟದ ಕ್ರೀಡಾಕೂಟಗಳಿಗೆ ಕಳುಹಿಸುವ ವಿದ್ಯಾರ್ಥಿಗಳನ್ನೂ ಒಳಗೊಂಡಂತೆ ರಾಜ್ಯದ ಕ್ರೀಡಾಪಟುಗಳಿಗೆ ಕರ್ನಾಟಕ ಕ್ರೀಡಾ ಪ್ರಾಧಿಕಾರದಿಂದ ಈ ಸಂಸ್ಥೆಗಳ ಮುಖಾಂತರ 2ನೇ ದರ್ಜೆ ರೈಲು/ಬಸ್ ಪ್ರಯಾಣ ದರದ ಪ್ರಯಾಣಭತ್ಯೆ, 200 ರೂ. ದಿನಭತ್ಯೆ, 1000 ರೂ. ಗಳ ಕ್ರೀಡಾಗಂಟು, ಸ್ಥಳೀಯ ಪ್ರಯಾಣ ಶುಲ್ಕ ರೂ. 20 ನೀಡಲಾಗುತ್ತಿದ್ದು, ಪೂರ್ವಭಾವಿ ತರಬೇತಿ ಶಿಬಿರದಲ್ಲಿ ಭಾಗವಹಿಸಿವವರಿಗೂ 200 ರೂ. ಸಹಾಯಧನ ನೀಡಲಾಗುತ್ತಿದೆ. ಕ್ರೀಡಾಪಟುಗಳು ಅಂತರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸಲು ಮಾನ್ಯತೆ ಪಡೆದ ರಾಷ್ಟ್ರೀಯ ಕ್ರೀಡಾ ಫೆಡರೇಷನ್‌ಗಳಿಗೆ ಭಾರತ ಸರ್ಕಾರ ಅನುದಾನ ಒದಗಿಸುತ್ತಿದೆ. ಮಾನ್ಯತೆ ಪಡೆದ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಪದಕ ವಿಜೇತರಾದ ಕರ್ನಾಟಕದ ಕ್ರೀಡಾಪಟುಗಳಿಗೆ ನಗದು ಬಹುಮಾನ ಗರಿಷ್ಠ 5000 ರೂ. ಮಿತಿಗೆ ಒಳಪಟ್ಟು ಶೈಕ್ಷಣಿಕ ಶುಲ್ಕ ಮರುಪಾವತಿ ರೂಪದಲ್ಲಿ ಪ್ರೋತ್ಸಾಹಧನ ನೀಡಲಾಗುತ್ತಿದೆ ಹಾಗೂ ಹೆಚ್ಚುವರಿಯಾಗಿ ಇಲಾಖೆಯ ಕ್ರೀಡಾ ವಸತಿ ನಿಲಯದ ವಿದ್ಯಾರ್ಥಿ/ತರಬೇತುದಾರರಿಗೆ ವಿಶೇಷ ನಗದು ಪ್ರೋತ್ಸಾಹಧನ ನೀಡಲಾಗುತ್ತಿದೆ ಎಂದು ಮುಖ್ಯಮಂತ್ರಿಗಳು ಉತ್ತರ ನೀಡಿದರು.

ಕ್ರೀಡಾಪಟುಗಳಿಗೆ ಉತ್ತಮ ಪ್ರಯಾಣ ಭತ್ಯೆ ಸೇರಿದಂತೆ ಸಹಾಯಧನ ಹೆಚ್ಚಿಸಿದಲ್ಲಿ ನಮ್ಮ ರಾಜ್ಯದ ಮಕ್ಕಳು ಕ್ರೀಡೆಯಲ್ಲಿ ಇನ್ನಷ್ಟು ಸಾಧನೆ ಮಾಡಿ ಹೆಚ್ಚು ಹೆಚ್ಚು ಪದಕ ಗಳಿಸಲು ಸಾಧ್ಯವಾಗಲಿದೆ ಎಂದು ಶಾಸಕ ಭರತ್ ಶೆಟ್ಟಿ ಮನವಿ ಮಾಡಿದರು. ಇದಕ್ಕೆ ಸ್ಪಂದಿಸಿದ ಮುಖ್ಯಮಂತ್ರಿಗಳು ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಸ್ಪರ್ಧಿಸುವ ಕ್ರೀಡಾಪಟುಗಳಿಗೆ ನೀಡಲಾಗುತ್ತಿರುವ ಭತ್ಯೆ ಹಾಗೂ ಸಹಾಯಧನ ಐದು ವರ್ಷಗಳ ಹಿಂದೆ ನಿಗದಿ ಮಾಡಿದ್ದು, ಈವರೆಗೆ ಪರಿಷ್ಕರಣೆಗೊಂಡಿಲ್ಲ ಹೀಗಾಗಿ ಈ ಬಾರಿ ಕ್ರೀಡಾಪಟುಗಳ ಭತ್ಯೆ ಹಾಗೂ ಸಹಾಯಧನ ಹೆಚ್ಚಳ ಮಾಡಲು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

### ಆನ್‌ಲೈನ್ ಬೆಟ್ಟಿಂಗ್ ಗೇಮ್: ಕಡಿವಾಣಕ್ಕೆ ನಿರಂತರ ಪ್ರಯತ್ನ–ಗೃಹ ಸಚಿವ ಡಾ.ಜಿ.ಪರಮೇಶ್ವರ

ಬೆಳಗಾವಿ ಸುವರ್ಣಸೌಧ :ಆನ್‌ಲೈನ್ ಬೆಟ್ಟಿಂಗ್ ಗೇಮ್‌ಗಳ ಸಂಸ್ಥೆಗಳ ನಿರ್ಬಂಧಕ್ಕೆ ರಾಜ್ಯ ಉಚ್ಚನ್ಯಾಯಾಲಯ ತಡೆಯಾಜ್ಞೆ ನೀಡಿದೆ. ಈ ಆದೇಶ ಪ್ರಶ್ನಿಸಿ ರಾಜ್ಯ ಸರ್ಕಾರ ಸರ್ವೋಚ್ಛ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿದೆ. ನ್ಯಾಯಾಲಯ ತಡೆಯಾಜ್ಞೆ ಇದೆ ಎಂದು ಸರ್ಕಾರ ಸುಮ್ಮನೆ ಕೂತಿಲ್ಲ. ಕಾನೂನು ಪ್ರಕಾರ ನಿರಂತರವಾಗಿ ಆನ್‌ಲೈನ್ ಬೆಟ್ಟಿಂಗ್ ಗೇಮ್ ಕಡಿವಾಣಕ್ಕೆ ಪ್ರಯತ್ನ ಮಾಡುತ್ತಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ಹೇಳಿದರು.

ಮಂಗಳವಾರ ವಿಧಾನ ಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಶಾಸಕ ಎಸ್.ಜೆ.ಸೋಮಶೇಖರ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಗೃಹ ಸಚಿವರು ಉತ್ತರಿಸಿ ಮಾತನಾಡಿದರು.

ಹೆಚ್ಚಿನ ಪ್ರಮಾಣದಲ್ಲಿ ಯುವ ಪೀಳಿಗೆ ಆನ್‌ಲೈನ್ ಗೇಮ್‌ಗಳ ವ್ಯಸನಕ್ಕೆ ತುತ್ತಾಗುತ್ತಿದ್ದರೆ. ಆನ್‌ಲೈನ್ ಗೇಮ್ ದೊಡ್ಡ ಪಿಡುಗಾಗಿ ಪರಿಣಮಿಸಿದೆ. ಇದರ ತಡೆಗೆ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರಗಳು ಕಠಿಣ ಕಾನೂನುಗಳನ್ನು ಜಾರಿ ಮಾಡಬೇಕಿದೆ. ಬೆಂಗಳೂರು ನಗರದಲ್ಲಿ 5 ಹಾಗೂ ವಿಜಯನಗರದಲ್ಲಿ ಒಬ್ಬರು ಆನ್‌ಲೈನ್ ಬೆಟ್ಟಿಂಗ್ ಆಟದ ದಂಧೆಗೆ ಸಿಲುಕಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಸಾಫ್ಟವೇರ್ ಉದ್ಯೋಗಿಗಳು ಇದರ ಚಟಕ್ಕೆ ಬಲಿಯಾಗುತ್ತಿರುವುದು ದುರದೃಷ್ಟಕರ ಎಂದರು.

ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಸೇರಿದಂತೆ ಹಲವು ಶಾಸಕರು ನ್ಯಾಯಾಲಯದ ತಡೆಯಾಜ್ಞೆ ತೆರವುಗೊಳಿಸಿ ಆನ್‌ಲೈನ್ ಗೇಮ್‌ಗಳನ್ನು ನಿಷೇಧಿಸಬೇಕು ಎಂದರು.

### ಎಸ್.ಸಿ, 189 ಎಸ್.ಟಿ ಮತ್ತು 2,351 ಒಬಿಸಿ ಫಲಾನುಭವಿಗಳ 5,177 ಸೂಕ್ಷ್ಮ ಆಹಾರ ಸಂಸ್ಕರಣಾ ಘಟಕಗಳಿಗೆ ಸಾಲಗಳ ಮಂಜೂರು

ಮೂಡಲಗಿ : ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಘಟಕ ಯೋಜನೆಯಡಿ ಕರ್ನಾಟಕ ರಾಜ್ಯದಲ್ಲಿ 375 ಎಸ್.ಸಿ, 189 ಎಸ್.ಟಿ ಮತ್ತು 2,351 ಒಬಿಸಿ ಫಲಾನುಭವಿಗಳ 5,177 ಸೂಕ್ಷ್ಮ ಆಹಾರ ಸಂಸ್ಕರಣಾ ಘಟಕಗಳಿಗೆ ಸಾಲಗಳನ್ನು ಮಂಜೂರು ಮಾಡಲಾಗಿದೆ ಮತ್ತು ಸುಮಾರು 21,852 ನೇರ/ಪರೋಕ್ಷ ಉದ್ಯೋಗಗಳನ್ನು ಸೃಷ್ಟಿಸಲಾಗಿದೆ ಎಂದು ಕೇಂದ್ರ ಆಹಾರ ಸಂಸ್ಕರಣಾ ಕೈಗಾರಿಕೆಗಳ ರಾಜ್ಯ ಸಚಿವ ರವನೀತ್ ಸಿಂಗ್ ಅವರು ಲಿಖಿತ ಉತ್ತರದಲ್ಲಿ ಮಾಹಿತಿ ನೀಡಿದ್ದಾರೆ ಎಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ತಿಳಿಸಿದ್ದಾರೆ.

ನವದೆಹಲಿಯಲ್ಲಿ ನಡೆಯುತ್ತಿರುವ ಚಳಿಗಾಲ ಅಧಿವೇಶನದಲ್ಲಿ ಕರ್ನಾಟಕ ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಆಹಾರ ಸಂಸ್ಕರಣಾ ಘಟಕಗಳ ಯೋಜನೆಯ ಅನುಷ್ಠಾನದ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಘಟಕ ಯೋಜನೆಯನ್ನು ದೇಶದಲ್ಲಿನ ಸೂಕ್ಷ್ಮ ಆಹಾರ ಸಂಸ್ಕರಣಾ ಉದ್ಯಮಗಳ ಉನ್ನತೀಕರಣಕ್ಕಾಗಿ ಆರ್ಥಿಕ, ತಾಂತ್ರಿಕ ಮತ್ತು ವಾಣಿಜ್ಯ ಸಹಾಯವನ್ನು ಒದಗಿಸಲು ಜಾರಿಗೊಳಿಸುತ್ತಿದೆ. ಈ ಯೋಜನೆಯು 2020–21 ರಿಂದ 2025–26 ರವರೆಗೆ 10,000 ಕೋಟಿ ರೂ. ಅನುದಾನ ನೀಡಲಾಗಿದೆ. ದೇಶದಲ್ಲಿ 9,298 ಎಸ್.ಸಿ, 5,201 ಎಸ್.ಟಿ ಮತ್ತು 56,540 ಒಬಿಸಿ ಫಲಾನುಭವಿಗಳಿಗೆ 1,08,580 ಸೂಕ್ಷ್ಮ ಆಹಾರ ಸಂಸ್ಕರಣಾ ಘಟಕಗಳಿಗೆ ಸಾಲಗಳನ್ನು ಮಂಜೂರು ಮಾಡಲಾಗಿದೆ ಮತ್ತು ಸುಮಾರು 3,78,004 ಉದ್ಯೋಗಗಳನ್ನು ಸೃಷ್ಟಿಸಲಾಗಿದೆ ಎಂದರು.

ಆಹಾರ ಸಂಸ್ಕರಣೆ ಮತ್ತು ಸಂರಕ್ಷಣೆ ಸಾಮರ್ಥ್ಯ ಸೃಷ್ಟಿ/ವಿಸ್ತರಣೆ ಯೋಜನೆಯಡಿ ಕರ್ನಾಟಕ ರಾಜ್ಯಕ್ಕೆ 14 ಯೋಜನೆಗಳನ್ನು ಅನುಮೋದಿಸಲಾಗಿದೆ. ಮೆಗಾ ಫುಡ್ ಪಾರ್ಕ್ ಯೋಜನೆಯಡಿ ಕರ್ನಾಟಕ ರಾಜ್ಯಕ್ಕೆ 2 ಯೋಜನೆಗಳನ್ನು ಅನುಮೋದಿಸಲಾಗಿದೆ, ಇದು ಸರಿಸುಮಾರು 5620 ನೇರ/ಪರೋಕ್ಷ ಉದ್ಯೋಗಗಳನ್ನು ಸೃಷ್ಟಿಸುತ್ತದೆ. 726 ಜಿಲ್ಲೆಗಳಿಗೆ ಒಂದು ಜಿಲ್ಲೆ ಒಂದು ಉತ್ಪನ್ನವನ್ನು ಅನುಮೋದಿಸಿದೆ.

ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಘಟಕ ಯೋಜನೆಯಡಿ ಯೋಜನಾ ವೆಚ್ಚದ 35% ದರದಲ್ಲಿ ಕ್ರೆಡಿಟ್ ಲಿಂಕ್ಡ್ ಕ್ಯಾಪಿಟಲ್ ಸಬ್ಸಿಡಿ, ಪ್ರತಿ ಯೂನಿಟ್‌ಗೆ ಗರಿಷ್ಠ 10 ಲಕ್ಷ ರೂ. ಹಣಕಾಸಿನ ಸಹಾಯವನ್ನು ನೀಡಲಾಗುತ್ತದೆ. ಸ್ವಸಹಾಯ ಗುಂಪುಗಳ ಪ್ರತಿ ಸದಸ್ಯರಿಗೆ ರೂ 40,000 ದರದಲ್ಲಿ ಆರಂಭಿಕ ಬಂಡವಾಳ, ಸ್ವಸಹಾಯ ಗುಂಪುಗಳ ಒಕ್ಕೂಟಕ್ಕೆ ಗರಿಷ್ಠ ರೂ 4 ಲಕ್ಷ. ರೂ.ಗೆ ಒಳಪಟ್ಟಿರುತ್ತದೆ. ಎಫ್‌ಪಿಒಗಳು, ಎಸ್‌ಎಚ್‌ಜಿಗಳು, ಸಹಕಾರಿ ಸಂಘಗಳು ಅಥವಾ ಮೈಕ್ರೋ ಫುಡ್ ಪ್ರೊಸೆಸಿಂಗ್ ಎಂಟರ್‌ಪ್ರೈಸಸ್‌ಗಳ ಬ್ರ್ಯಾಂಡಿಂಗ್ ಮತ್ತು ಮಾರ್ಕೆಟಿಂಗ್‌ಗಾಗಿ 50% ವರೆಗೆ ಅನುದಾನ ನೀಡಲಾಗುತ್ತದೆ ಎಂದು ಸಚಿವರು ಉತ್ತರಿಸಿದ್ದಾರೆಂದು ಸಂಸದ ಈರಣ್ಣ ಕಡಾಡಿ ತಿಳಿಸಿದ್ದಾರೆ.

### ರೂ.5317.83 ಕೋಟಿ ಪೂರಕ ಅಂದಾಜು ಬೇಡಿಕೆಗೆ ವಿಧಾನಸಭೆ ಒಪ್ಪಿಗೆ
## ಕರ್ನಾಟಕ ಧನವಿನಯೋಗ ಸಂಖ್ಯೆ–5 ವಿಧೇಯಕ–2024 ಅಂಗೀಕಾರ

ಬೆಳಗಾವಿ ಸುವರ್ಣಸೌಧ: ರಾಜ್ಯ ಸರ್ಕಾರ ವಿಧಾನಸಭೆ ಮುಂದೆ ಮಂಡಿಸಿದ ರೂ.5317.83 ಕೋಟಿ ರೂಪಾಯಿ ಪೂರಕ ಅಂದಾಜುಗಳು ಎರಡನೇ ಕಂತಿನ ಬೇಡಿಕೆಗೆ ವಿಧಾನಸಭೆಯು ಒಪ್ಪಿಗೆ ನೀಡಿತು. ಇದರ ಅಂಗವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಂಡಿಸಿದ ಕರ್ನಾಟಕ ಧನವಿನಯೋಗ ಸಂಖ್ಯೆ–5 ವಿಧೇಯಕ–2024 ಮಂಗಳವಾರ ವಿಧಾನಸಭೆಯಲ್ಲಿ ಅಂಗೀಕಾರವಾಯಿತು.

ಪೂರಕ ಅಂದಾಜುಗಳ ಬೇಡಿಕೆ ಕುರಿತು ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಧನ ವಿನಯೋಗ ಅಧಿನಿಯಮದ ಆಧಾರದಲ್ಲಿ,

ಪ್ರಸಕ್ತ ಆರ್ಥಿಕ ವರ್ಷದಲ್ಲಿ ಹೊಸ ಸೇವೆ ಹಾಗೂ ವಿವಿಧ ಇಲಾಖೆಗಳಿಗೆ ಹೆಚ್ಚಿನ ಪೂರಕ ಅನುದಾನ ಅಥವಾ ಹೆಚ್ಚಿನ ವೆಚ್ಚವನ್ನು ಭರಿಸುವ ಸಲುವಾಗಿ ರಾಜ್ಯ ವಿಧಾನ ಮಂಡಲದ ಮುಂದೆ ಸಂವಿಧಾನದ 205(1)(ಎ)ರ ಅನುಚ್ಛೇದದಲ್ಲಿ ನೀಡಿರುವ ಅವಕಾಶ ಬಳಸಿಕೊಂಡು 2024–



25ನೇ ಸಾಲಿನ ಪೂರಕ ಅಂದಾಜುಗಳ ಎರಡನೇ ಕಂತಿನ ಬೇಡಿಕೆಗಳನ್ನು ಮಂಡಿಸಿಲಾಗಿದೆ. ಈ ಪೂರಕ ಅಂದಾಜು ಮೂಲ ಆಯವ್ಯಯ ಗಾತ್ರದ ಶೇ.1.39 ರಷ್ಟಿದೆ.

ರೂ.5317.83 ಕೋಟಿ ಪೂರಕ ಅಂದಾಜಿನಲ್ಲಿ ರಾಜಸ್ವ ವೆಚ್ಚ ರೂ.2540.17 ಕೋಟಿ ಹಾಗೂ ಬಂಡವಾಳ ವೆಚ್ಚ ರೂ.2777.66 ಕೋಟಿ ಸೇರಿದೆ.

ಪೂರಕ ಅಂದಾಜಿಗೆ ವ್ಯಯಿಸುವ ಹಣದಲ್ಲಿ ರೂ.2304.95 ಕೋಟಿ ರಾಜಸ್ವ ಸ್ವೀಕೃತ ನಿಧಿ ಹಾಗೂ ರೂ.1199.94 ಕೋಟಿ ಕೇಂದ್ರ ಸಹಾಯದ ಮೊತ್ತಗಳು ಸೇರಿವೆ. ಉಳಿದದ್ದು ರೂ.1812.94 ಕೋಟಿ ನಿವ್ವಳ ನಗದು ಮೊತ್ತವಾಗಿವೆ. ಪೂರಕ ಅಂದಾಜಿನ ಬೇಡಿಕೆಯಲ್ಲಿ ರೂ.100 ಕೋಟಿಗಿಂತಲೂ ಹೆಚ್ಚಿನ ಅನುದಾನವನ್ನು ವಿಚಾರಗಳಿಗೆ ಖರ್ಚು ಮಾಡಲಾಗುತ್ತಿದೆ. ಗ್ರಾಮೀಣ ರಸ್ತೆಗೆ ರೂ.500 ಕೋಟಿ, ರಿಂಗ್ ರೋಡ್ ನಿರ್ಮಾಣಕ್ಕೆ ರೂ.456 ಕೋಟಿ, ಗ್ರಾಮ ಪಂಚಾಯಿತಿಗಳ ವಿದ್ಯುತ್ ಬಾಕಿ ಮೊತ್ತ ಪಾವತಿಸಲು ರೂ.400 ಕೋಟಿ, ಜಿಲ್ಲಾ ರಸ್ತೆಗಳ ಅಭಿವೃದ್ಧಿಗೆ ರೂ.393 ಕೋಟಿ, ವಸತಿ ಶಾಲೆಗಳಿಗೆ ರೂ.250 ಕೋಟಿ, ಪರಿಶಿಷ್ಟ ಜಾತಿಗಳ ಅಭಿವೃದ್ಧಿಗೆ ರೂ.241 ಕೋಟಿ, ಪಿ.ಎಂ.ಆವಾಸ್ ಯೋಜನೆಗೆ ರೂ.218 ಕೋಟಿ, ಹಾಲು ಉತ್ಪಾದಕರ ಸಹಾಯಕ ಧನಕ್ಕೆ ರೂ.100 ಕೋಟಿ ಸೇರಿದಂತೆ ವಿವಿಧ ಇಲಾಖೆಗಳಿಗೆ ಅನುದಾನ ಒದಗಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸದನದಲ್ಲಿ ತಿಳಿಸಿದರು. ನಂತರ ಕರ್ನಾಟಕ ಧನವಿನಯೋಗ ಸಂಖ್ಯೆ–5 ವಿಧೇಯಕ–2024ವನ್ನು ಸದನದ ಅಂಗೀಕಾರಕ್ಕೆ ಮಂಡಿಸಿದರು.

ನಂತರ ವಿಧಾನ ಸಭೆಯು ಧ್ವನಿಮತದ ಮೂಲಕ ಪೂರಕ ಅಂದಾಜು ಬೇಡಿಕೆ ಹಾಗೂ ಧನವಿನಯೋಗ ವಿಧೇಯಕಕ್ಕೆ ಅಂಗೀಕಾರ ನೀಡಿತು.

*****

## ಸದನದಲ್ಲಿ ಸಚಿವ ಕೃಷ್ಣ ಬೈರೇಗೌಡ ಮಾಹಿತಿ ಆದ್ಯತೆ ಮೇರೆಗೆ ಭದ್ರಾ ಮೇಲ್ದಂಡೆ ಯೋಜನೆ ಮೊದಲ ಹಂತ ಪೂರ್ಣ



ಬೆಳಗಾವಿ ಸುವರ್ಣಸೌಧ :ಮಧ್ಯ ಕರ್ನಾಟಕ ಭಾಗದ ಬಹುದಿನದ ಬೇಡಿಕೆಯಾದ ಭದ್ರಾ ಮೇಲ್ದಂಡೆ ಯೋಜನೆಯ ಮೊದಲನೆ ಹಂತವನ್ನು ಆದ್ಯತೆ ಮೇರೆಗೆ ಪೂರ್ಣಗೊಳಿಸುವುದಾಗಿ ಸಚಿವ ಕೃಷ್ಣ ಬೈರೇಗೌಡ ಅವರು ಮಾಹಿತಿ ನೀಡಿದರು.

ಮಂಗಳವಾರ ವಿಧಾನ ಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಶಾಸಕ ಎಂ.ಚಂದ್ರಪ್ಪನವರ ಚುಕ್ಕೆ ಗುರುತಿನ ಪ್ರಶ್ನೆಗೆ ಉಪ ಮುಖ್ಯಮಂತ್ರಿಗಳ ಪರವಾಗಿ ಅವರು ಉತ್ತರಿಸಿದರು.

2003ರಲ್ಲಿ ಯೋಜನೆಗೆ ರೂ.2813 ಕೋಟಿ ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿತ್ತು. ನಂತರ 2015 ರಲ್ಲಿ ಯೋಜನೆಯ ಪರಿಷ್ಕೃತ ಮೊತ್ತ ರೂ.12340 ಕೋಟಿಗೆ ಸರ್ಕಾರ ಅನುಮೋದನೆ ನೀಡಿದೆ. 2020 ರಲ್ಲಿ ಪರಿಷ್ಕೃತ ಯೋಜನೆ ಮೊತ್ತ ರೂ.21473.67 ಕೋಟಿಗೆ ಏರಿಕೆಯಾಗಿದೆ. ಇದಕ್ಕೆ ತಕ್ಕಹಾಗೆ ಯೋಜನೆಯ ಮೂಲ ವ್ಯಾಪ್ತಿ ವಿಸ್ತೀರ್ಣ ಹಾಗೂ ಕುಡಿಯುವ ನೀರಿನ ಯೋಜನೆಗಳು ಸಹ ಸೇರ್ಪಡೆಯಾಗಿವೆ. 2027–28ನೇ ಸಾಲಿನ ಮಾರ್ಚ್ ಅಂತ್ಯಕ್ಕೆ ಯೋಜನೆ ಪೂರ್ಣಗೊಳಿಸಲು ಉದ್ದೇಶಿಸಲಾಗಿದ್ದು, ಇನ್ನೂ ರೂ.11,358.54 ಕೋಟಿ ಅನುದಾನ ಬೇಕಾಗುತ್ತದೆ. ಕೇಂದ್ರ ಸರ್ಕಾರ ಆಯವ್ಯಯದಲ್ಲಿ ಘೋಷಿಸಿದಂತೆ ರೂ.5300 ಕೋಟಿ ಅನುದಾನವನ್ನು ಇನ್ನೂ ಬಿಡುಗಡೆ ಮಾಡಿಲ್ಲ. ಅನುದಾನ ಲಭಿಸಿದರೆ ಯೋಜನೆ ಪೂರ್ಣಗೊಳಿಸಲು ಸಹಾಯವಾಗಲಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಹೇಳಿದರು.

1957 ರಲ್ಲಿ ದಿವಂಗತ ಮಾಜಿ ಮುಖ್ಯಮಂತ್ರಿ ನಿಜಲಿಂಗಪ್ಪನವರು ಮಧ್ಯ ಕರ್ನಾಟಕ ಬರ ಪೀಡಿತ ಜಿಲ್ಲೆಗಳಿಗೆ ನೀರನ್ನು ನೀಡಲು ಮಹತ್ವಾಂಕ್ಷೆ ಭದ್ರಾ ಯೋಜನೆಯ ಬಗ್ಗೆ ಚಿಂತಿಸಿದ್ದರು.

2003ರಲ್ಲಿ ಅನುಮೊದನೆ ನೀಡಿದ ಯೋಜನಾ ವೆಚ್ಚ ಇಂದು 21473.67 ಕೋಟಿಗಳಷ್ಟು ಹೆಚ್ಚಾಗಿದೆ. ಇನ್ನೂ ತಡವಾದರೆ ಎಸ್.ಆರ್. ರೇಟ್ ಏರಿಕೆಯಾಗಿ ಯೋಜನೆ ವೆಚ್ಚವು ಇನ್ನೂ ಹೆಚ್ಚಾಗಲಿದೆ. ಪಕ್ಕದ ತೆಲಂಗಾಣ ರಾಜ್ಯದಲ್ಲಿನ ಸರ್ಕಾರ 5 ವರ್ಷದಲ್ಲಿ ರೂ.1.20 ಲಕ್ಷ ಕೋಟಿ ಖರ್ಚು ಮಾಡಿ 18 ಸಾವಿರ ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಕಲ್ಪಿಸಿದೆ. ರಾಜ್ಯವೂ ಸಹ ಇಂತಹದೇ ಇಚ್ಛಾ ಶಕ್ತಿಯನ್ನು ಪ್ರದರ್ಶಿಸಬೇಕು. ಕೇಂದ್ರ ಸರ್ಕಾರ ಘೋಷಿಸಿದ ಅನುದಾನ ನೀಡಿಲ್ಲ ಎಂದು ನೆಪ ಹೇಳದೆ, ರಾಜ್ಯ ಸರ್ಕಾರವೇ ಅನುದಾನ ನೀಡಿ ಯೋಜನೆ ಪೂರ್ಣಗೊಳಿಸಬೇಕು ಎಂದರು.

# ಪ್ರತಿ ವರ್ಷ ಎರಡೂವರೆ ಲಕ್ಷ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ವ್ಯವಸ್ಥೆ: ಸಚಿವ ಶಿವರಾಜ್ ತಂಗಡಗಿ

ಬೆಳಗಾವಿ (ಸುವರ್ಣಸೌಧ), : ಪ್ರತಿ ವರ್ಷ ಎರಡೂವರೆ ಲಕ್ಷ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ವ್ಯವಸ್ಥೆ ಕಲ್ಪಿಸಲಾಗುತ್ತಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ್ ತಂಗಡಗಿ ಅವರು ಹೇಳಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಬೆಳಗಾವಿಯ ಸುವರ್ಣಸೌಧದ ಆಡಿಟೋರಿಯಂನಲ್ಲಿ ಮಂಗಳವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ 150 ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಪ್ರಾರಂಭಕ್ಕೆ ಸಚಿವರು ಆನ್ಲೈನ್ ಮೂಲಕ ಚಾಲನೆ ನೀಡಿ ಮಾತನಾಡಿದರು.

ಪ್ರತಿ ವರ್ಷ ಮೂರು ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಹಾಸ್ಟೆಲ್ ಗೆ ಅರ್ಜಿ ಸಲ್ಲಿಸುತ್ತಾರೆ. 2.46,000 ಮಕ್ಕಳಿಗೆ ಹಾಸ್ಟೆಲ್ ವ್ಯವಸ್ಥೆ ಕಲ್ಪಿಸಲಾಗುತ್ತಿದ್ದು, ಉಳಿದ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಯೋಜನೆಯಡಿ ನೆರವು ನೀಡಲಾಗುತ್ತಿದೆ ಎಂದು ತಿಳಿಸಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಸ್ಟೆಲ್ ನಲ್ಲಿರುವ ವಿದ್ಯಾರ್ಥಿಗಳು ರೈತ, ಬಡ ಹಾಗೂ ಕಾರ್ಮಿಕ ಕುಟುಂಬದಿಂದ ಬಂದವರಾಗಿದ್ದು, ಹಾಸ್ಟೆಲ್ ನ ಸೌಲಭ್ಯವನ್ನು ಪಡೆದು ಉನ್ನತ ಹುದ್ದೆಗೇರಬೇಕು. ನಾವು




ಓದುವ ಕಾಲಘಟ್ಟದಲ್ಲಿ ನಾಲ್ಕೈದು ಕಿ.ಮೀ ನಡೆದು ಪ್ರೌಢ ಶಾಲೆ ವ್ಯಾಸಂಗ ಮುಗಿಸಿದೆವು. ಆದರೆ ಇಂದು ಸರ್ಕಾರ ಹಾಸ್ಟೆಲ್ ವಸತಿ ಮಾತ್ರವಲ್ಲ. ಮೂಲಸೌಲಭ್ಯ, ಪುಸ್ತಕ, ಗ್ರಂಥಾಲಯದ ವ್ಯವಸ್ಥೆಯನ್ನು ಮಾಡಿದೆ. ಹಾಸ್ಟೆಲ್ ನಲ್ಲಿ ಉತ್ತಮ ಗುಣಮಟ್ಟದ ಆಹಾರ, ಹಾಸ್ಟೆಲ್ ನವೀಕರಣ, ಪುಸ್ತಕ ವಿತರಣೆ, ಗ್ರಂಥಾಲಯದ ವ್ಯವಸ್ಥೆ ಎಲ್ಲವನ್ನು ಕಲ್ಪಿಸಲಾಗುತ್ತಿದ್ದು, ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಮಾಜಿ ಮುಖ್ಯಮಂತ್ರಿ ದಿವಗಂತ ಡಿ.ದೇವರಾಜ ಅರಸು ಅವರನ್ನು ನಾವು ನೆನಪು ಮಾಡಿಕೊಳ್ಳಬೇಕು. ಅರಸು ಅವರು ಹಿಂದುಳಿದ ವರ್ಗದವರ ಬಗ್ಗೆ ಅಪಾರ ಕಾಳಜಿ ಹೊಂದಿದ್ದರು. ಇಂದು ನಮ್ಮ ಮುಖ್ಯಮಂತ್ರಿಗಳು ಬಡ, ದೀನ ದಲಿತರ ಬಗ್ಗೆ ವಿಶೇಷ ಕಾಳಜಿ ಹೊಂದಿದ್ದವರಾಗಿದ್ದಾರೆ. ಈ ರಾಜ್ಯದಲ್ಲಿ ಸಾಮಾಜಿಕ ನ್ಯಾಯದಡಿ ಹೆಜ್ಜೆ ಇಟ್ಟಿರುವ ಮುಖ್ಯಮಂತ್ರಿ ಯಾರಾದರೂ ಇದ್ದಾರೆ ಅದು ಸಿದ್ದರಾಮಯ್ಯ ಅವರು ಮಾತ್ರ ಎಂದು ಸಚಿವರು ಮೆಚ್ಚುಗೆ ವ್ಯಕ್ತಪಡಿಸಿದರು.

ಕಷ್ಟ ಅನುಭವಿಸಿದವರಿಗೆ ಹಾಸ್ಟೆಲ್ ಜೀವನ ಎಂಬುದು ಗೊತ್ತು. ಪ್ರತಿಯೊಬ್ಬರು ಶಿಕ್ಷಣವಂತರಾಗಬೇಕು ಎಂಬುದು ಸರ್ಕಾರದ ಉದ್ದೇಶ. ಶ್ರದ್ಧೆಯಿಂದ ವಿದ್ಯಾರ್ಥಿಗಳು ವಿದ್ಯಾಭ್ಯಾಸ ಪಡೆದು ಸಂಸ್ಕಾರವಂತರಾಗಬೇಕು ಎಂದರು.

ವಿದ್ಯಾರ್ಥಿಗಳಿಗೆ ವಾರ್ಡನ್ ಹಾಗೂ ಶಿಕ್ಷಕರು ಸೂಕ್ತ ಮಾರ್ಗದರ್ಶನ ಮಾಡಿದರೆ, ಆ ಮಕ್ಕಳು ಜೀವನ ಪರ್ಯಂತ ನಿಮ್ಮನ್ನು ನೆನೆಸುತ್ತಾರೆ. ಇನ್ನು ವಿದ್ಯಾರ್ಥಿಗಳು ಎಷ್ಟು ಎತ್ತರಕ್ಕೆ ಬೆಳೆದ್ರು, ಶಿಕ್ಷಕರಾದವರು ಹಾಗೆಯೇ ಇರುತ್ತಾರೆ. ಹೀಗಾಗಿ ಶಿಕ್ಷಣ ನೀಡಿದ ಶಿಕ್ಷಕರನ್ನು ಮರೆಯಬಾರದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಇಲಾಖಾ ಕಾರ್ಯದರ್ಶಿ ಸಂಜಯ್ ಶೆಟ್ಟಣ್ಣನವರ್, ಆಯುಕ್ತರಾದ ಶ್ರೀನಿವಾಸ್, ಜಂಟಿ ನಿರ್ದೇಶಕರಾದ ಜಿ.ಜಗದೀಶ್, ಡಾ.ಸಿ.ಕೆ. ಜಗದೀಶ್ ಕುಮಾರ್, ಪ್ರದೀಪ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

********

### ಇಲಾಖೆಯಿಂದ ಓದು ಮುಂದುವರೆಸಿದ್ದೀನಿ

ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಸ್ಟೆಲ್ ವಿದ್ಯಾರ್ಥಿನಿ ಸ್ವಾತಿ ಮಾತನಾಡಿ, ನಮ್ಮಂತಹ ಲಕ್ಷಾಂತರ ಬಡ ಕುಟುಂಬದ ವಿದ್ಯಾರ್ಥಿಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಸ್ಟೆಲ್ ನೆರವಾಗಿದೆ. ಕೃಷಿ ಕುಟುಂಬದಿಂದ ಬಂದ ನಮಗೆ ವಿದ್ಯಾಭ್ಯಾಸ ಪಡೆಯುವುದು ದೂರುವಾಗಿತ್ತು. ನಮಗೆ ನಮ್ಮ ಪೋಷಕರು ವಿದ್ಯಾಭ್ಯಾಸ ಬೇಡ ಎಂದು ಹೇಳಿದ್ರು. ಕಾಲೇಜಿಗೆ ಓಡಾಡುವುದೇ ಕಷ್ಟವಾಗಿತ್ತು. ಖಾಸಗಿ ಪಿ.ಜಿ.ಯಲ್ಲಿ ಉಳಿದು ಅದಕ್ಕೆ ಹಣ ಪಾವತಿಸುವುದು ಕಷ್ಟ ಎಂದ ಹೇಳಿದ್ರು. ಆದರೆ ನನಗೆ ಇಲಾಖೆಯ ಹಾಸ್ಟೆಲ್ ನಿಂದ ವ್ಯಾಸಂಗಕ್ಕೆ ಅನುಕೂಲವಾಗಿದೆ ಎಂದು ಸಚಿವರು ಹಾಗೂ ಸರ್ಕಾರಕ್ಕೆ ವಿದ್ಯಾರ್ಥಿನಿ ಧನ್ಯವಾದಗಳನ್ನು ತಿಳಿಸಿದರು.

## ಬಿರುಸಿನ ಚುನಾವಣೆಯಲ್ಲಿ ಮಹಾಂತೇಶ ದೊಡ್ಡಗೌಡರ ಬೆಂಬಲಿಗರಿಗೆ ಪಿಕೆಪಿಎಸ್ ಗದ್ದುಗೆ



ನೇಸರಗಿ : ಇಲ್ಲಿಗೆ ಸಮೀಪದ ನಾಗನೂರ ವಿವಿದ್ದೋದೇಶಗಳ ಪ್ರಾಥಮಿಕ ಗ್ರಾಮೀಣ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ನಡೆದ ೧೨ ಜನ ಆಡಳಿತ ಮಂಡಳಿ ಸದಸ್ಯರ ಚುನಾವಣೆಯಲ್ಲಿ ಬಿಜೆಪಿ ಹಾಗೂ ಮಾಜಿ ಶಾಸಕ ಹಾಗೂ ಬಿಡಿಸಿಸಿ ಬ್ಯಾಂಕ ನಿರ್ದೇಶಕ ಮಹಾಂತೇಶ ದೊಡ್ಡಗೌಡರ ನೇತೃತ್ವದ ಶ್ರೀ ಶಿವಬಸವ ರೈತ ಅಭಿವೃದ್ಧಿ ಪೆನೆಲನ ೮ ಜನ ಸದಸ್ಯರು ಅಭೂತಪೂರ್ವ ಜಯಗಳಿಸಿ ಅಪಾರ ಸಾಧನೆ ಮಾಡಿದ್ದಾರೆ.

ನೂತನ ಸದಸ್ಯರನ್ನು ಅಭಿನಂದಿಸಿ ಮಾತನಾಡಿದ ಮಾಜಿ ಶಾಸಕ ಮಹಾಂತೇಶ ದೊಡ್ಡಗೌಡರ ಮಾತನಾಡಿ ಕಳೆದ ಸಾಲಿನಲ್ಲಿ ನಾವು ಮಾಡಿದ ಸಹಕಾರಿ ರಂಗದ, ರೈತರ ಅಭಿವೃದ್ಧಿಗೆ ಅನೇಕ ಕೆಲಸಗಳನ್ನು ಮಾಡಿದ್ದು ಅದಕ್ಕೆ ಇಂದು ರೈತರು ನಮ್ಮನ್ನು ಬೆಂಬಲಿಸಿದ್ದಾರೆ ಎಂದರು. ಈ ಸಂದರ್ಭದಲ್ಲಿ ನೂತನ ಸದಸ್ಯರು, ನಾಗನೂರ ಗ್ರಾಮದ ಮುಖಂಡರು, ರೈತರು, ಗ್ರಾಮಸ್ಥರು ಉಪಸ್ಥಿತರಿದ್ದರು.

## ರಾಮದುರ್ಗ : ಏಕನಾಥ ಕೊಣ್ಣೂರ್‌ಗೆ ದೇವಾಂಗ ರತ್ನ ರಾಜ್ಯ ಪ್ರಶಸ್ತಿ ಪ್ರದಾನ



ರಾಮದುರ್ಗ : ಶ್ರೀಗಾಯತ್ರಿಪೀಠ ಮಹಾಸಂಸ್ಥಾನ ಟ್ರಸ್ಟ್ ಹಂಪಿ ಹಾಗೂ ರಾಜ್ಯ ದೇವಾಂಗ ಸಂಘ ಬೆಂಗಳೂರು ಇವರ ನೇತ್ರತ್ವದಲ್ಲಿ ನಡೆದ ಸಮಾರಂಭದಲ್ಲಿ ರಾಮದುರ್ಗ ದೇವಾಂಗ ಸಮಾಜದ ಮುಖಂಡ ಹಾಗೂ ಶ್ರೀಬನಶಂಕರಿದೇವಿ ದೇವಸ್ಥಾನ ಜೀರ್ಣೋದ್ಧಾರ ಸಮಿತಿ ಅಧ್ಯಕ್ಷ ಏಕನಾಥ ರಾಮಣ್ಣ ಕೊಣ್ಣೂರ ಅವರಿಗೆ ದೇವಾಂಗ ರತ್ನ ರಾಜ್ಯ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಬೆಂಗಳೂರಿನ ಕೆಂಪಲಿಂಗನಹಳ್ಳಿಯ ಶ್ರೀಗಾಯತ್ರಿಪೀಠ ಶಾಖಾ ಮಠದಲ್ಲಿ ಭಾನುವಾರ ನಡೆದ ಸಮಾರಂಭದಲ್ಲಿ ದೇವಾಂಗ ಜಗದ್ಗುರು ಹಂಪಿ ಹೇಮಕೂಟ ಗಾಯತ್ರಿ ಪೀಠಾಧಿಪತಿ ಶ್ರೀದಯಾನಂದಪುರಿ ಸ್ವಾಮೀಜಿ, ರಾಜ್ಯ ದೇವಾಂಗ ಸಂಘದ ಅಧ್ಯಕ್ಷ ರವೀಂದ್ರ ಕಲಬುರ್ಗಿ, ಮಾಜಿ ಶಾಸಕ ಎಂ.ಡಿ ಲಕ್ಷ್ಮೀನಾರಾಯಣ, ಹಂಪಿ ಶ್ರೀಗಾಯತ್ರಿಪೀಠ ಮಹಾಸಂಸ್ಥಾನ ಟ್ರಸ್ಟ್ ಅಧ್ಯಕ್ಷ ಪಿ.ಆರ್. ಗಿರಿಯಪ್ಪ ಸೇರಿದಂತೆ ದೇವಾಂಗ ಸಮಾಜದ ಮುಖಂಡರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ದೇವಾಂಗ ರತ್ನ ರಾಜ್ಯ ಪ್ರಶಸ್ತಿ ಪಡೆದ ಏಕನಾಥ ಕೊಣ್ಣೂರ ಅವರಿಗೆ ರಾಜ್ಯ ದೇವಾಂಗ ಸಂಘದ ಉಪಾಧ್ಯಕ್ಷ ಶಂಕ್ರಣ್ಣ ಮುರುಡಿ, ನಿರ್ದೇಶಕ ಶಿವಾನಂದ ಬಳ್ಳಾರಿ, ರಾಮದುರ್ಗ ತಾಲೂಕು ದೇವಾಂಗ ಸಮಾಜದ ಮುಖಂಡರು ಹಾಗೂ ನೇಕಾರ ಸಮುದಾಯಗಳ ಒಕ್ಕೂಟದ ಪದಾಧಿಕಾರಿಗಳು ಅಭಿನಂದಿಸಿದ್ದಾರೆ.

## ಧಾರವಾಡ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ 73,811 ಪ್ರಕರಣಗಳು ಇತ್ಯರ್ಥ




ಧಾರವಾಡ : ಡಿಸೆಂಬರ 14 ರಂದು ನಡೆದ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಬಾಕಿ ಇದ್ದ ರಾಜೀ ಆಗಬಹುದಾದಂತಹ 17,596 ಪ್ರಕರಣಗಳನ್ನು ತೆಗೆದುಕೊಂಡು ಅವುಗಳ ಪೈಕಿ 12,551 ಪ್ರಕರಣಗಳನ್ನು ಹಾಗೂ 63,013 ವ್ಯಾಜ್ಯ ಪೂರ್ವ ಪ್ರಕರಣಗಳನ್ನು ತೆಗೆದುಕೊಂಡು ಅವುಗಳ ಪೈಕಿ 61,260 ಪ್ರಕರಣಗಳನ್ನು ಸೇರಿ ಒಟ್ಟು 73,811 ಪ್ರಕರಣಗಳನ್ನು ರಾಜೀ ಸಂಧಾನ ಮಾಡಿಸಲಾಗಿದೆ. ವ್ಯಾಜ್ಯ ಪೂರ್ವ ಪ್ರಕರಣಗಳಲ್ಲಿ ಇತ್ಯರ್ಥ ಪಡಿಸಿಕೊಂಡ ಒಟ್ಟು ಮೊತ್ತ 8,09,37,468 ರೂಪಾಯಿಗಳು. ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿದ್ದ ಪ್ರಕರಣಗಳಲ್ಲಿ ಇತ್ಯರ್ಥ ಪಡಿಸಿಕೊಂಡ ಒಟ್ಟು ಮೊತ್ತ 54,59,56,204 ರೂಪಾಯಿಗಳು.

ಧಾರವಾಡ ಜಿಲ್ಲೆಯ ನ್ಯಾಯಾಲಯಗಳಲ್ಲಿ ವಿಚಾರಣೆಯಲ್ಲಿದ್ದ ವೈವಾಹಿಕ, ಜೀವನಾಂಶ ಪ್ರಕರಣಗಳಲ್ಲಿ ನಡೆದ ರಾಜೀ ಸಂಧಾನದ ಪರವಾಗಿ 8 ಪ್ರಕರಣಗಳು ಯಶಸ್ವಿಯಾಗಿ ದಂಪತಿಗಳು ಒಂದಾಗಿದ್ದಾರೆ.

31 ಪ್ರಕರಣಗಳಲ್ಲಿ ಹಿರಿಯ ನಾಗರಿಕರು ರಾಜೀ ಪ್ರಕರಣದ ಮೂಲಕ ತಮ್ಮ ವಿವಾದಗಳನ್ನು ಇತ್ಯರ್ಥಪಡಿಸಿಕೊಂಡಿದ್ದಾರೆ. ಲೋಕ ಅದಾಲತ್‌ನಲ್ಲಿ ಪ್ರಕರಣಗಳನ್ನು ಇತ್ಯರ್ಥ ಪಡಿಸಲು ಸೂಕ್ತ ಸಲಹೆ ಸೂಚನೆಗಳನ್ನು ನೀಡಿದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಿ.ಜಿ.ರಮಾ ಹಾಗೂ ಧಾರವಾಡ ಜಿಲ್ಲೆಯ ಎಲ್ಲಾ ನ್ಯಾಯಾಧೀಶರಿಗೆ, ನ್ಯಾಯವಾದಿಗಳಿಗೆ, ಬ್ಯಾಂಕ್, ಸಹಕಾರಿ ಸಂಘ, ಹಣಕಾಸು ಸಂಸ್ಥೆ, ವಿಮಾ ಕಂಪನಿಗಳು ಅವುಗಳ ನ್ಯಾಯವಾದಿಗಳಿಗೆ, ಅಭಿಯೋಜನೆಯ ಅಧಿಕಾರಿಗಳಿಗೆ, ಪೊಲೀಸ್ ಇಲಾಖೆಯ ಅಧಿಕಾರಿಗಳಿಗೆ ಮತ್ತು ಕಕ್ಷಿದಾರರಿಗೆ ಧಾರವಾಡ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಪರವಾಗಿ ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಸದಸ್ಯ ಕಾರ್ಯದರ್ಶಿ ಪರಶುರಾಮ ದೊಡ್ಡಮನಿ ಅವರು ಕೃತಜ್ಞತೆ ತಿಳಿಸಿದ್ದಾರೆ.

## ಮನಸ್ಸು ತಂಪುಗೊಳಿಸಲು ಶರಣರ ಸಂಘ ಅಗತ್ಯ



ರಬಕವಿ-ಬನಹಟ್ಟಿ : ಬದುಕಿನಲ್ಲಿ ಯಾವುದಕ್ಕೆ ಮಹತ್ವ ಕೊಡಬೇಕೆಂದು ಶರಣರು ಹೇಳಿ ಕೊಟ್ಟಿದ್ದಾರೆ. ನಮ್ಮ ಮನಸ್ಸು ತಂಪು ಮಾಡಲು ಶರಣರ ಸಂಘ ಅಗತ್ಯವಾಗಿದೆಯೆಂದು ಅಂಕಲಿ-ಕೈತನಾಳಮಠದ ಶ್ರೀ ಫಕೀರಜ್ಜ ಸ್ವಾಮೀಜಿ ಹೇಳಿದರು.

ನಗರದ ವೀರಭದ್ರೇಶವರ ಕಾರ್ತಿಕೋತ್ಸವ ಸಂದರ್ಭ ದೇವಸ್ಥಾನ ಆವರಣದಲ್ಲಿ ಭಕ್ತವೃಂದಕ್ಕೆ ಆಶೀರ್ವಾದ ನೀಡಿ ಮಾತನಾಡಿದ ಅವರು, ಬಂಗಾರ, ಬೆಳ್ಳಿಯಿಂದ ಶೃಂಗಾರಗೊಂಡರೆ ಸಾಲದು ನಮ್ಮ ಆಚರಣೆ ಬಂಗಾರವಾಗಬೇಕು. ಚೆನ್ನಾಗಿ ಕೆಲಸ ಮಾಡುವದೇ ಆಚಾರ, ಕೈ ಇರುವತನಕ ಚಂದದ ಕೆಲಸ ಮಾಡಿ. ಮಾತು ಬಲ್ಲವರು ಎಲ್ಲರ ಮನಸ್ಸು ಗೆಲ್ಲುವಂತೆ ಮಾತನಾಡಬೇಕೆಂದರು.

ಒಳ್ಳೆಯ ವಿಚಾರ ಆಲಿಸಿ, ನಮ್ಮಲ್ಲಿರುವ ಒಳ್ಳೆಯ ವಿಚಾರ ವ್ಯಕ್ತಪಡಿಸಬೇಕು ಅಂದಾಗ ಮಾತ್ರ ಹೆಚ್ಚಿನ ಜ್ಞಾನ ಬರಲು ಸಾಧ್ಯವೆಂದರು.

ಶಿವು ಬಾಗೇವಾಡಿ, ಚನ್ನಪ್ಪ ಗುಣಕಿ, ಪ್ರಶಾಂತ ಕೊಳಕಿ, ಬ್ರಿಜ್‌ಮೋಹನ ಡಾಗಾ, ಸದಾಶಿವ ಗೋಂದಕರ, ಪಟ್ಟಣ, ಅಶೋಕ ಶೀಲವಂತ, ಮಲ್ಲಣ್ಣ ಬಾವಲತ್ತಿ, ಕಿರಣ ಆಳಗಿ, ಕಾಡಪ್ಪ ಪಟ್ಟಣ, ಶಿವಾನಂದ ಬುದ್ನಿ, ಚನಬಸಯ್ಯ ಮಠಪತಿ, ದುರದುಂಡಯ್ಯ ಲಿಂಗದ, ರಾಜು ಲುಕ್ಕ, ಮಲ್ಲಪ್ಪ ಹೂಲಿ ಸೇರಿದಂತೆ ಸೋಮವಾರ ಪೇಟೆ ಸಮಸ್ತ ದೈವ ಮಂಡಳಿ ಹಾಗು ವೀರಭದ್ರೇಶ್ವರ ಕಾರ್ತಿಕೋತ್ಸವ ಮಂಡಳಿಯ ಸದಸ್ಯರು ಉಪಸ್ಥಿತರಿದ್ದರು.

### ಸಶಸ್ತ್ರ ಪಡೆಗಳ ಧ್ವಜ ದಿನಾಚರಣೆ ಹಾಗೂ 1971ನೇ ಯುದ್ಧ ವಾರ್ಷಿಕೋತ್ಸವ ಕಾರ್ಯಕ್ರಮ

## ಸಶಸ್ತ್ರ ಪಡೆಗಳ ಧ್ವಜ ಖರೀದಿಸುವಂತೆ - ಜಿಲ್ಲಾಧಿಕಾರಿ ಟಿ.ಭೂಬಾಲನ್ ಕರೆ

ವಿಜಯಪುರ : ಸಶಸ್ತ್ರ ಪಡೆಗಳ ಧ್ವಜ ದಿನಾಚರಣೆಯನ್ನು ದೇಶದ ಎಲ್ಲ ಕಡೆ ಪ್ರತಿ ವರ್ಷ ಡಿಸೆಂಬರ್ 7ರಂದು ಆಚರಿಸಲಾಗುತ್ತಿದೆ. ಸಶಸ್ತ್ರ ಪಡೆಗಳ ಧ್ವಜ ಬಿಡುಗಡೆ ಮಾಡಲಾಗುತ್ತದೆ. ವೀರ ಯೋಧರ ಕುಟುಂಬಕ್ಕೆ ಬೆಂಬಲ ಒದಗಿಸಲು ಈ ದಿನಾಚರಣೆ ಆಚರಿಸಲಾಗುತ್ತಿದೆ. ಈ ನಿಧಿಯನ್ನು ಯುದ್ಧ ಸಂತ್ರಸ್ತರಿಗೆ, ಮಾಜಿ ಸೈನಿಕರು ಅವರ ಅವಲಂಬಿತರ ಸಲುವಾಗಿ ಹಮ್ಮಿಕೊಂಡ ವಿವಿಧ ಕಲ್ಯಾಣ ಮತ್ತು ಕ್ಷೇಮಾಭಿವೃದ್ಧಿ ಕಾರ್ಯಕ್ರಮಗಳಿಗೆ ವಿನಿಯೋಗಿಸಲಾಗುತ್ತಿದೆ. ಸಾರ್ವಜನಿಕರು ಧ್ವಜ ಖರೀದಿಸುವ ಮೂಲಕ ದೇಶದ ಸೈನಿಕರಿಗೆ ಬೆಂಬಲಿಸಬೇಕು ಎಂದು ಜಿಲ್ಲಾ ಸೈನಿಕ ಮಂಡಳಿಯ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಹೇಳಿದರು.



ಜಿಲ್ಲಾಡಳಿತ ಹಾಗೂ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ವತಿಯಿಂದ ನಗರದ ಜಿಲ್ಲಾ ಪಂಚಾಯತಿ ರಸ್ತೆಯಲ್ಲಿರುವ ಗಾಂಧಿ ಭವನದಲ್ಲಿ ಸೋಮವಾರ 2024ನೇ ಸಾಲಿನ ಸಶಸ್ತ್ರ ಪಡೆಗಳ ಧ್ವಜ ದಿನಾಚರಣೆ ಹಾಗೂ 1971ನೇ ಯುದ್ಧ ವಾರ್ಷಿಕೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಅವರು ಮಾತನಾಡಿದರು.

ಜಿಲ್ಲೆಯು 2023ನೇ ಸಾಲಿನ ಸಶಸ್ತ್ರ ಪಡೆಗಳ ಧ್ವಜ ನಿಧಿಗೆ ನಿಗದಿಪಡಿಸಲಾದ ಗುರಿ ಸಾಧಿಸಿರುವುದರಿಂದ ಈ ನಿಧಿಯ ಮಾಜಿ ಸೈನಿಕರು ಮತ್ತು ಅವರ ಅವಲಂಬಿತರ ಕಲ್ಯಾಣ ಕಾರ್ಯಕ್ರಮಗಳಿಗೆ ಅಮೂಲ್ಯ ನೆರವು ನೀಡಲಿದ್ದು, ಜಿಲ್ಲೆಯ ಕೊಡುಗೆಯನ್ನು ಪ್ರಶಂಸಿಸುವ ಹಿನ್ನೆಲೆಯಲ್ಲಿ ಜಿಲ್ಲೆಯು ಪ್ರಶಸ್ತಿಗೆ ಭಾಜನವಾಗಿ, ಡಿ.7ರಂದು ಬೆಂಗಳೂರಿನ ರಾಜಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಘನತೆವೆತ್ತ ರಾಜ್ಯಪಾಲರಿಂದ ಪ್ರಶಸ್ತಿ ಸ್ವೀಕರಿಸಲಾಯಿತು.

ಜಿಲ್ಲೆಯ ಮಾಜಿ ಸೈನಿಕರು ಹಾಗೂ ಅವರ ಅವಲಂಬಿತರ ಕುಟುಂಬಗಳಿಗೆ ಜಿಲ್ಲಾ ಮಟ್ಟದಲ್ಲಿ ಸೈನಿಕ ಕಲ್ಯಾಣ ಇಲಾಖೆಯು ಬಹಳಷ್ಟು ಕೆಲಸ ನಿರ್ವಹಿಸುತ್ತಿದೆ. ಮುಂಬರುವ ದಿನಗಳಲ್ಲಿ ಯೋಧರ ಹಾಗೂ ಅವರ ಕುಟುಂಬದ ದೃಷ್ಟಿಯಿಂದ ಇನ್ನೂ ರೂಪುರೇಷೆ ಸಿದ್ಧಪಡಿಸಿಕೊಂಡು ಕಾರ್ಯನಿರ್ವಹಿಸಬೇಕು. ಸೇವಾನಿರತರು ಹಾಗೂ ನಿವೃತ್ತ ಯೋಧರು ಹಾಗೂ ಅವರ ಅವಲಂಬಿತ ಕುಟುಂಬದವರ ಸಮಸ್ಯೆಗೆ ಸ್ಪಂದಿಸಬೇಕು.

ಮಾಜಿ ಸೈನಿಕರು ಮತ್ತು ಅವರ ಅವಲಂಬಿತರ ಸಲುವಾಗಿ ಹಮ್ಮಿಕೊಳ್ಳುವ ವಿವಿಧ ಕಲ್ಯಾಣ ಮತ್ತು ಕ್ಷೇಮಾಭಿವೃದ್ಧಿ ಕಾರ್ಯಕ್ರಮಗಳಿಗೆ ಸಾರ್ವಜನಿಕರು ಧ್ವಜವನ್ನು ಹೆಚ್ಚೆಚ್ಚು ಖರೀದಿಸುವ ಮೂಲಕ ಕೈ ಜೋಡಿಸಬೇಕು ಎಂದು ಅವರು ಹೇಳಿದರು. ಇಂತಹ ಕಾರ್ಯಕ್ರಮಗಳನ್ನು ಪ್ರತಿವರ್ಷ ಆಚರಿಸಲಾಗುವುದು.ಜಿಲ್ಲೆಯ ಮಾಜಿ ಸೈನಿಕರು ಜಿಲ್ಲಾ ಮಟ್ಟದಲ್ಲಿ ನಡೆಯುವ ಗಣರಾಜ್ಯೋತ್ಸವ ಪಥಸಂಚಲನಲದಲ್ಲಿ ಪಾಲ್ಗೊಂಡು ಪ್ರೇರಣೆ ನೀಡಬೇಕು ಎಂದು ಹೇಳಿದರು. 1971ರ ಯುದ್ದದಲ್ಲಿ ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಿದ ವೀರ ಯೋಧರ ಸ್ಮರಿಸುವ ಮೂಲಕ ಅವರಿಗೆ ಗೌರವ ನಮನಗಳು ಸಲ್ಲಿಸುವುದಕ್ಕಾಗಿ ಪ್ರತಿ ವರ್ಷವೂ ಯುದ್ಧ ವಾರ್ಷಿಕೋತ್ಸವ ಆಚರಿಸಲಾಗುತ್ತಿದೆ ಎಂದು ಹೇಳಿದರು.

ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಈ ಸಂದರ್ಭದಲ್ಲಿ ಸಶಸ್ತ್ರ ಪಡೆಗಳ ಸಾಂಕೇತಿಕ ಧ್ವಜ ಬಿಡುಗಡೆಗೊಳಿಸಿ, ನಂತರ ಸಾಂಕೇತಿಕವಾಗಿ ಧ್ವಜ ಸ್ವೀಕರಿಸಿ, ದೇಣಿಗೆ ನೀಡುವುದರ ಮೂಲಕ ಸಾರ್ವಜನಿಕರಿಗೆ ಧ್ವಜಗಳನ್ನು ಮಾರಾಟ ಮಾಡಿ ದೇಣಿಗೆ ಸಂಗ್ರಹಿಸುವ ಕಾರ್ಯಕ್ಕೆ ಚಾಲನೆ ನೀಡಿದರು.

ಇಸಿಎಚ್‌ಎಸ್ ಪಾಲಿಕ್ಲಿನಿಕ್ ಉಸ್ತುವಾರಿ ಅಧಿಕಾರಿ, ಕರ್ನಲ್ ಫಿರೋಜ್ ಬಿ ಕರ್ಲೆಕರ್ ಅವರು ಮಾತನಾಡಿ, ಹದಿಮೂರು ದಿನಗಳ ಕಾಲ ನಡೆದ 1971ರ ಯುದ್ಧವು ಭಾರತೀಯ ಸೇನಾಪಡೆಯ ಮೈಲುಗಲ್ಲಾಗಿದೆ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ 1971ರ ಯುದ್ಧದಲ್ಲಿ ಹುತಾತ್ಮ ಯೋಧರ ಸ್ಮರಣಾರ್ಥವಾಗಿ ಎರಡು ನಿಮಿಷ ಮೌನಾಚರಣೆ ಮಾಡಲಾಯಿತು. ಧ್ವಜ ನಿಧಿ ಸಂಗ್ರಹಣೆಗೆ ಸಹಕಾರ ನೀಡಿದ ವಿವಿಧ ಇಲಾಖೆ ಹಾಗೂ ಜಿಲ್ಲೆಯ ಮಾಜಿ ಸೈನಿಕರ ಸಂಘಕ್ಕೆ ಪ್ರಶಂಸೆ ಪತ್ರ ವಿತರಿಸಲಾಯಿತು. ಕಾಯಕ್ರಮದಲ್ಲಿ ಎನ್‌ಸಿಸಿ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಪ್ರಸ್ತುತಗೊಂಡವು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ರಿಷಿ ಆನಂದ, ಸೈನಿಕ ಶಾಲೆಯ ಪ್ರಾಂಶುಪಾಲರು ಗ್ರೂಪ್ ಕ್ಯಾಪ್ಟನ್ ಪ್ರತಿಭಾ ಬಿಷ್ಟ್, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಶಂಕರ ಮಾರಿಹಾಳ, 36 ಕರ್ನಾಟಕ ಎನ್‌ಸಿಸಿಯ 36ನೇ ಬಟಾಲಿಯನ್ ಅಧಿಕಾರಿ ಕರ್ನಲ್ ಗಿರೀಶ ಶಿಂದೆ, ಸೈನಿಕ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಸ್ಕ್ವಾಡ್ರನ್ ಲೀಡರ್ ಶ್ರೀಮತಿ ಜಿ.ಆರ್.ವಿನೂತ, ಅಬಕಾರಿ ಇಲಾಖೆಯ ಉಪ ಆಯುಕ್ತ ವೀರಣ್ಣ ಬಾಗೇವಾಡಿ, ಕೆಕೆಆರ್‌ಟಿಸಿಯ ವಿಭಾಗೀಯ ನಿಯಂತ್ರಣಾಧಿಕಾರಿ ನಾರಾಯಣಪ್ಪ ಕುರುಬರ, 1971ರ ಯುದ್ಧದಲ್ಲಿ ಭಾಗವಹಿಸಿದ ಯೋಧರಾದ ಮುಲ್ಲಾ, ಜಿಲ್ಲಾ ಮಾಜಿ ಸೈನಿಕರ ಸಂಘದ ಅಧ್ಯಕ್ಷರಾದ ರಾಮಪ್ಪ ಹಾಗೂ ಪದಾಧಿಕಾರಿಗಳು ಶ್ರೀಮತಿ ಶಿವಗಂಗಾಬಾಯಿ ಸೇರಿದಂತೆ ಮಾಜಿ ಸೈನಿಕರು ಹಾಗೂ ಅವರ ಕುಟುಂಬದವರು ಉಪಸ್ಥಿತರಿದ್ದರು.

## ಉಪ್ಪು ನೀರಿನ ಸಾಮರ್ಥ್ಯ ತಡೆಯಲು ನೇರವಾದ ಕಾಲುವೆ ದುರಸ್ಥಿ ಕಾಮಗಾರಿ

ಕಾರವಾರ - ಕರಾವಳಿ ಭಾಗದಲ್ಲಿ ಸಿಹಿ ನೀರಿಗಿಂತ ಉಪ್ಪು ನೀರಿನ ಲಭ್ಯತೆಯೇ ಹೆಚ್ಚಾಗಿದ್ದು, ಅದರಲ್ಲೂ ಶರಾವತಿ ದಡದ ಹಿನ್ನೀರಿನ ಭಾಗಗಳಲ್ಲಂತೂ ಸಿಹಿ ನೀರಿನ ಮೂಲಗಳು ಸಿಗುವುದು ಕಡಿಮೆ ಹೀಗಾಗಿ ಗೇರುಸೊಪ್ಪಾ ಜಲಾಶಯದ ನೀರನ್ನು ಕಾಲುವೆಗಳ ಮೂಲಕ ಹರಿಸಲಾಗುತ್ತದೆ. ಇಂತಹ ಕಾಲುವೆಗಳು ಸುತ್ತಲಿನ ರೈತರ ಜೀವಾಳವಾಗಿದೆ.

ಹೊನ್ನಾವರ ತಾಲೂಕಿನ ಮಾವಿನಕುರ್ವಾ ಗ್ರಾಮದಲ್ಲಿ ಗ್ರಾಮದ ಸುತ್ತಲೂ ರೈತರ ಹೊಲಗಳಲ್ಲಿ ನೀರಿನ ಕಾಲುವೆ ಬಹು ವರ್ಷಗಳಿಂದಲೂ ಇದೆ ಆದರೆ ಈ ಕಾಲುವೆಗಳೆಲ್ಲ ಹೂಳು ತುಂಬಿ ನೀರು ತುಂಬುವ ಸಾಮರ್ಥ್ಯ ಕಡಿಮೆಯಾಗುತ್ತಿತ್ತು. ಈ ಹಿನ್ನೆಲೆಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕಾಲುವೆ ಹೂಳೆತ್ತುವ ಕಾರ್ಯ ಕೈಗೆತ್ತಿಕೊಂಡು ಅಭಿವೃದ್ಧಿಪಡಿಸಲಾಗುತ್ತಿದೆ.



2024-25ನೇ ಸಾಲಿನಲ್ಲಿ ಅಂದಾಜು ಮೊತ್ತ 3ಲಕ್ಷ ವೆಚ್ಚದಲ್ಲಿ ತಲಮಂಕಿಯಿಂದ ಪಗಡೆಬೇಲೆ, ಸಾಲೆಹಿತ್ಲು, ಹೊಸಮೋಟೆಯವರೆಗೆ ಸುಮಾರು 400ಮೀ ಉದ್ದದ ಕಾಲುವೆ ಹೂಳೆತ್ತುವ ಕಾಮಗಾರಿ ಕೈಗೆತ್ತಿಕೊಂಡಿದ್ದು ಈಗಾಗಲೇ 370ಮಾನವ ದಿನಗಳನ್ನು ಸೃಜಿಸಲಾಗಿದೆ.

ಗ್ರಾಮದ ಸುತ್ತಲಿನ ರೈತರು ಮಳೆಗಾಲದಲ್ಲಿ ಭತ್ತವನ್ನು ಬೆಳೆಯುತ್ತಿದ್ದರೂ ತೆಂಗು ಬೆಳೆಯೇ ಇವರ ಜೀವನಾಧಾರವಾಗಿದೆ. ಈ ಬೆಳೆ ಉಪ್ಪು ನೀರನ್ನ ಬಿಟ್ಟುಕೊಟ್ಟು ಸಿಹಿನೀರನ್ನು ಹಿಡಿದಿಡುವ ಸಾಮರ್ಥ್ಯವನ್ನು ಹೊಂದಿದೆ ಹೀಗಾಗಿ ಕಾಲುವೆಯಲ್ಲಿ ಬರುವ ನೀರನ್ನು ರೈತರು ತಮ್ಮ ತೋಟಗಳಿಗೆ ಹಾಯಿಸುತ್ತಾರೆ.

ಇಂತಹ ಕಾಮಗಾರಿಗಳ ಸದುಪಯೋಗ ರೈತರು ಪಡೆಯಬೇಕು ಎಂದು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ರಾಘವ ಆರ್ ಮೇಸ್ತ ತಿಳಿಸಿದರು.

ಕಾಲುವೆ ದುರಸ್ಥಿ ಕಾಮಗಾರಿಯಿಂದ ನಮ್ಮ ಗ್ರಾಮಕ್ಕೆ ನೀರು ಅಧಿಕ ಪ್ರಮಾಣದಲ್ಲಿ ಸಿಗುವುದರ ಜೊತೆಗೆ ನಮ್ಮ ಕುಟುಂಬಗಳಿಗೆ ಉದ್ಯೋಗವು ದೊರೆಯುವಂತಾಗಿದೆ. ಇದರಿಂದ ಉದ್ಯೋಗ ಖಾತ್ರಿ ಯೋಜನೆ ನಮಗೆ ತುಂಬಾ ಅನುಕೂಲತೆ ಕಲ್ಪಿಸಿದೆ ಎಂದು ಕೂಲಿಕಾರ ಮಹಿಳೆ ಅಭಿಪ್ರಾಯ ವ್ಯಕ್ತಪಡಿಸಿದರು.

## ಕುಮಟಾ: ವಿದ್ಯುತ್ ವ್ಯತ್ಯಯ

ಕಾರವಾರ - ಹೆಸ್ಕಾಂ, ಕುಮಟಾ ಉಪವಿಭಾಗದ 33/11 ಕೆ.ವಿ ಗೋಕರ್ಣ ಉಪಕೇಂದ್ರದಲ್ಲಿ ನಿರ್ವಹಣಾ ಕಾಮಗಾರಿ ಇರುವದರಿಂದ ಗೋಕರ್ಣ ವ್ಯಾಪ್ತಿಯ ಮಾದನಗೇರಿ, ಗೋಕರ್ಣ, ತದಡಿ, ಬಂಕಿಕೊಡ್ಲ, ಬಿಜ್ಜೂರು, ಗಂಗಾವಳಿ, ಓಂ ಬಿಚ್ ಫೀಡರಿನ ಎಲ್ಲಾ ಭಾಗಗಳಲ್ಲಿ ಹಾಗೂ 33/11 ಕೆ.ವಿ ಮರಾಕಲ್ ಉಪಕೇಂದ್ರದಲ್ಲಿ ನಿರ್ವಹಣಾ ಕಾಮಗಾರಿ ಇರುವುದರಿಂದ ಸಂತೆಗುಳಿ, ಕಲ್ಲಬ್ಬೆ, ಹೊದ್ಕೆಶಿರೂರು, ಉಳ್ಳೂರುಮಠ, ಹೊದ್ಕೆ ಶಿರೂರು ಹಾಗೂ ಮೂರುರು ಫೀಡರಿನ ವ್ಯಾಪ್ತಿಯಲ್ಲಿ ಹಾಗೂ ನಗರ ಶಾಖೆಯ ಫೀಡರಗಳಾದ 11 ಕೆ.ವಿ ಚಿತ್ರಗಿ, 11 ಕೆ.ವಿ ಇಂಡಸ್ಟ್ರೀಯಲ್ ಭಾಗಗಳಲ್ಲಿ ಮತ್ತು ಗ್ರಾಮಿಣ ಶಾಖೆಯ ವಾಲ್ಗಳ್ಳಿ ಫೀಡರಿನ ಭಾಗದಲ್ಲಿ ಜಂಗಲ್ ಕಟ್ಟಿಂಗ್ ಇರುವುದರಿಂದ ಡಿ.18 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ ಗ್ರಾಹಕರು ಸಹಕರಿಸುವಂತೆ ಕುಮಟಾ ಹೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರು(ವಿ)ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

ಕಾರವಾರ - ಪ್ರಸಕ್ತ ಸಾಲಿಗೆ ಡ್ರೋನ್ ಆಧಾರಿತ ಪೋಟೋಗ್ರಫಿ ಮತ್ತು ವಿಡಿಯೋಗ್ರಫಿ ಮೂಲಕ ಸಾಮಾಜಿಕ ಜಾಲತಾಣಗಳಲ್ಲಿ ಉದ್ಯೋಗ ಪಡೆಯಲು ಇಚ್ಛಿಸುವ ಪರಿಶಿಷ್ಟ ಪಂಗಡದ ಯುವಕ/ ಯುವತಿಯರಿಗೆ ತರಬೇತಿ ನೀಡಲು ಅರ್ಜಿ ಅಹ್ವಾನಿಸಲಾಗಿದ್ದು ಅರ್ಜಿ ಸಲ್ಲಿಸಲು ಡಿ.21 ರವರೆಗೆ ಅವಧಿ ವಿಸ್ತರಿಸಲಾಗಿದೆ.

ತರಬೇತಿ ಪಡೆಯುವ ಇಚ್ಛಿಸುವ ಪರಿಶಿಷ್ಟ ಯುವಕ/ ಯುವತಿಯರು ಅರ್ಜಿ ನಮೂನೆಯನ್ನು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಮತ್ತು ಜಿಲ್ಲೆಯ ಎಲ್ಲಾ ಸಹಾಯಕ ನಿರ್ದೇಶಕರು ಗ್ರೇ-1/2, ಸಮಾಜ ಕಲ್ಯಾಣ ಇಲಾಖೆಯ ಕಚೇರಿಯಲ್ಲಿ ಪಡೆದು ಡಿ.21ರೊಳಗಾಗಿ ಅರ್ಜಿಯನ್ನು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಧಿಕಾರಿಗಳು ಉತ್ತರ ಕನ್ನಡ ಜಿಲ್ಲೆ ಕಾರವಾರರವರ ಕಚೇರಿಗೆ ಸಲ್ಲಿಸಬೇಕು.

ಷರತ್ತುಗಳು: ಆಭ್ಯರ್ಥಿಗಳು ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ತರಬೇತಿ ಪಡೆಯಲು ಪರುಷರಿಗೆ 35 ವರ್ಷ, ಮಹಿಳೆಯರಿಗೆ 40 ವರ್ಷ ವಯೋಮಿತಿ ಮೀರಿರಬಾರದು, ಅಭ್ಯರ್ಥಿಯ ಕುಟುಂಬದ ಆದಾಯ ರೂ.2.5 ಮೀರಿರಬಾರದು.

ಮೂಲ ನಿವಾಸಿ ಮತ್ತು ಅಲೆಮಾರಿ/ಅರೆಅಲೆಮಾರಿ ಮತ್ತು ಸೂಕ್ಷ್ಮ/ಅತೀ ಸೂಕ್ಷ್ಮ ಪರಿಶಿಷ್ಟ ಪಂಗಡದ ಸಮುದಾಯದ ಅಭ್ಯರ್ಥಿಗಳಿಗೆ ಪ್ರಥಮ ಆದ್ಯತೆ ನೀಡಲಾಗುವುದು.

ಅಭ್ಯರ್ಥಿಯು ತರಬೇತಿಯ ನೋಂದಣಿ ಸಮಯದಲ್ಲಿ ಕಡ್ಡಾಯವಾಗಿ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ತೇರ್ಗಡೆಗೊಂಡ ಅಂಕಪಟ್ಟಿ ಮತ್ತು ಆಧಾರ ಕಾರ್ಡನ್ನು ಸಲ್ಲಿಸತಕ್ಕದ್ದು, ಅಭ್ಯರ್ಥಿಯು ತರಬೇತಿ ನೀಡುವ ಸ್ಥಳಕ್ಕೆ ಬರುವ ಪ್ರಯಾಣ ವೆಚ್ಚವನ್ನು ಇಲಾಖೆಯಿಂದ ಭರಿಸುವುದಿಲ್ಲ.

ತರಬೇತಿಯ ಸಮಯದಲ್ಲಿ ಯಾವುದೇ ಶಿಷ್ಯವೇತನ ನೀಡುವುದಿಲ್ಲ, ಪ್ರಸ್ತಾಪಿತ ತರಬೇತಿ ಆನ್‌ಲೈನ್ ಮುಖಾಂತರ ಅವಕಾಶವಿರುದಿಲ್ಲ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಷ್ಟ್ರಾಭಿಮಾನ ಹೆಚ್ಚಿಸುವ ಎನ್ ಎಸ್ ಎಸ್



ರಬಕವಿ-ಬನಹಟ್ಟಿ : ನಮ್ಮ ಭಾರತ ದೇಶವು ಬೆಳೆದದ್ದು ಗ್ರಾಮಗಳಿಂದ. ಗ್ರಾಮಗಳ ಸೇವೆ ಮಾಡುವುದು ದೇಶ ಸೇವೆ ಮಾಡಿದಂತಾಗುತ್ತದೆ. ಎನ್ ಎಸ್ ಎಸ್ ನಮಗೆ ಶಿಸ್ತು, ಸಮಯ ಪ್ರಜ್ಞೆ, ಏಕತೆ ಮತ್ತು ರಾಷ್ಟ್ರಾಭಿಮಾನವನ್ನು ಬೆಳೆಸುತ್ತದೆ ಎಂದು ಬನಹಟ್ಟಿಯ ಹಿರೇಮಠದ ಶರಣಬಸವ ಶಿವಾಚಾರ್ಯರು ತಿಳಿಸಿದರು.

ಸಮೀಪದ ಯಲ್ಲಟ್ಟಿಯಲ್ಲಿ ನಾವಲಗಿ ಗ್ರಾಮದ ಕರ್ನಾಟಕ ಪಬ್ಲಿಕ್ ಶಾಲೆಯು ಹಮ್ಮಿಕೊಂಡ ಎನ್ ಎಸ್ ಎಸ್ ವಿಶೇಷ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ನಾವಲಗಿ ಗ್ರಾಮದ ಮುಖಂಡ ಆನಂದ ಕಂಪು ಮಾತನಾಡಿ, ವಿದ್ಯಾರ್ಥಿಗಳು ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ಜ್ಞಾನವನ್ನು ವೃದ್ಧಿ ಮಾಡಿಕೊಳ್ಳಲು ಸಾಧ್ಯವಾಗುತ್ತದೆ. ಎನ್ ಎಸ್ ಎಸ್ ನಮಗೆ ನಾಯಕತ್ವದ ಗುಣಗಳನ್ನು ಕಲಿಸುತ್ತದೆ ಎಂದು ತಿಳಿಸಿದರು.

ಪ್ರಾಚಾರ್ಯ ಶರತ್ಚಂದ್ರ ಜಂಬಗಿ, ರಬಕವಿ ಬನಹಟ್ಟಿ ತಾಲ್ಲೂಕು ನೌಕರರ ಸಂಘದ ಅಧ್ಯಕ್ಷ ಬಸವರಾಜ ಹನಗಂಡಿ, ಶಿಬಿರಾಧಿಕಾರಿ ಎಂ.ಸಿ.ನರೆಗಲ್ಲ, ಗ್ರಾಮ ಪಂಚಾಯ್ತಿ ಅಧ್ಯಕ್ಷರಾದ ಸದಾಶಿವ ಸವದಿ, ಇಮಹಾದೇವ ಮೋಪಗಾರರೆಡ್ಡಿ, ಎಸ್ ಡಿ ಎಂ ಸಿ ಉಪಾಧ್ಯಕ್ಷ ಬಸವರಾಜ ಗಣಿ, ಗಂಗಪ್ಪ ಅಮ್ಮಲಜೇರಿ, ಹನಮಂತ ನಾವಿ, ಕಾಡೇಶ ಕಂಪು, ಸಿದ್ದು ಲೆಂಡಿ ಸೇರಿದಂತೆ ಅನೇಕರು ಇದ್ದರು.

## ಕುರಿ/ಮೇಕೆ ಸಾಕಾಣಿಕೆ ಉಚಿತ ತರಬೇತಿ : ಅರ್ಜಿ ಆಹ್ವಾನ

ಕಾರವಾರ - ಕೆನರಾ ಬ್ಯಾಂಕ್ ಮತ್ತು ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಸಹಯೋಗದಲ್ಲಿ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಕುರಿ/ ಮೇಕೆ ಸಾಕಾಣಿಕೆ ಕುರಿತ 10 ದಿನಗಳ ಉಚಿತ ತರಬೇತಿಯು ಡಿ.26 ರಿಂದ ಆರಂಭವಾಗಲಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ-ಯುವತಿರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಅಭ್ಯರ್ಥಿಗಳು ಆಧಾರ್ ಕಾರ್ಡ್‌ನ್ನು ಹೊಂದಿರಬೇಕು ಹಾಗೂ ಬಿಪಿಎಲ್ ಕಾರ್ಡ್‌ನ್ನು ಹೊಂದಿರುವ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಅರ್ಜಿ ಸಲ್ಲಿಸಲು ಡಿ.23 ಕೊನೆಯ ದಿನವಾಗಿದೆ.

ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9380162042, 9241482541, 9740982585 ನ್ನು ಸಂಪರ್ಕಿಸುವಂತೆ ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಟಂಕಸಾಲಿ ಪ್ರತಿಷ್ಠಾನದಿಂದ ಪ್ರಶಸ್ತಿ ಪುರಸ್ಕಾರ ಸಮಾರಂಭ
## ಸತ್ಯ ವಸ್ತು ನಿಷ್ಠ ವರದಿಗೆ ಆದ್ಯತೆವಿರಲಿ : ಎಂ.ಜಿ. ದಾಸರ




ಮುಧೋಳ: ಇಡೀ ಸಮಾಜಕ್ಕಾಗಿ ಸತ್ಯ ಮೂಡಿಸುವ ಮತ್ತು ವಸ್ತು ನಿಷ್ಠ ಸುದ್ದಿ ಜೊತೆ ಮಾನವೀಯ ಸಂಬಂಧಗಳ ಕಾರ್ಯ ಅವಶ್ಯಕವಾಗಿದೆ. ಎಂದು ಸಾ.ಶಿ. ಇಲಾಖೆ ವಿಶ್ರಾಂತ ಉಪನಿರ್ದೇಶಕ ಎಂ.ಜಿ. ದಾಸರ ಹೇಳಿದರು.

ನಗರದ ಟಂಕಸಾಲಿ ಭವನದಲ್ಲಿ ಜಗನ್ನಾಥರಾವ ಟಂಕಸಾಲಿ ಪ್ರತಿಷ್ಠಾನ, ಹಿಂದಿ ಪ್ರಚಾರ ಸಂಘ ಹಾಗು ಸಾರ್ವಜನಿಕ ವಾಚನಾಲಯ ಟ್ರಸ್ಟ ಇವರ ಸಹಯೋಗದಲ್ಲಿ ಟಂಕಸಾಲಿರವರ 24.ನೇ ಪುಣ್ಯಸ್ಮರಣೆ ನಿಮಿತ್ಯ ಪತ್ರಕರ್ತರ ಹಾಗು ಹಿಂದಿ ಪ್ರಚಾರಕರ ಸನ್ಮಾನ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು, ಮುಧೋಳದ ಹಿರಿಯ ಪತ್ರಕರ್ತ ಜಗನ್ನಾಥರಾವ ಅವರು ತಮ್ಮ ಸುದೀರ್ಘ 5.ದಶಕಗಳ ಕಾಲ ಪತ್ರಕರ್ತರಾಗಿ ಅವರು ಸಲ್ಲಿಸಿದ್ದ ಸೇವೆ ಇಂದಿನ ಯುವಕರಿಗೆ ಮಾದರಿಯಾಗಿದೆ. ಮಿತ ಭಾಷಿಕರು, ಹರಿತವಾದ ಲೇಖನ ಮೂಲಕ ಸಮಾಜದ ಅಂಕು-ಡೊಂದು ತಿದ್ದುವಲ್ಲಿ ಮತ್ತು ರಾಷ್ಟ್ರ ಭಾಷೆ ರಾಷ್ಟ್ರ ಸೇವೆಯನ್ನು ಯುವಕ-ರಿಗೆ ಹಿಂದಿ ಪ್ರಚಾರ, ಶಿಕ್ಷಣ ಮೂಲಕ ಅವರು ನೀಡುತ್ತಿದ್ದರು.

ಮಾತೃ ಭಾಷೆಯಲ್ಲಿ ಪ್ರಭುತ್ವ ಹೊಂದಿದರೆ ಹಿಂದಿ, ಇಂಗ್ಲೀಷ ಇತರೆ ಭಾಷೆ ಸುಲಭವಾಗಿ ಅರಿಯಬಹುದು, ಮನುಷ್ಯ ಆನಂದದಿಂದ ಇರಲು ಸಂಗೀತ, ಸಾಹಿತ್ಯ, ಕಲೆ, ಕ್ರೀಡೆಗಳಲ್ಲಿ ಭಾಗವಹಿಸಬೇಕು ಇಲ್ಲವೆ ಇವುಗಳ ಮನರಂಜನೆ ಪಡೆಯಬೇಕು. ಎಂದು ದಾಸರ ಹೇಳಿದರು.

ಪ್ರಶಸ್ತಿ ಪುರಸ್ಕಾರ : ಬಾಗಲಕೋಟೆಯ ಹಿರಿಯ ಪತ್ರಕರ್ತ ಈಶ್ವರ ಶೇಟ್ಟರ, ಮುಧೋಳ ವಿಶ್ವವಾಣಿ ವರದಿಗಾರ ಬಿ. ಎಚ್. ಬೀಳಗಿ, ಹಿಂದಿ ಪ್ರಚಾರಕ ಕಲಘಟಗಿಯ ಇಂಗ್ಲೀಷ ಶಾಲೆಯ ಮು.ಗು. ಕೇಶವ ಡೊಂಗಿ, ಬೀಳಗಿಯ ಡಾ.ವಿದ್ಯಾ ದ. ಮಹೇಂದ್ರಕರ ಟಂಕಸಾಲಿ ಪ್ರತಿಷ್ಠಾನದ 24.ನೇ ಪ್ರಶಸ್ತಿ ಪುರಸ್ಕಾರ ಪಡೆದು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು.

ಗೌರವ ಸನ್ಮಾನ : ಹಿಂದಿ ಪ್ರಚಾರಕರ ಸಂಘ ವತಿಯಿಂದ ಜರುಗಿದ ಹಿಂದಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ್ ಪಡೆದಿರುವ ಸಮರ್ಥ ವೆಂ. ದೇಶಪಾಂಡೆ, ಶಿವಾನಿ ಮೃ. ಮಠದ ಇವರನ್ನು ಗಣ್ಯರು ಸೇರಿ ಗೌರವ ಸನ್ಮಾನ ನೀಡಿದರು.

ನ್ಯಾಯವಾದಿ ಮಿಲಿಂದ ಟಂಕಸಾಲಿ, ಪ್ರತಿಷ್ಠಾನದ ಅಧ್ಯಕ್ಷ ಆರ್. ಟಿ. ಬುದ್ನಿ, ಪ್ರ. ಕಾ. ಟಿ.ಕೆ. ಹಂಚಾಟೆ, ಗುರುರಾಜ ಪೋತ್ನೀಸ್, ಎಂ.ಎಚ್. ನದಾಫ್, ವಿ.ಎಸ್. ಮುನವಳ್ಳಿ, ಮಹಾದೇವಪ್ಪ ಹಡಪದ, ಉದಯ ವಾಳ್ವೇಕರ ಇತರರಿದ್ದರು.

# ಪ್ರತಿ ಗ್ರಾಮ ಪಂಚಾಯತ ಮಟ್ಟದಲ್ಲಿ ಒಂದು "ಕೂಸಿನ ಮನೆ ಕೇಂದ್ರ" ವನ್ನು ಈಗಾಗಲೇ ಪ್ರಾರಂಭ

ಗೋಕಾಕ: ಕೂಸಿನ ಮನೆ (ಶಿಶು ಪಾಲನಾ ಕೇಂದ್ರ)ಗಳ ಮುಖ್ಯ ಉದ್ದೇಶ ಗ್ರಾಮೀಣ ಭಾಗದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜನರು ಯೋಜನೆಯಡಿಯಲ್ಲಿ ದುಡಿಯುವ ಮಹಿಳಾ ಕೂಲಿಕಾರರ ಭಾಗವಹಿಸುವಿಕೆಯನ್ನು ಹೆಚ್ಚಿಸುವ ಸಲುವಾಗಿ ಪ್ರತಿ ಗ್ರಾಮ ಪಂಚಾಯತ ಮಟ್ಟದಲ್ಲಿ ಒಂದು "ಕೂಸಿನ ಮನೆ ಕೇಂದ್ರ" ವನ್ನು ಈಗಾಗಲೇ ಪ್ರಾರಂಭಿಸಿದ್ದು ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಪರಶುರಾಮ ಘಸ್ತೆ ಹೇಳಿದರು.

ಅವರು, ನಗರದ ಸಾಮಥ-ರ್ಯ ಸೌಧದಲ್ಲಿ ಕೂಸಿನ ಮನೆ ಆರೈಕೆದಾರರ ತರಬೇತಿ ಕಾರ್ಯಕ್ರಮಕ್ಕೆ ಸಸಿಗೆ ನೀರು ಉಣಿಸುವ ಮೂಲಕ ತರಬೇತಿಗೆ ಚಾಲನೆ ನೀಡಿ ಮಾತನಾಡಿ, ಕೂಲಿ ಕಾರ್ಮಿಕರು ಪ್ರತಿ-ನಿತ್ಯ ಕೂಲಿ ಕೆಲಸಕ್ಕೆ ತೆರಳುವ ಅನಿವಾರ್ಯತೆ ಇರುತ್ತದೆ. ಇಂತಹ ಕುಟುಂಬದ ಮಹಿಳೆಯರು ತಮ್ಮ ಚಿಕ್ಕ ಮಕ್ಕಳನ್ನು ತಮ್ಮೊಂದಿಗೆ ಕರೆದುಕೊಂಡು ಹೋಗುವುದು ಅಸಾಧ್ಯ. ಮಹಿಳೆಯರು ತಮ್ಮ ಮಕ್ಕಳನ್ನು ಮನೆಯಲ್ಲಿಯೇ ಬಿಟ್ಟು ಕೆಲಸಕ್ಕೆ ತೆರಳಿದ ಸಂದರ್ಭದಲ್ಲಿ ಅವರು ಕೆಲಸದಿಂದ ಮನೆಗೆ ಮರಳುವವರೆಗೆ ಮಗುವಿಗೆ ತಾಯಿ ಹಾಲು ದೊರೆಯುವುದಿಲ್ಲ ಜೊತೆಗೆ ಪೌಷ್ಠಿಕ ಆಹಾರ ದೊರೆಯುವುದಿಲ್ಲ ಇದರಿಂದ ಮಕ್ಕಳು ಅಪೌಷ್ಠಿಕತೆಗೆ ಒಳಗಾಗಬಹುದಾಗಿದೆ. ಗ್ರಾಮೀಣ ಜನರ ಮಾನಸಿಕ ಆರೋಗ್ಯವು ಹಾಳಾಗುತ್ತದೆ. ಈ ಸಮಸ್ಯೆಗಳ ನಿವಾರಣೆಗೆ ಸರ್ಕಾರ ಈ ಯೋಜನೆ ಆರಂಭಿಸಿದೆ ಎಂದರು.



ಕೇಂದ್ರಗಳಿಗೆ ಸ್ಥಳೀಯ ಉದ್ಯೋಗ ಖಾತ್ರಿ ಯೋಜನೆಯಲ್ಲಿ ದುಡಿಯುವ ಮಹಿಳೆಯರನ್ನು ಹಾಗೂ ಓದಲು ಬರೆಯಲು ಬರುವಂತಹ ಮಹಿಳೆಯರನ್ನು ಕೂಸಿನ ಮನೆ ಕೇರಟೇಕರ್ಸ (ಆರೈಕೆದಾರರು) ಎಂದು ಸ್ಥಳಿಯವಾಗಿ ನೇಮಕ ಮಾಡಿರುವವ-ರಿಗೆ 07 ದಿನಗಳ ತರಬೇತಿ ನೀಡುವ ಮೂಲಕ ಕೂಸಿನ ಮನೆ ಕೇಂದ್ರಗಳನ್ನು ಪ್ರಾರಂಭಿಸಲಾಗುವುದು ಎಂದು ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ತಾಪಂ ಸಿಬ್ಬಂದಿಗಳಾದ ನಜರೀನ ಕೊಣ್ಣೂರ ಹಾಗೂ ಯಶೋಧಾ ಸಂಕನವರ ಡಿಟಿಸಿ ಸಂಪನ್ಮೂಲ ವ್ಯಕ್ತಿ ಉಮೇಶ ವಗ್ಗರ, ಐ.ಇ.ಸಿ ಸಂಯೋಜಕ ಶಂಕರ ಗುಜನಟ್ಟಿ ಹಾಜರಿದ್ದರು.

**ಚೂರು-ಪಾರು**

## ಜಿಲ್ಲಾ ಮಟ್ಟದ ಸಿರಿಧಾನ್ಯ-ಮರೆತುಹೋದ ಖಾದ್ಯಗಳ ಪಾಕ ಸ್ಪರ್ಧೆ

ಕಾರವಾರ - ಕೃಷಿ ಇಲಾಖೆಯಿಂದ ರಾಜ್ಯಮಟ್ಟದ ಸಿರಿಧಾನ್ಯ ಮತ್ತು ಮರೆತುಹೋದ ಖಾದ್ಯಗಳ ಪಾಕ ಸ್ಪರ್ಧೆಯ ಪೂರ್ವಭಾವಿಯಾಗಿ ಜಿಲ್ಲಾ ಮಟ್ಟದಲ್ಲಿ ಸಿರಿಧಾನ್ಯ ಮತ್ತು ಮರೆತುಹೋದ ಖಾದ್ಯಗಳ ಪಾಕ ಸ್ಪರ್ಧೆಯನ್ನು ಡಿ. 23 ರಂದು ಬೆಳಗ್ಗೆ 10 ಗಂಟೆಗೆ ಶಿರಸಿಯ ಅರಣ್ಯ ಮಹಾವಿದ್ಯಾಲಯದ ಆವರಣದಲ್ಲಿ ಏರ್ಪಡಿಸಲಾಗಿದೆ.

ಸ್ಪರ್ಧೆಯಲ್ಲಿ ವಿದ್ಯಾರ್ಥಿಗಳನ್ನು ಹೊರತುಪಡಿಸಿ ಜಿಲ್ಲೆಯ ಎಲ್ಲಾ ಸಾರ್ವಜನಿಕರು ಭಾಗವಹಿಸಿಬಹುದು. ಸಸ್ಯಹಾರ ತಿನಿಸುಗಳಿಗೆ ಮಾತ್ರ ಅವಕಾಶವಿದೆ. ಪ್ರತಿ ಸ್ಪರ್ಧಿಗೆ ಸಿರಿಧಾನ್ಯದ ಒಂದೇ ತಿನಿಸು (ಅಡುಗೆ) ಸಿಹಿ ಅಥವಾ ಖಾರ ಮಾಡಲು ಜೊತೆಗೆ ಒಂದು ಮರೆತುಹೋದ ಖಾದ್ಯವನ್ನು ಮಾಡಲು ಅವಕಾಶವಿರುತ್ತದೆ. ಅರ್ಜಿಯಲ್ಲಿ ನಮೂದಿಸಿದ ತಿನಿಸುಗಳನ್ನು ಮನೆಯಲ್ಲಿಯೇ ತಯಾರಿಸಿ ಸ್ಪರ್ಧೆಯಲ್ಲಿ ಪ್ರದರ್ಶಿಸಬೇಕು. ವಿಜೇತರಿಗೆ ನಗದು ಬಹುಮಾನ ನೀಡಲಾಗುತ್ತದೆ. ಪ್ರಥಮ ವಿಜೇತರು ಜನವರಿ 2025 ರಲ್ಲಿ ನಡೆಯುವ ರಾಜ್ಯ ಮಟ್ಟದ ಪಾಕ ಸ್ಪರ್ಧೆಯಲ್ಲಿ ಭಾಗವಹಿಸಬೇಕು.

ಅಭ್ಯರ್ಥಿಗಳು ತಮ್ಮ ಭಾವಚಿತ್ರದೊಂದಿಗೆ ಹೆಸರು ವಿಳಾಸ ಮತ್ತು ತಯಾರಿಸುವ ಖಾದ್ಯಕ್ಕೆ ಬೇಕಾಗುವ ಸಾಮಾಗ್ರಿಗಳು, ತಯಾರಿಸಲು ಬೇಕಾಗುವ ಸಮಯ ಹಾಗೂ ತಯಾರಿಸುವ ವಿಧಾನ ಸಂಕ್ಷಿಪ್ತ ಮಾಹಿತಿಯೊಂದಿಗೆ ಅರ್ಜಿಯನ್ನು ಕಚೇರಿಯ ಇ ಮೇಲ್: uk-millets@gmail.com ಗೆ ಖುದ್ದಾಗಿ ಅಥವಾ ಅಂಚೆ ಮೂಲಕ ಜಂಟಿ ಕೃಷಿ ನಿರ್ದೇಶಕರು ಕಾರವಾರ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 8277933002 ಅಥವಾ 8277933064 ನ್ನು ಸಂಪರ್ಕಿಸುವಂತೆ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಕೊಪ್ಪಳದಲ್ಲಿ ವಾಕ್ ಇನ್ ಇಂಟರ್‌ವ್ಯೂವ್

ಕೊಪ್ಪಳ : ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಿಂದ ವಾಕ್ ಇನ್ ಇಂಟರ್‌ವ್ಯೂವ್ ಡಿಸೆಂಬರ್ 18ರಂದು ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 1.30ರ ವರೆಗೆ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಆಯೋಜಿಸಲಾಗಿದೆ.

ಈ ವಾಕ್ ಇನ್ ಇಂಟರ್‌ವ್ಯೂವ್‌ದಲ್ಲಿ ಖಾಸಗಿ ಸಂಸ್ಥೆಗಳು ತಮ್ಮಲ್ಲಿನ ಖಾಲಿ ಹುದ್ದೆಗಳಿಗೆ ಪಿಯುಸಿ ತತ್ಸಮಾನ, ಯಾವುದೇ ಪದವಿ ಅಭ್ಯರ್ಥಿಗಳನ್ನು ನೇರ ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಭಾಗವಹಿಸಲು ಯಾವುದೇ ಶುಲ್ಕ ಇರುವುದಿಲ್ಲ ಎಲ್ಲರಿಗೂ ಉಚಿತ ಪ್ರವೇಶವಿರುತ್ತದೆ.

ಈ ವಾಕ್ ಇನ್ ಇಂಟರ್‌ವ್ಯೂವ್‌ದಲ್ಲಿ ಭಾಗವಹಿಸುವ ಆಸಕ್ತಿಯುಳ್ಳ 18 ರಿಂದ 30 ವರ್ಷದ ವರೆಗಿನ ಅರ್ಹ ವಿದ್ಯಾರ್ಹತೆ ಹೊಂದಿದ ನಿರುದ್ಯೋಗಿ ಯುವಕ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ಎಲ್ಲ ಪ್ರಮಾಣ ಪತ್ರಗಳು 3 ಪ್ರತಿಗಳೊಂದಿಗೆ ಮತ್ತು ಆಧಾರ ಕಾರ್ಡಿನ ಪ್ರತಿ, ಬಯೋಡಾಟಾ (ರೆಜುಮ್), ಹಾಗೂ 02 ಪಾಸ್ ಪೋರ್ಟ ಅಳತೆಯ ಭಾವಚಿತ್ರಗಳೊಂದಿಗೆ ಈ ವಾಕ್ ಇನ್ ಇಂಟರ್ವ್ಯೂವಲ್ಲಿ ಭಾಗವಹಿಸಿ, ಉದ್ಯೋಗದ ನೆರವನ್ನು ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಆಡಳಿತ ಭವನ, ಮೊದಲನೇ ಮಹಡಿ, ಕೊಪ್ಪಳ ಇವರನ್ನು ಅಥವಾ ದೂ.ಸಂ: 08539-220859ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಮಾಜಿಕ ನ್ಯಾಯ: ತರಬೇತಿಗೆ ಅರ್ಜಿ ಆಹ್ವಾನ

ಕೊಪ್ಪಳ : ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದಿಂದ ಪರಿಶಿಷ್ಟ ಜಾತಿ ಭೋವಿ ಜನಾಂಗ ಯುವಕ ಯುವತಿಯರಿಗೆ ಸಾಮಾಜಿಕ ನ್ಯಾಯದ ನಾಯಕತ್ವದ ತರಬೇತಿಗೆ ಅರ್ಜಿ ಆಹ್ವಾನಿಸಿಲಾಗಿದೆ.

ಪರಿಶಿಷ್ಟ ಜಾತಿ ಭೋವಿ ಜನಾಂಗದ ಯುವಕ ಮತ್ತು ಯುವತಿಯರಿಗೆ ಅಸ್ಪೃಶ್ಯತೆ ಆಚರಣೆಯ ನಿವಾರಣೆ, ಸಂವಿಧಾನ ಹಾಗೂ ಸಾಮಾಜಿಕ ನ್ಯಾಯದ ಕಾನೂನುಗಳ ಕುರಿತು ಜಾಗೃತಿ ಮೂಡಿಸುವ ನಾಯಕತ್ವದ ತರಬೇತಿ ನೀಡಿ ಸಮುದಾಯ ಸಂಪನ್ಮೂಲ ವ್ಯಕ್ತಿಗಳನ್ನಾಗಿ ರೂಪಿಸಲು ಕರ್ನಾಟಕದಲ್ಲಿ ನಾಲ್ಕು ವಿಭಾಗಗಳಲ್ಲಿ ಕಾರ್ಯಗಾರಗಳನ್ನು ಆಯೋಜಿಸಲು ಉದ್ದೇಶಿಸಲಾಗಿದೆ.

ಈ ಕಾರ್ಯಗಾರದಲ್ಲಿ ಆಸಕ್ತ ಅಭ್ಯರ್ಥಿಗಳಿಗೆ ವಸತಿ ಸಹಿತವಾಗಿ ತರಬೇತಿ ಆಯೋಜಿಸಲು ಹಾಗೂ ಭೋವಿ ಸಮುದಾಯದ ಯುವ ಜನರಗೆ ಸಂವಿಧಾನ ಮತ್ತು ಸಾಮಾಜಿಕ ನ್ಯಾಯದ ಕಾನೂನುಗಳ ಕುರಿತು ಅರಿವು ಮೂಡಿಸಲು ಕಾನೂನು ಅನುಷ್ಠಾನದಲ್ಲಿರುವ ಸವಾಲುಗಳು ಮತ್ತು ಅವುಗಳನ್ನು ಹೇಗೆ ಬಗೆಹರಿಸಿಕೊಳ್ಳಬೇಕಂಬ ವಿಷಯಗಳ ಕುರಿತು ತರಬೇತಿ ನೀಡಲಾಗುವುದುರಿಂದ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದ್ದು, ಬೋವಿ ಸಮುದಾಯದ ಆಸಕ್ತ ಅಭ್ಯರ್ಥಿಗಳು ಡಿಸೆಂಬರ್ 31ರೊಳಗಾಗಿ ಖುದ್ದಾಗಿ ನಿಗಮದ ಜಿಲ್ಲಾ ಕಛೇರಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ ಜಿಲ್ಲಾಡಳಿತ ಭವನ 2ನೇ ಮಹಡಿ ಹೊಸಪೇಟೆ ರಸ್ತೆ ಕೊಪ್ಪಳ. ಕಚೇರಿಗೆ ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

## ಮುಧೋಳ: ಅತಿಥಿ ಬೋಧಕರ ಹುದ್ದೆಗೆ ಅರ್ಜಿ ಆಹ್ವಾನ

ಕೊಪ್ಪಳ : ಯಲಬುರ್ಗಾ ತಾಲ್ಲೂಕಿನ ಮುಧೋಳ ಪಟ್ಟಣದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 2024-25ನೇ ಶೈಕ್ಷಣಿಕ ಸಾಲಿನಲ್ಲಿ ಎಲೆಕ್ಟ್ರಿಷಿಯನ್ ಟ್ರೇಡ್ ವಿಭಾಗದಲ್ಲಿ ಬೋಧನೆ ಮಾಡಲು ಅತಿಥಿ ಬೋಧಕರ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಎನ್.ಟಿ.ಸಿ./ ಎನ್.ಎ.ಸಿ ವಿದ್ಯಾರ್ಹತೆ ಹೊಂದಿದ 3 ವರ್ಷ ಅನುಭವವಿರುವ ಅಥವಾ ಡಿ.ಇ.ಇ ವಿದ್ಯಾರ್ಹತೆ ಹೊಂದಿದ 2 ವರ್ಷ ಅನುಭವವಿರುವ ಅಥವಾ ಬಿಇ ಎಲೆಕ್ಟ್ರಿಕ್ ವಿದ್ಯಾರ್ಹತೆ ಹೊಂದಿದ 1 ವರ್ಷ ಅನುಭವವಿರುವ ಅತಿಥಿ ಬೋಧಕರು ಬೇಕಾಗಿದ್ದು, ಆಸಕ್ತರು ಡಿಸೆಂಬರ್ 23 ರೊಳಗಾಗಿ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಮಧೋಳ, ಇಲ್ಲಿಗೆ ತಮ್ಮ ಬಯೋಡಾಟ ಮತ್ತು ದಾಖಲಾತಿಗಳೊಂದಿಗೆ ಸಂದರ್ಶನಕ್ಕೆ ಖುದ್ದಾಗಿ ಹಾಜರಾಗಬೇಕು ಎಂದು ಕಾಲೇಜಿನ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಧಾರ್ಮಿಕ ಆಚರಣೆಗಳಿಂದಲೆ ನಮ್ಮ ದೇಶ ಸುಖ ಶಾಂತಿಯೊಂದಿಗೆ ಸಮೃದ್ಧಿಯಾಗಿದೆ



ಗೋಕಾಕ: ಧಾರ್ಮಿಕ ಆಚರಣೆಗಳಿಂದಲೆ ನಮ್ಮ ದೇಶ ಸುಖ ಶಾಂತಿಯೊಂದಿಗೆ ಸಮೃದ್ಧಿಯಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಲಖನ ಜಾರಕಿಹೊಳಿ ಹೇಳಿದರು.

ಶನಿವಾರದಂದು ಇಲ್ಲಿನ ಆದಿತ್ಯ ನಗರದ ಶ್ರೀ ಆಜಂನೇಯ ದೇವರ ಕಾರ್ತಿಕೋತ್ಸವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಧಾರ್ಮಿಕ ಆಚರಣೆಗಳಲ್ಲಿ ಪಾಲ್ಗೋಳುವುದರಿಂದ ದೇವರ ಅನುಗ್ರಹದೊಂದಿಗೆ ಪರಸ್ಪರರಲ್ಲಿ ಪ್ರೀತಿ ವಿಶ್ವಾಸ ವೃದ್ದಿಸುತ್ತದೆ. ಇಂತಹ ಆಚ-ರಣೆಗಳಲ್ಲಿ ಹೆಚ್ಚು ಪಾಲ್ಗೊಂಡು ದೇವರ ಕೃಪೆಗೆ ಪಾತ್ರರಾಗಿರಿ. ಇಂದಿನ ಯುವ ಪಿಳಿಗೆ ಸುಸಂಸ್ಕೃತರಾಗಿ ಸಮಾಜಮುಖಿ ಕಾರ್ಯಗಳಲ್ಲಿ ಪಾಲ್ಗೊಂಡು ಸಮಾಜಕ್ಕೆ ಕೊಡುಗೆ ನೀಡಿ ನಗರದ ಜನತೆಗೆ ಶಾಸಕರು ಹಾಗೂ ನಾವು ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿ ಸರ್ವಾಂಗೀಣ ಅಭಿವೃದ್ಧಿ ಮಾಡುತ್ತಿದ್ದೇವೆ. ಇನ್ನು ಹಲವಾರು ಯೋಜನೆಗಳ ಅನುಷ್ಠಾನ ಮಾಡಲಾಗುವುದು. ಜನತೆ ಇದರ ಸದುಪಯೋಗ ಪಡೆಸಿಕೊಳ್ಳವಂತೆ ಕರೆ ನೀಡಿದರು.

ಈ ಸಂದರ್ಭದಲ್ಲಿ ನಗರಸಭೆ ಅಧ್ಯಕ್ಷ ಪ್ರಕಾಶ ಮುರಾರಿ, ಸದಸ್ಯರಾದ ಸಿದ್ದಪ್ಪ ಹುಚ್ಚರಾಮಗೋಳ, ಅರ್ಚನಾ ಮಾಳಗಿ, ಶ್ರೀ ಆಜಂನೇಯ ದೇವಸ್ಥಾನ ಟ್ರಸ್ಟ್ ಕಮಿಟಿಯ ಅಧ್ಯಕ್ಷ ಕೆಂಚಪ್ನ ಗೌಡಪ್ಪಗೋಳ, ಸದಸ್ಯರುಗಳಾದ ರಮೇಶ್ ಮಾವಿನಗಿಡದ, ಸಂಜೀವ ಕದಂ, ಪಂಡಿತಪ್ಪ ಕಂಬಳಿ, ಯಲಪ್ಪ ಪೂಜೇರಿ, ದೇವೇಂದ್ರ ತಳವಾರ, ಮಹಾಲಿಂಗ ನಾಗನ್ನವರ, ಅಶೋಕ್ ದಯನ್ನವರ, ಚಂದ್ರಶೇಖರ್ ಕಾಡನ್ನವರ, ಲಕ್ಷ್ಮಣ ಓಜಪ್ಪಗೋಳ, ಚಿದಾನಂದ ಮೆನಶಿನಕಾಯಿ, ರುದ್ರಪ್ಪ ವಾಲಿ, ಸಂತೋಷ ಗುದಗಗೋಳ ಉಪಸ್ಥಿತರಿದ್ದರು.

# ಕಡಲೆ ಬೆಳೆಯಲ್ಲಿ ಸೊರಗು ರೋಗ ನಿರ್ವಹಣೆಗೆ ರೈತರು ಅನುಸರಿಸಬೇಕಾದ ಕ್ರಮಗಳು



ಧಾರವಾಡ : ಧಾರವಾಡ ಜಿಲ್ಲೆಯಾದ್ಯಂತ ಹಿಂಗಾರು ಹಂಗಾಮಿನಲ್ಲಿ ಕಡಲೆ ಬೀಜಗಳು 1,81,595 ಹೆಕ್ಟರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ. ಮುಖ್ಯ ಹಿಂಗಾರು ಬೆಳೆ ಆಗಿರುವ ಕಡಲೆಯಲ್ಲಿ ಅಲ್ಲಲ್ಲಿ ಸೊರಗು ರೋಗದ ಬಾಧೆ ಕಂಡು ಬರುತ್ತಿದ್ದು, ಪ್ರಾರಂಭದಲ್ಲಿ ಸ್ಥಾನಿಕವಾಗಿ 1 ಅಥವಾ 2 ಗಿಡಗಳಲ್ಲಿ ಕಂಡುಬಂದು ನಂತರ ಸಂಪೂರ್ಣ ಹೊಲವು ಬಾಧೆಗೆ ಒಳಪಡುವ ಸಾಧ್ಯತೆಯಿರುವುದು. ರೈತರು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು.

ಕಡಲೆಯಲ್ಲಿ ಸೊರಗು ರೋಗ ನಿರ್ವಹಣೆ: ಪ್ರತಿ ವರ್ಷ ಪದೇಪದೇ ಅದೇ ಕ್ಷೇತ್ರದಲ್ಲಿ ಕಡಲೆ ಬೆಳೆಯನ್ನು ಅಥವಾ ಮುಂಗಾ-ರಿನಲ್ಲಿ ದ್ವಿದಳ ಧಾನ್ಯ ಬೆಳೆದು ಹಿಂಗಾ-ರಿನಲ್ಲಿ ಕಡಲೆ ಬೆಳೆಯುವುದರಿಂದ ಸೊರಗು ರೋಗದ ಬಾಧೆ ಹೆಚ್ಚಾಗುತ್ತದೆ ಆದ್ದರಿಂದ ಬೆಳೆ ಪರಿವರ್ತನೆ ಅವಶ್ಯ. ಸೊರಗು ರೋಗ ಬಾಧೆಗೊಳಗಾದ ಸಸಿಗಳನ್ನು ಪ್ರಾರಂಭಿಕ ಹಂತದಲ್ಲಿಯೇ ಕಿತ್ತು ನಾಶಪಡಿಸಬೇಕು ನಂತರ ರೋಗ ಹರಡದಂತೆ ಸಂಯುಕ್ತ ಶಿಲೀಂಧ್ರನಾಶಕ (ಶೇ 37.5 ಕಾರ್ಬಕ್ಸಿನ್ + ಶೇ 37.5 ಥೈರಾಮ್ ಡಬ್ಲ್ಯೂ.ಎಸ್.)ವನ್ನು 2 ಗ್ರಾಂ ಪ್ರತಿ ಲೀಟರ್‌ಗೆ ನೀರಿಗೆ ಬೆರಸಿ ಬಾಧಿತ ಸಸಿಗಳ ಸುತ್ತಮುತ್ತ ಬೇರುಗಳಿಗೆ ಉಣಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರಕ್ಕೆ ಸಂಪರ್ಕಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಂಥಾಲಯ ವಿಜ್ಞಾನ ತರಬೇತಿಗೆ ಅರ್ಜಿ ಆಹ್ವಾನ

ಧಾರವಾಡ : ಸಾರ್ವಜನಿಕ ಗ್ರಂಥ-ಾಲಯ ಇಲಾಖೆಯು ರಾಜ್ಯದ ನಾಲ್ಕು ಕಂದಾಯ ವಿಭಾಗಗಳಾದ ಮಂಗಳೂರು (ಮೈಸೂರು ವಿಭಾಗ), ಬೆಂಗಳೂರು, ಧಾರವಾಡ (ಬೆಳಗಾವಿ ವಿಭಾಗ) ಮತ್ತು ಕಲಬುರ್ಗಿ ವಿಭಾಗಗಳಲ್ಲಿ ಆರು ತಿಂಗಳ ಅವಧಿಯ ಗ್ರಂಥಾಲಯ ವಿಜ್ಞಾನ ತರಬೇತಿಗಾಗಿ ಅರ್ಜಿ ಆಹ್ವಾನಿಸಿದೆ.

ಆಸಕ್ತ ಅಭ್ಯರ್ಥಿಗಳು ಆಯಾ ಕಂದಾಯ ವಿಭಾಗಗಳಿಂದ ಅರ್ಜಿ ಪಡೆದು, ಅವಶ್ಯಕ ದಾಖಲೆಗಳೊಂದಿಗೆ ಜನೆವರಿ 10, 2025 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಆಯಾ ನಗರ ಕೇಂದ್ರ ಗ್ರಂಥಾಲಯದ ಕಛೇರಿ ವೇಳೆಯಲ್ಲಿ ಧಾರವಾಡ ದೂರವಾಣಿ ಸಂಖ್ಯೆ:0836-2441683,2448183, ಬೆಂಗಳೂರು ದೂರವಾಣಿ ಸಂ:080-22212128, ಮಂಗಳೂರು ದೂರವಾಣಿ ಸಂ:0834-2425873, ಕಲಬುರ್ಗಿ ದೂರವಾಣಿ ಸಂ:08472-221543 ಗೆ ಸಂಪರ್ಕಿಸಹುದು ಎಂದು ಧಾರವಾಡ ನಗರ ಕೇಂದ್ರ ಗ್ರಂಥಾಲಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಯ್ಯಪ್ಪ ಭಕ್ತವೃಂದಿದ್ದ 7ನೇ ವಾರ್ಷಿಕ ಶ್ರೀ ಅಯ್ಯಪ್ಪ ಸ್ವಾಮಿಯ ಮಹಾಪೂಜೆ



ಯರಗಟ್ಟಿ : ಸಮೀಪದ ಮುರಕಟ್ನಾಳ ಗ್ರಾಮದ ಅಯ್ಯಪ್ಪ ಭಕ್ತವೃಂದಿದ್ದ 7ನೇ ವಾರ್ಷಿಕ ಶ್ರೀ ಅಯ್ಯಪ್ಪ ಸ್ವಾಮಿಯ ಮಹಾಪೂಜೆಯು ಬಸವೇಶ್ವರ ರಂಗ ಮಂದಿರದಲ್ಲಿ ಜರುಗಿತು.

ಸಾಲಹಳ್ಳಿ ರುದ್ರಗೌಡ ಗುರುಸ್ವಾಮಿಗಳು ಬಹು ವಿಜೃಂಭಣೆಯಿಂದ ಪೂಜೆಯ ವಿದಿ ವಿದಾನಗಳನ್ನು ನೇರವೇರಿಸಿದರು.

ಈ ವೇಳೆ ಅಯ್ಯಪ್ಪಸ್ವಾಮಿ ಅಭಿಷೇಕ, ಪುಷ್ಪಾರ್ಚನೆ, ಬಿಲ್ವಾರ್ಚನೆ, ಮಹಾಮಂಗಳಾರತಿ ನಂತರ ಮಹಾಪ್ರಸಾದ ಜರುಗಿತು.

ಈ ಸಂದರ್ಭದಲ್ಲಿ ಕಟಕೋಳ ಈರಣ್ಣಾ ಗುರುಸ್ವಾಮಿಗಳು, ಸತ್ತಿಗೇರಿ ಈರಣ್ಣಾ ಗುರುಸ್ವಾಮಿಗಳು, ಕೆ.ಚಂದರಗಿ ಬಸವರಾಜ ಗುರುಸ್ವಾಮಿಗಳು, ಬನ್ನೂರ ಶಿಂಧೆ ಗುರುಸ್ವಾಮಿಗಳು, ಉದಪುಡಿ ಕೃಷ್ಣಾ ಗುರುಸ್ವಾಮಿಗಳು, ಕೊಡ್ಲಿವಾಡ ರಮೇಶ ಗುರುಸ್ವಾಮಿಗಳು, ಮುರಕಟ್ನಾಳ ಸೋಮು ಗುರುಸ್ವಾಮಿಗಳು ಸೇರಿದಂತೆ ಸುತ್ತಲಿನ ಗ್ರಾಮಗಳ ಗುರುಸ್ವಾಮಿಗಳು ಮತ್ತು ಮಾಲಾದಾರಿಗಳು ಇದ್ದರು.

## ಡಾ. ಬಿ.ಆರ್.ಅಂಬೇಡ್ಕರ ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

ಗದಗ : ಡಾ: ಬಿ.ಆರ್.ಅಂಬೇಡ್ಕರ ಅಭಿವೃದ್ಧಿ ನಿಗಮದ ವ್ಯಾಪ್ತಿಗೆ ಬರುವ ಜನಾಂಗದ ಫಲಾಪೇಕ್ಷಿಗಳಿಗೆ ಮಾತ್ರ ನಿಗಮದಿಂದ ಅನುಷ್ಠಾನಗೊಳ್ಳುತ್ತಿರುವ ಸ್ವಯಂ ಉದ್ಯೋಗ ನೇರ ಸಾಲ- ಕುರಿ ಸಾಗಾಣಿಕೆ, ಸ್ವಾವಲಂಬಿ ಸಾರಥಿ- ಫುಡ್ ಕಾರ್ಟ ಯೋಜನೆಗಳಡಿ 2024-25 ನೇ ಸಾಲಿಗೆ ಅರ್ಹ ಫಲಾಪೇಕ್ಷಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಸಲ್ಲಿಸಬೇಕಾದ ಅರ್ಹ ಫಲಾಪೇಕ್ಷಿಗಳು ಗ್ರಾಮ-1/ ಕರ್ನಾಟಕ-1/ ನಿಮ್ಮ ಹತ್ತಿರದ ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಬೇಕಾಗಿದ್ದು, ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಡಿಸೆಂಬರ್ 29 ಆಗಿರುತ್ತದೆ. ಹಾಗೂ 2023-24 ಮತ್ತು 2024-25ನೇ ಸಾಲಿನಲ್ಲಿ ಈ ಯೋಜನೆಗಳಡಿ ಅರ್ಜಿ ಸಲ್ಲಿಸಿದವರು ಮತ್ತೊಮ್ಮೆ ಅರ್ಜಿ ಸಲ್ಲಿಸಲು ಅವಕಾಶವಿರುವದಿಲ್ಲ, ಮತ್ತು ಈಗಾಗಲೇ ಈ ಯೋಜನೆಗಳಡಿ ಅರ್ಜಿ ಸಲ್ಲಿಸಿದವರು ಉದ್ದೇಶ ಬದಲಾವಣೆ ಮಾಡಲು ಇಚ್ಚಿಸಿದಲ್ಲಿ ನೇರವಾಗಿ ನಿಗಮದ website: https://swdcorp.karnataka.gov.in/ADCL Portal ನಲ್ಲಿ ಉದ್ದೇಶ ಬದಲಾವಣೆ ಮಾಡಿಕೊಳ್ಳುವ ಬಗ್ಗೆ ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರು, .ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.

## ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಯಡಿ ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ವಿಜಯಪುರ : 2024-25ನೇ ಸಾಲಿನ ಡಾ.ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಅನುಷ್ಠಾನಗೊಳಿಸುತ್ತಿರುವ ಸ್ವಯಂ ಉದ್ಯೋಗ ನೇರ ಸಾಲ ಯೋಜನೆಯಡಿ ಕುರಿ ಸಾಕಾಣಿಕೆ ಹಾಗೂ ಸ್ವಾವಲಂಬಿ ಸಾರಥಿ ಯೋಜನೆಯಡಿಯಲ್ಲಿ ಫುಡ್ ಕಾರ್ಟ್‌ಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿದಾರರು ನೇರವಾಗಿ ಸೇವಾಸಿಂಧು ಪೋರ್ಟಲ್‌ನಲ್ಲಿ ಅಥವಾ ಕರ್ನಾಟಕ ಒನ್, ಗ್ರಾಮ ಒನ್ ಮತ್ತು ಬೆಂಗಳೂರು ಒನ್‌ಗಳಲ್ಲಿ ಆನಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಡಿಸೆಂಬರ್ 29 ಅರ್ಜಿ ಸಲ್ಲಿಸಲು ಕೊನೆಯ ದಿವಾಗಿದೆ. ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಡಾ. ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರನ್ನು ಸಂಪರ್ಕಿಸುವಂತೆ ಜಿಲ್ಲಾ ವ್ಯವಸ್ಥಾಪಕರ ಪ್ರಕಟಣೆ ತಿಳಿಸಿದೆ.

# ರಾಮದುರ್ಗ : ವೀರಭದ್ರೇಶ್ವರ ಏತ ನೀರಾವರಿ ಕಾಮಗಾರಿಯಿಂದ ಶೀಘ್ರ ರೈತರ ಜಮೀನಿಗೆ ನೀರು

ರಾಮದುರ್ಗ - ರೈತರ ನೀರಾವರಿ ಯೋಜನೆ ನನಸಾಗಿ ಉಳಿದ ವೀರಭದ್ರೇಶ್ವರ ಏತ ನೀರಾವರಿ ಯೋಜನೆಯ ಕಾಮಗಾರಿ ಮುಕ್ತಾಯ ಹಂತದಲ್ಲಿದೆ. ಮುಂಬರುವ ಚುನಾವಣೆ ಘೋಷಣೆಗೂ ಎರಡು ವರ್ಷ ಮೊದಲೇ ಯೋಜನೆಯಿಂದ ರೈತರ ಜಮೀನುಗಳಿಗೆ ನೀರು ತಲುಪಲುವಂತೆ ಮಾಡುತ್ತೇನೆ ಎಂದು ವಿಧಾನಸಭೆ ಮುಖ್ಯ ಸಚೇತಕ ಅಶೋಕ ಪಟ್ಟಣ ಹೇಳಿದರು.

ತಾಲೂಕಿನ ಗೋಡಚಿ ವೀರಭದ್ರೇಶ್ವರ ಜಾತ್ರಾ ಮಹೋತ್ಸವ ನಿಮಿತ್ತ ಗೊಡಚಿ ಪಂಚಾಯಿತಿ ಕಾರ್ಯಾಲಯದ ಆವರಣದಲ್ಲಿ ಏರ್ಪಡಿಸಿದ್ದ ವಸ್ತು ಪ್ರದರ್ಶನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವೀರಭದ್ರೇಶ್ವರ ಟ್ರಸ್ಟ ಕಮಿಟಿಯವರು ಗೊಡಚಿ ಕ್ಷೇತ್ರವನ್ನು ಅಭಿವೃದ್ಧಿಪಡಿಸಿ, ಧರ್ಮಸ್ಥಳ ಮಾದರಿಯಂತೆ ಅಭಿವೃದ್ಧಿ ಮಾಡಿದಲ್ಲಿ ರಾಜ್ಯದಲ್ಲಿ ತಾಲೂಕಿನ ಕೀರ್ತಿ ಮತ್ತಷ್ಟು ಹೆಚ್ಚಲಿದೆ. ಎಲ್ಲ ಧರ್ಮಿಯರು ಸೇರಿ ಆಚರಿಸುವ ಜಾತ್ರೆ ಉತ್ಸವಗಳು ಎಲ್ಲರನ್ನು ಒಂದುಗೂಡಿಸುತ್ತದೆ. ಜಾತ್ರೆಯಲ್ಲಿ ಹೆಚ್ಚು ಮಾರಾಟವಾಗುವ ಬಳವಲು ಹಾಗೂ ಬೋರೆ ಹಣ್ಣಿನ ಘಮ ಇನ್ನಷ್ಟು ಹೆಚ್ಚಾಗಲಿ ಎಂದು ಅಭಿಪ್ರಾಯಪಟ್ಟರು.

ರಾಮದುರ್ಗದ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾಲಯದ ಮಾತಾ ರಾಜಯೋಗಿನಿ ವೈಶಾಲಿ ಅವರು ಮಾತನಾಡಿ, ಭಾರತ ದೇಶದಲ್ಲಿ ಪ್ರೀತಿ ಕರುಣೆ ತುಂಬಿದ ಉತ್ಸವಗಳು ಪ್ರತಿ ತಿಂಗಳು ನಡೆಯುತ್ತಲೆ ಇರುತ್ತವೆ. ಉತ್ಸವಗಳ ನೆಪದಲ್ಲಿ ಸರ್ವರೂ ಕೂಡಿಕೊಂಡು ಸಹಬಾಳ್ವೆಯಿಂದ ಹಬ್ಬಗಳನ್ನು ಆಚರಿಸಿದಲ್ಲಿ ಅವುಗಳಿಗೆ ಬೆಲೆ ಬರುತ್ತದೆ ಎಂದು ಹೇಳಿದರು.

ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಬಸವರಾಜ ಐನಾಪೂರ ಪ್ರಾಸ್ತಾವಿಕವಾಗಿ ಮಾತನಾಡಿ, ಕೃಷಿ, ಅರಣ್ಯ, ಪಂಚಾಯತ್ ರಾಜ್ ಇಲಾಖೆ, ರೇಷ್ಮೆ ಸೇರಿದಂತೆ ವಿವಿಧ ಇಲಾಖೆಯಿಂದ ರೈತ ವರ್ಗ ಹಾಗೂ ಜನ ಸಾಮಾನ್ಯರಿಗೆ ಸರಕಾರದಿಂದ ದೊರೆಯುವ ಸೌಲಭ್ಯಗಳ ಮಾಹಿತಿ ನೀಡುವುದು ವಸ್ತು ಪ್ರದರ್ಶನದ ಉದ್ದೇಶವಾಗಿದೆ. ಇವುಗಳ ಲಾಭ ಪಡೆದು ಕೃಷಿಯಲ್ಲಿ ಪ್ರಗತಿ ಸಾಧಿಸಬೇಕೆಂದು ರೈತ-ರಿಗೆ ಕರೆ ನೀಡಿದರು.




ತಾಲೂಕಿನ ಕಿಲ್ಲಾತೊರಗಲ್ಲ ಗಚ್ಚಿನ ಹಿರೇಮಠದ ಶ್ರೀಚನ್ನಮಲ್ಲ ಶಿವಾಚಾರ್ಯ ಸ್ವಾಮೀಜಿ, ಗೊಡಚಿ ವಿಮಲಖೇಡದ ಶ್ರೀಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ, ಶ್ರೀಮುಪ್ಪಯ್ಯ ಶಾಸ್ತ್ರೀ ಹಿರೇಮಠ ಸಮಾರಂಭದ ಸಾನಿಧ್ಯ ವಹಿಸಿದ್ದರು. ಗೊಡಚಿ ಗ್ರಾಪಂ ಅಧ್ಯಕ್ಷೆ ಲಕ್ಕವ್ವ ವಗ್ಗರ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ಗೊಡಚಿ ಕ್ಷೇತ್ರದ ಧರ್ಮಾಧಿಕಾರಿಗಳಾದ ಶ್ರೀಮಂತ ಸಂಗ್ರಾಮಸಿಂಹ ಶಿಂಧೆ, ಶ್ರೀಮಂತ ಸಂ-ಜಯಸಿಂಹ ಶಿಂಧೆ, ಗ್ರಾ.ಪಂ. ಉಪಾಧ್ಯಕ್ಷ ಮಾಬುಸುಬಾನಿ ಮುನವಳ್ಳಿ, ತಹಶೀಲ್ದಾರ್ ಪ್ರಕಾಶ ಹೊಳೆಪ್ಪಗೋಳ, ತೋಟಗಾರಿಕೆ ಇಲಾಖೆ ಹಿರಿಯ ಸಹಾಯಕ ನಿರ್ದೇಶಕಿ ಸಂಗೀತಾ ಕುರೇರ, ಸಹಾಯಕ ಕೃಷಿ ನಿರ್ದೇಶಕ ಎಸ್.ಎಫ್. ಬೆಳವಟಗಿ, ಪಶು ವೈದ್ಯಾಧಿಕಾರಿ ಡಾ. ಗಿರೀಶ ಪಾಟೀಲ, ಹೆಸ್ಕಾಂ ಉಪ ವಿಭಾಗದ ಎಇಇ ಶಿವಪ್ರಕಾಶ ಕರಡಿ, ಸಿಪಿಐ ಐ.ಆರ್. ಪಟ್ಟಣಶೆಟ್ಟಿ, ಸಾಮಾಜಿಕ ಅರಣ್ಯ ಅಧಿಕಾರಿ ದಾನಮ್ಮ ಗುಂಜಗಾವಿ, ಕಟಕೋಳ ವೈದ್ಯಾಧಿಕಾರಿ ಎಂ.ಎಸ್. ಶಾಲದಾರ, ಜಿ.ಪಂ. ಮಾಜಿ ಸದಸ್ಯ ಜಹೂರ ಹಾಜಿ, ಪಿಡಿಓ ಸಿ.ಕೆ. ಕೊಪ್ಪದ, ಕಾರ್ಯದರ್ಶಿ ವಿ.ಎಂ. ಯಡಹಳ್ಳಿ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಗ್ರಾಪಂ ಸದಸ್ಯರು ಉಪಸ್ಥಿತರಿದ್ದರು.

## ಯಶಸ್ವಿಯಾಗಿ 25ದಿನ ಪೂರೈಸಿದ ಉಗ್ರಾವತಾರ



ಸತತ ೨೫ ದಿನಗಳ ಕಾಲ ಯಶಸ್ವಿ ಪ್ರದರ್ಶನಗೊಳ್ಳುವ ಮೂಲಕ 'ಉಗ್ರಾವತಾರ' ಚಿತ್ರ ಮುನ್ನುಗ್ಗುತ್ತಿದೆ. ಈ ಖುಷಿ ಆಚ–'ರಿಸಲು ನಿರ್ಮಾಪಕ ಸತೀಶ್ ಮತ್ತು ನಿರ್ದೇಶಕ ಗುರುಮೂರ್ತಿ ಸಂತೋಷ ಕಾರ್ಯಕ್ರಮ ಹಮ್ಮಿಕೊಂಡು ನೆನಪಿನ ಕಾಣಿಕೆ ನೀಡಿದರು.

ಪ್ರಿಯಾಂಕ ಮೇಡಂಡೆಡಿಕೇಶನ್, ಶ್ರಮ ಇಲ್ಲಿಯವರೆಗೆ ತಂದು ನಿಲ್ಲಿಸಿದೆ. ಅದರಿಂದಲೇ ಅವರಿಗೆ ಆಕ್ಷನ್‌ಕ್ವೀನ್ ಬಿರುದು ಬಂದಿದೆ. ಎಲ್ಲಾ ಕಡೆಗಳಲ್ಲಿ ಚೆನ್ನಾಗಿ ಓಡ್ತಾ ಇದೆ. ನಿಮ್ಮಗಳ ಪ್ರೋತ್ಸಾಹ ಹೀಗೆ ಇರಲಿ ಎಂಬುದು ನಿರ್ದೇಶಕರ ಸಂತಸದ ನುಡಿಯಾಗಿತ್ತು.

ಇದು ನನ್ನ ಜೀವನದಲ್ಲಿ ಮೈಲಿಗಲ್ಲು ಎನ್ನಬಹುದು. ನಟನೆ ಹಾಗೂ ದೈಹಿಕವಾಗಿ ಹೊಸ ಅನುಭವ. ಇಂತಹ ಸಾಹಸಮಯ ಪಾತ್ರ ಸೂಟ್ ಆಗುವುದಿಲ್ಲವೆಂದು ಎಲ್ಲರೂ, ಅಲ್ಲದೆ ಉಪ್ಪಿ ಸಹ ಹೇಳಿದ್ದರು. ಆದರೆ ನಾನು ಮೊಂಡು ಸ್ವಭಾವದವಳು. ಆಗೋಲ್ಲ ಅಂದರೆ ಅದನ್ನು ಮಾಡಬೇಕೆಂದು ಬಯಸುತ್ತೇನೆ. ಇದನ್ನು ನಿರ್ದೇಶಕರು ತಿಳಿದುಕೊಂಡು, ಅದರಂತೆ ಕೆಲಸ ತೆಗೆದುಕೊಂಡಿದ್ದಾರೆ. ಇದರ ಕ್ರೆಡಿಟ್ ಸಂಪೂರ್ಣ ತಂಡಕ್ಕೆ ಸಲ್ಲಬೇಕು. ಮುಖ್ಯವಾಗಿ ಮಾಧ್ಯಮದ ಸಹಕಾರ ಎಂದಿಗೂ ಮರೆಯಲಾಗದು. ಮಹಿಳಾ ಪ್ರಧಾನ ಚಿತ್ರಗಳು ಇತ್ತೀಚೆಗೆ ಕಡಿಮೆಯಾಗಿದೆ. ಅಂತಹುದರಲ್ಲಿ ಉಗ್ರಾವತಾರ ೨೫ ದಿನಕ್ಕೆ ಕಾಲಿಟ್ಟಿರುವುದು ಹೆಮ್ಮೆಯ ವಿಷಯವಾಗಿದೆ.

ಎಲ್ಲ ರೀತಿಯ ಪ್ರತಿಭೆಗಳು ಬಂದಾಗ ಮಾತ್ರ ಚಿತ್ರರಂಗ ಬೆಳೆಯುತ್ತೆ. ಇದನ್ನು ಛಾಲೆಂಜ್ ಎಂದು ತೆಗೆದುಕೊಂಡಿದ್ದಕ್ಕೂ ಸಾರ್ಥಕವಾಗಿದೆ. ಮುಂದೆಯೂ ಒಳ್ಳೆ ಅಂಶಗಳು, ತೂಕದ ಸಂದೇಶ ಇರುವ ಚಿತ್ರಗಳಲ್ಲಿ ಅಭಿನಯಿಸಲು ಪ್ರಯತ್ನ ಪಡುತ್ತೇನೆ ಎಂದರು ಪ್ರಿಯಾಂಕ ಉಪೇಂದ್ರ.

ನಿರ್ಮಾಪಕಿ ಅಕ್ಷತಾಸತೀಶ್, ಸಾಹಿತಿ ಕಿನ್ನಾಳ್‌ರಾಜ್, ಖಳನಟ–ರಾದ ಸೂರ್ಯಪ್ರವೀಣ್, ಅಭಿಲಾಷ್ ಉಳಿದಂತೆ ದರ್ಶನ್, ಅಂಕಿತಾಜಯರಾಮ್, ಜತ್ತಿ, ಚರಣ್, ಪೂಜಾ, ವಲ್ಲಿ, ಸಂಕಲನಕಾರ ಯುಡಿವಿ.ವೆಂಕಿ, ಸಾಹಸ ಸಂಯೋಜಕ ಮಾಸ್‌ಮಾದ–ಅಶೋಕ್, ಛಾಯಾಗ್ರಾಹಕ ನಂದಕಿಶೋರ್ ಮುಂತಾದವರು ಸುಂದರ ಸಮಯದಲ್ಲಿ ಹಾಜರಿದ್ದು ಖುಷಿಯನ್ನು ಹಂಚಿಕೊಂಡರು.

## ಧರ್ಮ ಕೀರ್ತಿರಾಜ್ ಮಾಸ್ ಅವತಾರ



ದಾಸರಹಳ್ಳಿ ಚಿತ್ರದ ಟ್ರೈಲರ್ ಬಿಡುಗಡೆ

ಪಿ.ಉಮೇಶ ನಿರ್ಮಾಣದ ಎಂ. ಆರ್. ಶ್ರೀನಿವಾಸ್ ನಿರ್ದೇಶನದಲ್ಲಿ ಧರ್ಮ ಕೀರ್ತಿರಾಜ್ ಅಭಿನಯದ ದಾಸರಹಳ್ಳಿ ಚಿತ್ರದ ಟ್ರೈಲರ್ ಬಿಡುಗಡೆಯಾಗಿದೆ. ಇತ್ತೀಚಿಗೆ ಚಿತ್ರದ ಟ್ರೇಲರ್ ಬಿಡುಗಡೆ ಮಾಡಲಾಯಿತು.

ಮಕ್ಕಳಿಗೆ ತಂದೆ ಸಪೋರ್ಟ್ ಇಲ್ಲದೆ ಹೋದರೆ ಮಕ್ಕಳು ಏನಾಗುತ್ತವೆ ಎಂಬ ಸ್ಪಷ್ಟ ಸಂದೇಶದ ಮೂಲಕ ದಾಸರಹಳ್ಳಿ ಚಿತ್ರಕ್ಕೆ ಕಥೆ ಹೆಣೆಯಲಾಗಿದೆ. ಶಾಲಾ ಮಕ್ಕಳ ಫೀಸ್ ಕಟ್ಟುವುದಕ್ಕೂ ಆಗದೆ ಕಳ್ಳತನಕ್ಕೆ ಇಳಿಯುವುದು ಸೇರಿ ಅನೇಕ ಸಮಸ್ಯೆಗಳು ಎದುರಾಗುತ್ತವೆ. ಆಗ ನಾಯಕ ನಟ ಆ ದಾಸರಹಳ್ಳಿಯನ್ನ ಹೇಗೆ ಮೆಟ್ರೋ ಸಿಟಿ ಹಂತಕ್ಕೆ ಕೊಂಡೊಯ್ಯುತ್ತಾನೆ ಎಂಬುದನ್ನು ಸಿನಿಮಾದಲ್ಲಿ ತೋರಿಸಲಾಗಿದೆ ಎನ್ನುತ್ತಾರೆ ನಿರ್ದೇಶಕ ಎಂ.ಆರ್.ಶ್ರೀನಿವಾಸ್.

ನಟ ಧರ್ಮ ಕೀರ್ತಿರಾಜ್ ಮಾತನಾಡಿ, ಈ ಚಿತ್ರದಲ್ಲಿ ಒಂದೊಳ್ಳೆ ಸಂದೇಶ ಇದೆ. ಕುಡಿತದಿಂದ ಏನಾಗುತ್ತೆ ಎಂಬುದೇ ಕಥೆ.ಚಿತ್ರ ನೋಡುಗರನ್ನು ಕಾಡುತ್ತದೆ. ಹಾಡುಗಳು ಮಾತ್ರ ತುಂಬಾ ಚೆನ್ನಾಗಿ ಬಂದಿದೆ ಎಂದರು. ಹಿರಿಯ ನಟ ಉಮೇಶ್ , ನಾಯಕನಟಿ ನೇಹಾ ಮಾತನಾಡಿದರು.

ತಾರಾಗಣದಲ್ಲಿ ಉಮೇಶ್ ರಾಜ್, ಥ್ರಿಲ್ಲರ್ ಮಂಜು, ಕೌರವ ವೆಂಕಟೇಶ್, ಜಾಗ್ವಾರ್ ಸಣ್ಣಪ್ಪ , ಎಂ ಎಸ್ ಉಮೇಶ್, ಹೊನ್ನವಳ್ಳಿ ಕೃಷ್ಣ, ಬಿರಾದರ್, ಬೆಂಗಳೂರು ನಾಗೇಶ್, ಶಿವಕುಮಾರ್ ಆರಾಧ್ಯ, ಮಿಮಿಕ್ರಿ ಗೋಪಿ, ೧೫೦ಕ್ಕೂ ಹೆಚ್ಚು ಹಿರಿಯ ಕಲಾವಿದರು ಅಭಿನಯಿಸುತ್ತಿದ್ದಾರೆ.

ಎಂ. ಎಸ್. ತ್ಯಾಗರಾಜ ಸಂಗೀತ,ಸಿ ನಾರಾಯಣ್ ಮತ್ತು ಬಾಲು ಛಾಯಾಗ್ರಹಣ ಆರ್. ಡಿ. ರವಿ (ದೊರೆರಾಜ್) ಸಂಕಲನ, ಥ್ರಿಲ್ಲರ್ ಮಂಜು, ಕೌರವ ವೆಂಕಟೇಶ್ ಜಾಗ್ವಾರ್ ಸಣ್ಣಪ್ಪ ಸಾಹಸ ಸಂಂ–ಯೋಜನೆ, ಶಿವರಾಜ್ ಚಿತ್ರಕಥೆ, ಸಂಭಾಷಣೆ ? ಶಿವರಾಜ್, ಸಾಯಿ ಕೃಷ್ಣ ಹೆಬ್ಬಾಳ, ತಾಂತ್ರಿಕ ನಿರ್ದೇಶನ ಶರಣ್ ಗದ್ವಾಲ್, ಗಹನ್ ನಾಯಕ್ ಸಹ ನಿರ್ದೇಶನವಿದೆ. ೨೦೨೫ರ ಫೆಬ್ರವರಿಯಲ್ಲಿ ಚಿತ್ರವನ್ನು ತೆರೆಗೆ ತರಲು ಚಿತ್ರತಂಡ ಸಜ್ಜಾಗಿದೆ.

## ಭೂಮಂತರ್ ಹಾಕಲು ಶರಣ್ ರೆಡಿ



ಜನವರಿ 10ಕ್ಕೆ ಜನರಮುಂದೆ

ಡಾರ್ಕ್ ಹ್ಯೂಮರಸ್ ಕಾಮಿಡಿ ಆಧಾರಿತ ಶರಣ್ ನಾಯಕ ನಟರಾಗಿ ಅಭಿನಯದ ' 'ಭೂಮಂತರ್' ಚಿತ್ರದ ಟ್ರೈಲರ್ ಇತ್ತೀಚೆಗೆ ಬಿಡುಗಡೆಯಾಯಿತು.

ತರುಣ್ ಸ್ಟುಡಿಯೋಸ್ ಲಾಂಛನದಲ್ಲಿ ತರುಣ್ ಶಿವಪ್ಪ ಹಾಗೂ ಮಾನಸ ತರುಣ್ ನಿರ್ಮಿಸಿ, ಕರ್ವ ಖ್ಯಾತಿಯ ನವನೀತ್ ನಿರ್ದೇಶನದಲ್ಲಿ ಭೂಮಂತರ್ ನಿರ್ಮಿಸಲಾಗಿದೆ.ಜನವರಿ 10 ರಂದು ಅದ್ದೂರಿಯಾಗಿ ಬಿಡುಗಡೆಯಾಗಲಿದೆ. ಟೀಸರ್ ಬಿಡುಗಡೆ ಸಮಾರಂಭಕ್ಕೆ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷರಾದ ಎನ್ ಎಂ ಸುರೇಶ್, ನಿರ್ಮಾಪಕ ಕೆ.ಮಂಜು ಸೇರಿದಂತೆ ಅನೇಕ ಗಣ್ಯರು ಆಗಮಿಸಿ ಶುಭ ಕೋರಿದರು. ಇಡೀ ಚಿತ್ರತಂಡದ ಪರಿಶ್ರಮದಿಂದ 'ಭೂ ಮಂತರ್' ಉತ್ತಮವಾಗಿ ಬಂದಿದೆ. ಬಹು ನಿರೀಕ್ಷಿತ ಈ ಚಿತ್ರ ಜನವರಿ 10 ರಂದು ಬಿಡುಗಡೆಯಾಗಲಿದೆ. ನಮ್ಮ ಚಿತ್ರಕ್ಕೆ ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದು ನಿರ್ಮಾಪಕ ತರುಣ್ ಶಿವಪ್ಪ ತಿಳಿಸಿದರು. ಇದೊಂದು ಡಾರ್ಕ್ ಹ್ಯೂಮರ್ ಜಾನರ್ ನ ಹಾರಾರ್ ಚಿತ್ರ. ಉತ್ತರ ಕಾಂಡ, ಶ್ರೀಲಂಕ, ಮೈಸೂರು, ಬೆಂಗಳೂರು ಮುಂತಾದ ಕಡೆ 60 ದಿನಗಳ ಚಿತ್ರೀಕರಣ ಮಾಡಿದ್ದೇವೆ. ಬೆಂಗಳೂರಿನಲ್ಲಿ ಎರಡು ಕೋಟಿ ರೂಪಾಯಿ ವೆಚ್ಚದಲ್ಲಿ ಹಾಕಲಾಗಿದ್ದ ಅದ್ದೂರಿ ಸೆಟ್ ನಲ್ಲೇ ಹೆಚ್ಚಿನ ಚಿತ್ರೀಕರಣ ನಡೆದಿದೆ. ಎಂದರು ನಿರ್ದೇಶಕ ನವನೀತ್.

ನಮ್ಮಿಬ್ಬರ ಕಾಂಬಿನೇಶ್ ನಲ್ಲಿ ಬಂದಿರುವ ಈ ಚಿತ್ರ ಬಿಡುಗಡೆಯಾಗುತ್ತಿದೆ. ಆದರೆ ಈ ಚಿತ್ರ ನಮ್ಮಿಬ್ಬರ ಹಿಂದಿನ ಚಿತ್ರಗಳಿಗಿಂತ ವಿಭಿನ್ನ ಎಂದು ನಟ ಚಿಕ್ಕಣ್ಣ ತಿಳಿಸಿದರು. ಶರಣ್ ಅವರ ಜೊತೆಗೆ ನಟಿಸಬೇಕೆಂಬ ಆಸೆ ಈ ಚಿತ್ರದ ಮೂಲಕ ಈಡೇರಿದೆ ಎಂದು ನಟಿ ಮೇಘನಾ ಗಾಂವ್ಕರ್ ತಿಳಿಸಿದರು. ಉತ್ತಮ ತಂಡದೊಂದಿಗೆ ಕೆಲಸ ಮಾಡಿದ್ದು ಖುಷಿಯಾಗಿದೆ ಎಂದು ನಟಿ ಅದಿತಿ ಪ್ರಭುದೇವ ಹೇಳಿದರು. ಚಿತ್ರದಲ್ಲಿ ಅಭಿನಯಿಸಿರುವ ಪ್ರಭು ಮುಂಡ್ಕರ್, ದಿಲೀಪ್ ರಾಜ್, ಧರ್ಮ, ನರಸಿಂಹ ಜಾಲಹಳ್ಳಿ, ರಜನಿ ಭಾರದ್ವಾಜ್ ಸಹ ತಮ್ಮ ಪಾತ್ರದ ಬಗ್ಗೆ ಮಾತನಾಡಿದರು.

ಸುಮಾರು ವರ್ಷಗಳಿಂದ ಸಾಮಾನ್ಯವಾಗಿ ಸಂಕ್ರಾಂತಿ ಸಮಯಕ್ಕೆ ಕನ್ನಡ ಚಿತ್ರಗಳನ್ನು ಬಿಡುಗಡೆ ಮಾಡುತ್ತಿರಲಿಲ್ಲ. ಆದರೆ ತರುಣ್ ಅವರು ಸಂಕ್ರಾಂತಿ ಸಮಯಕ್ಕೆ ಚಿತ್ರ ಬಿಡುಗಡೆ ಮಾಡುತ್ತಿದ್ದಾರೆ. ಉತ್ತಮ ಕಥಾಹಂದರ ಹೊಂದಿರುವ ಈ ಚಿತ್ರ ಗೆದ್ದೇ ಗೆಲ್ಲುತ್ತದೆ ಎಂಬ ನಂಬಿಕೆ ನನ್ನದು ಹಾಗೂ ಚಿತ್ರತಂಡದು. ? ಶರಣ್, ನಾಯಕ ನಟ

# ಬೆಳಗ್ಗೆ ಖಾಲಿ ಹೊಟ್ಟೆಗೆ ಬಾಳೆಹಣ್ಣು ತಿಂದ್ರೆ ತೂಕ ಇಳಿಯೋ ಬದಲು ಹೆಚ್ಚುತ್ತೆ



ಬಾಳೆಹಣ್ಣನ್ನು ಒಂದು ಅದ್ಭುತ ಹಣ್ಣು ಎಂದೇ ಹೇಳಬಹುದು. ಕಡಿಮೆ ಬೆಲೆಗೂ ದೊರೆಯುತ್ತದೆ, ಹೊಟ್ಟೆಯನ್ನೂ ತುಂಬಿಸುತ್ತದೆ. ಒಂದು ವೇಳೆ ನೀವು ತೂಕ ಇಳಿಸಬೇಕೆಂದಿದ್ದರೆ ಬಾಳೆಹಣ್ಣು ತಿನ್ನುವಾಗ ಇವುಗಳನ್ನು ಗಮನದಲ್ಲಿಟ್ಟುಕೊಳ್ಳಿ.

ಬಾಳೆಹಣ್ಣು ಪ್ರತಿಯೊಬ್ಬ–ರಿಗೂ ಇಷ್ಟವಾಗುವಂತಹ ಹಣ್ಣು. ಪ್ರತಿ ಋತುವಿನಲ್ಲಿ ಮಾರುಕಟ್ಟೆಯಲ್ಲಿ ಲಭ್ಯವಿರುವ ಹಣ್ಣು ಇದಾಗಿದೆ. ಹೊಟ್ಟೆ ಹಸಿದರೆ ಎರಡು ಬಾಳೆಹಣ್ಣು ತಿಂದ್ರೆ ಸಾಕು ಹೊಟ್ಟೆ ತುಂಬುತ್ತದೆ. ದೇಹವು ತ್ವರಿತ ಶಕ್ತಿಯನ್ನು ಪಡೆಯುತ್ತದೆ. ಅಲ್ಲದೆ ಬಹಳ ಕಡಿಮೆ ಬೆಲೆಗೂ ಸಿಗುವ ಹಣ್ಣು ಇದಾಗಿದ್ದು ಬಹುತೇಕರು ಬೆಳಗಿನ ಉಪಹಾರಕ್ಕೆ ಇದನ್ನು ಸೇವಿಸುತ್ತಾರೆ.

**ಖಾಲಿ ಹೊಟ್ಟೆಗೆ ಬಾಳೆಹಣ್ಣು**

ನೀವು ಕೇಳಿರಬಹುದು ತೂಕ ಹೆಚ್ಚಾಗಬೇಕಾದ್ರೆ ಬಾಳೆಹಣ್ಣು ತಿನ್ನಿ ಎನ್ನುವುದನ್ನು, ಹಾಗೆಯೇ ತೂಕ ಇಳಿಸಲು ಬಾಳೆಹಣ್ಣು ಸಹಕಾರಿಯಾಗಿದೆ. ಆದರೆ ಅದನ್ನು ಸರಿಯಾದ ರೀತಿಯಲ್ಲಿ ಹಾಗೂ ಸರಿಯಾದ ಸಮಯದಲ್ಲಿ ಸೇವಿಸುವುದು ಮುಖ್ಯ. ಕೆಲವರು ಇದನ್ನು ಖಾಲಿ ಹೊಟ್ಟೆಯಲ್ಲಿ ತಿನ್ನುವುದರಿಂದ ಹೆಚ್ಚಿನ ಪ್ರಯೋಜನಗಳನ್ನು ನೀಡುತ್ತದೆ ಎಂದು ನಂಬುತ್ತಾರೆ, ಆದ್ದರಿಂದ ಜನರು ಇದನ್ನು ಉಪಾಹಾರಕ್ಕಾಗಿ ತೆಗೆದುಕೊಳ್ಳುತ್ತಾರೆ, ಆದರೆ ಅವರು ಹಾಗೆ ಮಾಡಬಾರದು ಎಂದು ನಿಮಗೆ ತಿಳಿದಿದೆಯೇ.

**ಸರಿಯಾದ ವಿಧಾನ ತಿಳಿಯಿರಿ**

ಖಾಲಿ ಹೊಟ್ಟೆಯಲ್ಲಿ ಬಾಳೆಹಣ್ಣು ತಿನ್ನುವುದರಿಂದ ಆಗುವ ಕೆಲವು ಅನಾನುಕೂಲಗಳ ಬಗ್ಗೆ ನಾವಿಲ್ಲಿ ತಿಳಿಯೋಣ. ನಾವು ಬೆಳಿಗ್ಗೆ ಬಾಳೆಹಣ್ಣು ತಿನ್ನಬಹುದೇ ಮತ್ತು ನಾವು ತಿನ್ನುತ್ತಿದ್ದರೆ ಅದನ್ನು ಹೇಗೆ ಮತ್ತು ಯಾವುದರೊಂದಿಗೆ ತಿನ್ನಬೇಕು ಎನ್ನುವುದನ್ನು ತಿಳಿಯುವುದು ಮುಖ್ಯ.

**ಉಪಹಾರದ ಜೊತೆ ಸೇವಿಸಬೇಕು**

ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ಬಾಳೆಹಣ್ಣು ತಿನ್ನಬೇಕು ಎಂದು ಹಲವರು ನಂಬುತ್ತಾರೆ, ಆದರೆ ಹಾಗೆ ಮಾಡುವುದು ತಪ್ಪು. ಬಾಳೆಹಣ್ಣನ್ನು ಎಂದಿಗೂ ಖಾಲಿ ಹೊಟ್ಟೆಯಲ್ಲಿ ತಿನ್ನಬಾರದು. ಬೆಳಗ್ಗೆ ಖಾಲಿ ಹೊಟ್ಟೆಯಲ್ಲಿ ಬಾಳೆಹಣ್ಣು ತಿಂದರೆ ಕೆಲವರಿಗೆ ಹೊಟ್ಟೆನೋವು, ಗ್ಯಾಸ್ ಮತ್ತು ಅಸಿಡಿಟಿ ಸಮಸ್ಯೆ ಕಾಡಬಹುದು.



ಬಾಳೆಹಣ್ಣನ್ನು ಯಾವಾಗಲೂ ಉಪಹಾರ ಅಥವಾ ಇತರ ಆಹಾರಗಳೊಂದಿಗೆ ತಿನ್ನಬೇಕು.

**ಖಾಲಿ ಹೊಟ್ಟೆಯಲ್ಲಿ ಯಾಕೆ ತಿನ್ನಬಾರದು**

ವಾಸ್ತವವಾಗಿ, ಅವುಗಳು ಹೆಚ್ಚಿನ ಪ್ರಮಾಣದ ಕಾರ್ಬೋಹೈಡ್ರೇಟ್ಗಳನ್ನು ಹೊಂದಿರುತ್ತವೆ, ಇದು ಜೀರ್ಣಕ್ರಿಯೆಯಲ್ಲಿ ಸಮಸ್ಯೆಗಳನ್ನು ಉಂಟುಮಾಡಬಹುದು. ಇದು ಗ್ಯಾಸ್ ಮತ್ತು ಉಬ್ಬುವಿಕೆಯ ಸಮಸ್ಯೆಗಳನ್ನು ಉಂಟುಮಾಡಬಹುದು. ಈ ಕಾರ್ಬೋಹೈಡ್ರೇಟ್‌ಗಳು ಕರುಳಿನಲ್ಲಿ ಹುದುಗುವಿಕೆ ಮತ್ತು ಅನಿಲ ರಚನೆಗೆ ಕಾರಣವಾಗುತ್ತವೆ. ಕೆಲವೊಮ್ಮೆ ಹೊಟ್ಟೆನೋವು, ವಾಂತಿ ಅಥವಾ ಇತರ ಸಮಸ್ಯೆಗಳೂ ಬರಬಹುದು. ಆದ್ದ–ರಿಂದ, ಬಾಳೆಹಣ್ಣು ಯಾವಾಗಲೂ ಇತರ ಯಾವುದೇ ಆಹಾರದೊಂದಿಗೆ ತಿನ್ನಬೇಕು. ಖಾಲಿ ಹೊಟ್ಟೆ ಬಾಳೆಹಣ್ಣು ತಿನ್ನಬಾರದು.

**ಖಾಲಿ ಹೊಟ್ಟೆಯಲ್ಲಿ ಬಾಳೆಹಣ್ಣು ತಿಂದರೆ ತೂಕ ಹೆಚ್ಚುತ್ತದೆಯೇ?**

ಬೆಳಿಗ್ಗೆ ಬಾಳೆಹಣ್ಣು ತಿನ್ನುವುದರಿಂದ ತೂಕ ಕಡಿಮೆಯಾಗುತ್ತದೆ, ಹೊಟ್ಟೆಯನ್ನು ಸ್ವಚ್ಛವಾಗಿಡುತ್ತದೆ ಮತ್ತು ಜೀರ್ಣಾಂಗ ವ್ಯವಸ್ಥೆಯನ್ನು ಬಲಪಡಿಸುತ್ತದೆ ಎಂದು ಕೆಲವರು ನಂಬುತ್ತಾರೆ. ಆದರೆ ಬಾಳೆಹಣ್ಣು ಸಾಕಷ್ಟು ಕಾರ್ಬೋಹೈಡ್ರೇಟ್‌ಗಳು ಮತ್ತು ಕ್ಯಾಲೊರಿಗಳನ್ನು ಹೊಂದಿರುತ್ತದೆ. ಖಾಲಿ ಹೊಟ್ಟೆಯಲ್ಲಿ ಬಾಳೆಹಣ್ಣು ತಿನ್ನುವುದ–ರಿಂದ ತೂಕ ಕಡಿಮೆಯಾಗುವ ಬದಲು ಹೆಚ್ಚಾಗುತ್ತದೆ. ನೀವು ಸಾಮಾನ್ಯ ಗಾತ್ರದ ಬಾಳೆಹಣ್ಣು ತಿನ್ನುತ್ತಿದ್ದರೆ, ಅದು ನಿಮಗೆ ಸುಮಾರು 25–30 ಗ್ರಾಂ ಕಾರ್ಬೋಹೈಡ್ರೇಟ್ಗಳನ್ನು ಮತ್ತು 90–105 ಕ್ಯಾಲೋರಿಗಳನ್ನು ನೀಡುತ್ತದೆ.

**ಬಾಳೆಹಣ್ಣು ತಿನ್ನಲು ಸರಿಯಾದ ಸಮಯ ಯಾವುದು?**

ಬಾಳೆಹಣ್ಣು ತಿನ್ನಲು ಉತ್ತಮ ಸಮಯವೆಂದರೆ ಹಗಲಿನಲ್ಲಿ ಇದರಿಂದ ಎಲ್ಲಾ ಪೋಷಕಾಂಶಗಳು ದೇಹದಲ್ಲಿ ಚೆನ್ನಾಗಿ ಹೀರಲ್ಪಡುತ್ತವೆ. ಇದರಿಂದ ನೀವು ದಿನವಿಡೀ ಚೈತನ್ಯದಿಂದ ಇರುತ್ತೀರಿ. ಆದ್ದರಿಂದ ನೀವು ಮಧ್ಯಾಹ್ನ ಅಥವಾ ಸಂಜೆ ಬಾಳೆಹಣ್ಣು ತಿನ್ನಬಹುದು. ಈ ಸಮಯದಲ್ಲಿ ಬಾಳೆಹಣ್ಣು ತಿನ್ನುವುದ–ರಿಂದ ದೇಹಕ್ಕೆ ಶಕ್ತಿ ದೊರೆಯುತ್ತದೆ. ನೀವು ಬಯಸಿದರೆ, ನೀವು ಬೆಳಗಿನ ಉಪಾಹಾರದ ನಂತರ ಬಾಳೆಹಣ್ಣು ತಿನ್ನಬಹುದು.



# ಆಯುರ್ವೇದದಲ್ಲಿ ಅಮೃತ ಎಂದು ಕರೆಸಿಕೊಳ್ಳುವ ಈ ಆಹಾರಗಳನ್ನು ಆಗಾಗ ತಿಂದರೆ ಒಳ್ಳೆಯದಂತೆ!

ಯಾವ ಸಂದರ್ಭದಲ್ಲಿ ನಮ್ಮ ಆರೋಗ್ಯ ಯಾವ ರೀತಿ ಹಾಳಾಗುತ್ತದೆ ಎಂದು ಹೇಳಲು ಬರುವುದಿಲ್ಲ. ಏಕೆಂದರೆ ಆರೋಗ್ಯದ ವಿಚಾರವೇ ಹಾಗೆ. ಒಂದು ಸಮಯ ದಲ್ಲಿ ಇದ್ದಂತೆ ಮತ್ತೊಮ್ಮೆ ಇರುವುದಿಲ್ಲ. ಯಾವಾಗಲೂ ಒಂದೇ ರೀತಿ ಆರೋಗ್ಯವನ್ನು ನಿರ್ವಹಣೆ ಮಾಡಿಕೊಳ್ಳಬೇಕು ಎಂದರೆ ನಮ್ಮ ಆಹಾರ ಪದ್ಧತಿ ಸರಿ ಇರಬೇಕು.

ನಾವು ಸೇವಿಸಿದ ಆಹಾರ ನಮಗೆ ಚೆನ್ನಾಗಿ ಜೀರ್ಣವಾಗುವಂತೆ ಇದ್ದರೆ ಒಳ್ಳೆಯದು. ಆಹಾರದ ವಿಚಾರದಲ್ಲಿ



ಸ್ವಲ್ಪ ಬುದ್ಧಿವಂತಿಕೆ ಬಳಸಿದರೆ ನಾವು ಯಾವ ಆಹಾರ ತಿಂದರೆ ನಮ್ಮ ದೇಹಕ್ಕೆ ಒಳ್ಳೆಯದು ಎನ್ನುವುದು ಗೊತ್ತಾಗುತ್ತೆ. ಪ್ರಸ್ತುತ ಈ ಲೇಖನದಲ್ಲಿ ಪ್ರತಿದಿನ ಸೇವಿಸಬಹುದಾದ ಆಯುರ್ವೇದ ಆಹಾರ ಪದಾರ್ಥಗಳ ಬಗ್ಗೆ ಮಾಹಿತಿ ನೀಡಲಾಗಿದೆ.

**ಅರಿಶಿನ**

ನಮ್ಮ ಭಾರತೀಯ ಅಡುಗೆ ಸಂಸ್ಕೃತಿಯಲ್ಲಿ ಅರಿಶಿನಕ್ಕೆ ಅದ್ಭುತವಾದ ಸ್ಥಾನಮಾನವಿದೆ. ಇದನ್ನು ಚಿನ್ನದ ಗಿಡಮೂಲಿಕೆ ಎಂದು ಕರೆಯ ಲಾಗುತ್ತದೆ. ಅರಿಶಿನ ಒಂದು ಶಕ್ತಿಯುತವಾದ ಆಂಟಿ ಇನ್ಫಾಮೇಟರಿ ಮತ್ತು ಆಂಟಿ ಆಕ್ಸಿಡೆಂಟ್ ಆಗಿದೆ.

ಇದು ನಮ್ಮ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ ಮತ್ತು ನಮ್ಮ ಜೀರ್ಣ ಶಕ್ತಿಯನ್ನು ಅಭಿವೃದ್ಧಿಪಡಿಸಿ ಚರ್ಮದ ಆರೋಗ್ಯವನ್ನು ಕಾಪಾಡುತ್ತದೆ.?

**ಅಶ್ವಗಂಧ**

ಮಾನಸಿಕ ಒತ್ತಡವನ್ನು ಕಡಿಮೆ ಮಾಡುವಲ್ಲಿ ಮತ್ತು ನಮ್ಮ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸುವಲ್ಲಿ ನಿರಂತರವಾಗಿ ಕೆಲಸ ಮಾಡುವ ಅಶ್ವಗಂಧ ನಮ್ಮ ದೇಹದಲ್ಲಿ ಶಕ್ತಿ ಮತ್ತು ಚೈತನ್ಯವನ್ನು ಹೆಚ್ಚಿಸುತ್ತದೆ ಮತ್ತು ರಾತ್ರಿಯ ಸಮಯದಲ್ಲಿ ನೆಮ್ಮದಿಯ ನಿದ್ರೆ ಬರುವಂತೆ ಮಾಡುತ್ತದೆ. ಇದು ವಯಸ್ಸಾಗುವಿಕೆ ಪ್ರಕ್ರಿಯೆಯನ್ನು ದೂರ ಮಾಡಿ ನಮ್ಮ ಸಂಪೂರ್ಣ ಆರೋಗ್ಯವನ್ನು ಕಾಪಾಡುತ್ತದೆ.

**ತುಪ್ಪ**

ತುಪ್ಪ ತಿನ್ನುವುದರಿಂದ ನಮ್ಮ ಕರುಳಿನ ಆರೋಗ್ಯ ಚೆನ್ನಾಗಿರುತ್ತೆ ಎಂದು ಹೇಳುತ್ತಾರೆ. ಏಕೆಂದರೆ ಇದು ನಾವು ಸೇವಿಸುವ ಆಹಾರದಲ್ಲಿ ಕಂಡುಬರುವಂತಹ ಪೌಷ್ಟಿಕ ಸತ್ವಗಳನ್ನು ಹೀರಿಕೊಳ್ಳಲು ಸಹಾಯ ಮಾಡುತ್ತದೆ. ಜೊತೆಗೆ ನಮ್ಮ ಕೀಲುಗಳ ನೋವನ್ನು ಗುಣಪಡಿಸುತ್ತದೆ. ಮೆದುಳಿನ ಕಾರ್ಯ ಚಟುವಟಿ–ಕೆಯನ್ನು ಹೆಚ್ಚಿಸುವಲ್ಲಿ ನೆರವಾಗುತ್ತದೆ.



**ನೆಲ್ಲಿಕಾಯಿ**

ಇದೊಂದು ಶಕ್ತಿಯುತವಾದ ಆಂಟಿ ಆಕ್ಸಿಡೆಂಟ್ ಗಳನ್ನು ಒಳಗೊಂಡಿರುವ ಗಿಡಮೂಲಿಕೆಯಾಗಿದ್ದು, ನಮ್ಮ ಜೀರ್ಣ ಶಕ್ತಿಯನ್ನು ಕಾಪಾಡುತ್ತದೆ.

ಲಿವರ್ ಕಾರ್ಯ ಚಟುವಟಿ–ಕೆಯನ್ನು ಉತ್ತಮಪಡಿಸುವ ಜೊತೆಗೆ ಆರೋಗ್ಯಕರವಾದ ತಲೆ ಕೂದಲು ನಮ್ಮದಾಗುವ ಹಾಗೆ ಮಾಡುತ್ತದೆ. ನಮ್ಮ ಆಹಾರ ಪದ್ಧತಿಯಲ್ಲಿ ನೆಲ್ಲಿಕಾಯಿ ಯನ್ನು ಸೇರಿಸಿ ಸೇವಿಸುವುದ ರಿಂದ ನಮ್ಮ ರೋಗ ನಿರೋಧಕ ಶಕ್ತಿ ಕೂಡ ಹೆಚ್ಚಾಗುತ್ತದೆ.?

**ಜೇನುತುಪ್ಪ**

ಜೇನುತುಪ್ಪ ಕೂಡ ಆಂಟಿ ಮೈಕ್ರೋಬಿಯಲ್ ಗುಣಲಕ್ಷಣಗಳನ್ನು ಒಳಗೊಂಡಿರುವ ಒಂದು ಆರೋಗ್ಯಕರ ಪದಾರ್ಥವಾಗಿದ್ದು, ಶೀತ, ನೆಗಡಿ, ಕೆಮ್ಮು ಇವುಗಳಿಗೆ ರಾಮಬಾಣವಾಗಿ ಕೆಲಸ ಮಾಡುತ್ತದೆ. ನೈಸರ್ಗಿಕವಾದ ಸಿಹಿ ಅಂಶ ಇದರಲ್ಲಿದೆ ಮತ್ತು ಇದು ನಮ್ಮ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸುವ ಕೆಲಸ ಮಾಡುತ್ತದೆ.

**ನೇರಳೆ ಹಣ್ಣು**

ನೇರಳೆ ಹಣ್ಣು ತಿಂದರೆ ನಮ್ಮ ಜೀರ್ಣ ಶಕ್ತಿ ಹೆಚ್ಚಾಗುತ್ತದೆ ಎಂದು ಹೇಳುತ್ತಾರೆ. ಅಷ್ಟು ಮಾತ್ರವಲ್ಲದೆ ನಮ್ಮ ರಕ್ತದಲ್ಲಿನ ಸಕ್ಕರೆ ಪ್ರಮಾಣವನ್ನು ನಿಯಂತ್ರಣ ಮಾಡಲು ಇದು ಕೆಲಸ ಮಾಡುತ್ತದೆ.

ಬ್ಲಡ್ ಶುಗರ್ ಲೆವೆಲ್ ನಿಯಂತ್ರಣಕ್ಕೆ ಅನುಕೂಲಕರವಾಗಿ ಕೆಲಸ ಮಾಡುವ ನೇರಳೆ ಹಣ್ಣು ನಮ್ಮ ಚರ್ಮದ ಹಲವು ಸಮಸ್ಯೆಗಳನ್ನು ದೂರ ಮಾಡುತ್ತದೆ ಮತ್ತು ನಮ್ಮ ಬಾಯಿಯ ಆರೋಗ್ಯವನ್ನು ಸಹ ಕಾಪಾಡುತ್ತದೆ.?

**ತುಳಸಿ ಎಲೆಗಳು**

ನಮ್ಮ ಮಾನಸಿಕ ಒತ್ತಡವನ್ನು ನಿಯಂತ್ರಣ ಮಾಡುವ ತುಳಸಿ ಎಲೆಗಳು ಉಸಿರಾಟ ವ್ಯವಸ್ಥೆಯನ್ನು ಅಚ್ಚುಕಟ್ಟಾಗಿ ಕಾಪಾಡು ತ್ತದೆ ಮತ್ತು ನಮ್ಮ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ.

ಆಂಟಿ ಇನ್ಫ್ಲಮೇಟರಿ ಲಕ್ಷಣಗಳನ್ನು ಮತ್ತು ಆಂಟಿ ಆಕ್ಸಿಡೆಂಟ್ ಗುಣಲಕ್ಷಣಗಳನ್ನು ಒಳಗೊಂಡಿರುವ ತುಳಸಿ ಎಲೆಗಳನ್ನು ಸೇವಿಸುವು ದ–ರಿಂದ ನಮ್ಮ ಸಂಪೂರ್ಣ ಆರೋಗ್ಯ ಚೆನ್ನಾಗಿ ರುತ್ತದೆ.

**ಗಿಲಾಯಿ**

ನಮ್ಮ ರಕ್ತ ಶುದ್ಧೀಕರಣದಲ್ಲಿ ನೆರವಾಗುವ ಗಿಲಾಯಿ, ಜೀರ್ಣಶಕ್ತಿ ಯನ್ನು ಕೂಡ ಹೆಚ್ಚಿಸುತ್ತದೆ ಮತ್ತು ಜ್ವರದ ಸಮಸ್ಯೆಯನ್ನು ದೂರ ಮಾಡುತ್ತದೆ. ಮಾನಸಿಕ ಒತ್ತಡ ಮತ್ತು ಆತಂಕವನ್ನು ಕಡಿಮೆ ಮಾಡುವ ಗಿಲಾಯಿ ಕೇವಲ ಇಷ್ಟಕ್ಕೆ ಸೀಮಿತವಾಗದೆ ಇನ್ನು ಹಲ ವಾರು ಆರೋಗ್ಯ ಸಮಸ್ಯೆಗಳಿಗೆ ರಾಮಬಾಣವಾಗಿ ಕೆಲಸ ಮಾಡುತ್ತದೆ.

**ಶುಂಠಿ**

ಶುಂಠಿ ನಮ್ಮ ದೇಹಕ್ಕೆ ಉಷ್ಣ ಪ್ರಭಾವವನ್ನು ಒದಗಿಸುತ್ತದೆ ಜೊತೆಗೆ ನಮ್ಮ ಜೀರ್ಣ ಶಕ್ತಿಯನ್ನು ಕೂಡ ಹೆಚ್ಚಿಸುತ್ತದೆ. ಇದು ನಮ್ಮ ಮೈ ಕೈ ನೋವಿನ ಸಮಸ್ಯೆಗೆ ರಾಮಬಾಣವಾಗಿ ಕೆಲಸ ಮಾಡುತ್ತದೆ.

ಒಟ್ಟಾರೆಯಾಗಿ ನಮ್ಮ ದೇಹದ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸುವಲ್ಲಿ ನೆರವಾಗುವ ಶುಂಠಿ ಶೀತ, ನೆಗಡಿ, ಕೆಮ್ಮು ಸಮಸ್ಯೆಗೆ ಒಂದು ನೈಸರ್ಗಿಕ ಔಷಧಿಯಾಗಿದೆ ಎನ್ನಬಹುದು.?



# ಪೇರಳೆ ಹಣ್ಣಿನ ಪ್ರಯೋಜನಗಳು



ಮಧುಮೇಹ ರೋಗಿಗಳಿಗೆ ಪೇರಳೆ ಹಣ್ಣು ಬಹಳ ಪ್ರಯೋಜನಕಾರಿಯಾಗಿದೆ. ಪೇರಳೆಯನ್ನು ನಿಯಮಿತವಾಗಿ ಸೇವಿಸುವುದ–ರಿಂದ, ಅದರಲ್ಲಿರುವ ಗ್ಲೈಸೆಮಿಕ್ ಇಂ–ಡೆಕ್ಸ್ ಕಾರಣದಿಂದಾಗಿ, ಮಧುಮೇಹವನ್ನು ನಿಯಂತ್ರಿಸಬಹುದು. ಪೇರಳೆ ಹಣ್ಣಿನಲ್ಲಿ ನ್ಯಾಚುರಲ್ ಶುಗರ್ ಇರುತ್ತದೆ. ಇದು ಮಧುಮೇಹಕ್ಕೆ ಪ್ರಯೋಜನಕಾರಿಯಾಗಿದೆ.

ಮಲಬದ್ಧತೆಯ ರೋಗಿಗಳಿಗೆ ಇದು ಸಹಾಯಕ. ಪೇರಳೆ ಹಣ್ಣಿನ ಬೀಜಗಳು ಜೀರ್ಣಕ್ರಿಯೆಯ ಸಮಸ್ಯೆಗಳನ್ನು ತೆಗೆದುಹಾಕಲು ಸಹಾಯ ಮಾಡುತ್ತದೆ. ಜೀರ್ಣಕ್ರಿಯೆ ಸರಿಯಾಗಿ ಆದರೆ ಮಲಬದ್ಧತೆಯ ಸಮಸ್ಯೆ ಕೂಡ ಇರುವುದಿಲ್ಲ.

ರೋಗನಿರೋಧಕ ಶಕ್ತಿ ಹೆಚ್ಚಿಸುತ್ತದೆ : ಪೇರಳೆ ಹಣ್ಣಿನಲ್ಲಿ ಕಂಡುಬರುವ ವಿಟಮಿನ್ ಸಿ ರೋಗನಿರೋಧಕ ಶಕ್ತಿ ಹೆಚ್ಚಿಸುತ್ತದೆ. ಇತರ ಹಣ್ಣುಗಳಿಗೆ ಹೋಲಿಸಿದೆ ಪೇರಳೆಯಲ್ಲಿ ನಾಲ್ಕು ಪಟ್ಟು ವಿಟಮಿನ್ ಸಿ ಕಂಡುಬರುತ್ತದೆ. ಇದು ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸಲು ಮತ್ತು ಸೋಂಕಿನಿಂದ ರಕ್ಷಿಸಲು ಸಹಾಯ ಮಾಡುತ್ತದೆ.

ಕಣ್ಣುಗಳನ್ನು ಆರೋಗ್ಯವಾಗಿಡಲು ಪೇರಳೆ ಹಣ್ಣನ್ನು ಅತ್ಯುತ್ತಮ ಹಣ್ಣು ಎಂದು ಪರಿಗಣಿಸಲಾಗಿದೆ. ವಿಟಾಮಿನ್ ಎ ಈ ಹಣ್ಣಲ್ಲಿ ಉತ್ತಮ ಪ್ರಮಾಣದಲ್ಲಿ ಕಂಡುಬರುತ್ತದೆ. ಇದು ದೃಷ್ಟಿ ಹೆಚ್ಚಿಸಲು ಸಹಾಯ ಮಾಡುತ್ತದೆ. ಪೇರಳೆ ಸೇವನೆಯಿಂದ ದೃಷ್ಟಿಯ ಸಮಸ್ಯೆಯನ್ನು ತಪ್ಪಿಸಬಹುದು.

# ಹಳದಿ ಹಲ್ಲಿನ ಸಮಸ್ಯೆಗೆ ಮನೆ ಮದ್ದು

ಜನರಿಂದ ನಿಮ್ಮನ್ನು ದೂರವಿಡುವಂತೆ ಈ ಹಲ್ಲುಗಳು ಮಾಡುವುದರಿಂದ ಕೆಲವೊಂದು ಸೂಕ್ತ ಮನೆಮದ್ದುಗಳ ಸಹಾಯವನ್ನು ತೆಗೆದುಕೊಳ್ಳಲೇಬೇಕು. ದಿನಕ್ಕೆ ಎರಡು ಬಾರಿ ಹಲ್ಲುಜ್ಜುವುದು, ಹಲ್ಲಿನ ಆರೋಗ್ಯವನ್ನು ಪಾಲನೆ ಮಾಡುವುದು ಹಲ್ಲಿಗೆ ಉತ್ತಮವಾಗಿದೆ.

**ಫ್ಲೂರಿಡೇಟೆಡ್ ಟೂತ್‌ಪೇಸ್ಟ್ ಬಳಸಿ**

ಹಲ್ಲಿನಿಂದ ಹಳದಿಯ ನಿವಾರಣಗೆ ಈ ಪೇಸ್ಟ್ ಸಹಕಾರಿ. ಫ್ಲುರೈಡ್ ನಿಮ್ಮ ಹಲ್ಲುಗಳನ್ನು ಬಲಶಾಲಿಯಾಗಿಸುವುದರಿಂದ ಹಲ್ಲಿನ ಹುಳುಕನ್ನು ನಿವಾರಿಸುತ್ತದೆ. ನೀವು ಸರಿಯಾದ ಟೂತ್‌ಪೇಸ್ಟ್ ಬಳಸುತ್ತಿದ್ದೀರಿ ಎಂಬುದನ್ನು ಖಾತ್ರಪಡಿಸಿಕೊಳ್ಳಿ.

ಒಂದು ಚಮಚದಷ್ಟು ಬೇಕಿಂಗ್ ಸೋಡಾಗೆ ಸ್ವಲ್ಪ ಉಪ್ಪು ಸೇರಿಸಿ. ಪೇಸ್ಟ್ ಬದಲಿಗೆ ಇದನ್ನು ಹಲ್ಲುಜ್ಜಲು ಬಳಸಿ. ಹಲ್ಲಿನ ಹಳದಿಗಟ್ಟುವಿಕೆ ಮತ್ತು ಕರೆಯನ್ನು ನಿವಾರಿಸಿ ವಾರದಲ್ಲಿ ಫಲಿತಾಂಶವನ್ನು ನೀಡುತ್ತದೆ.

**ಕಿತ್ತಳೆ ಸಿಪ್ಪೆಯ ಮ್ಯಾಜಿಕ್**

ಈ ತಂತ್ರ ನಿಮ್ಮ ಬಾಯಿಯಲ್ಲಿ ಸುವಾಸನೆಯನ್ನು ಹೊಮ್ಮಿಸುವುದು ಖಂಡಿತ. ಹಲ್ಲಿನ ಕರೆಯ ನಿವಾರಣಗೆ ಈ ಟ್ರಿಕ್ಸ್ ಅತ್ಯದ್ಭುತವಾದುದು. ಹಲ್ಲಿನ ಮೇಲೆ ನೇರವಾಗಿ ಕಿತ್ತಳೆ ಸಿಪ್ಪೆಯನ್ನು ಉಜ್ಜಿ ನಂತರ ಬಾಯಿ ಮುಕ್ಕಳಿಸಿ.

ಆಗಾಗ್ಗೆ ಇದನ್ನು ಬಳಸುವುದರಿಂದ ಹಲ್ಲಿನ ಕರೆಯನ್ನು ನಿವಾರಿಸಿಕೊಳ್ಳಬಹುದು.



**ಹಸಿತರಕಾರಿಗಳು ಮತ್ತು ಹಣ್ಣುಗಳು**

ಫೈಬರ್ ಅಂಶವನ್ನು ಒಳಗೊಂಡಿರುವ ಹಸಿತರಕಾರಿಗಳು ಮತ್ತು ಹಣ್ಣುಗಳ ಸೇವನೆಯನ್ನು ಮಾಡಿ. ಇವುಗಳನ್ನು ಸೇವಿಸುವುದೂ ಕೂಡ ಹಲ್ಲಿನ ಹಳದಿ ಕರೆಯನ್ನು ದೂರಮಾಡಲು ಸಹಕಾರಿಯಾಗಿದೆ.

ಹಲ್ಲಿನ ಹಳದಿ ಕಲೆ ನಿವಾರಣೆಗೆ ಎಳ್ಳಿನ ಬೀಜ ಅತ್ಯುತ್ತಮವಾದುದು. ಎಳ್ಳನ್ನು ಕೊಂಚ ಬಿರುಸಾಗಿ ಹುಡಿಮಾಡಿಟ್ಟುಕೊಳ್ಳಿ. ನಂತರ ಈ ಹುಡಿಯನ್ನು ಬಳಸಿ ಹಲ್ಲುಜ್ಜಿ. ನಿಮ್ಮ ಹಲ್ಲಿನಿಂದ ಕರೆ ಮಾಯವಾಗಿ ಫಳಫಳನೆ ಹೊಳೆಯುತ್ತದೆ.

**ಖಾರವಾದ ಆಹಾರಗಳನ್ನು ಸೇವಿಸಿ**

ಇದು ಕೊಂಚ ಅಚ್ಚರಿಯನ್ನುಂಟು ಮಾಡಿದರೂ ನಿಜವಾದ ವಿಷಯವಾಗಿದೆ. ಆದಷ್ಟು ಹೆಚ್ಚು ಖಾರದ ಆಹಾರ ಪದಾರ್ಥಗಳನ್ನು ಸೇವಿಸಿ. ಜೊಲ್ಲು ಗ್ರಂಥಿಗಳಲ್ಲಿ ಲಾಲಾರಸ ಸ್ರವಿಸುವಿಕೆಯನ್ನು ಹೆಚ್ಚಿಸಿ ನಿಮ್ಮ ಹಲ್ಲುಗಳನ್ನು ಸ್ವಚ್ಛವಾಗಿರಿಸಲು ಖಾರದ ಆಹಾರ ಸಹಾಯ ಮಾಡುತ್ತದೆ.

# ಗೌರಿಶಂಕರ ಜಾತ್ರಾಮಹೋತ್ಸವದಂಗವಾಗಿ ಸಂಭ್ರಮದಿಂದ ಜರುಗಿದ ದ್ಯಾಮವ್ವನ ಸೋಗು

ಬಸವನಬಾಗೇವಾಡಿ, : ಪಟ್ಟಣದ ಗೌರಿ-ಶಂಕರ ದೇವಸ್ಥಾನದ ಜಾತ್ರಾಮಹೋತ್ಸವದಂಗವಾಗಿ ಸೋಮವಾರ ದ್ಯಾಮವ್ವನ ಸೋಗಿನ ಮೆರವಣಿಗೆಯು ಸಂಭ್ರಮದಿಂದ ಜರುಗಿತು.

ಜಾತ್ರೆಯಂಗವಾಗಿ ಗೌರಿ-ಶಂಕರ ದೇವಸ್ಥಾನದಲ್ಲಿ ಕಳೆದ ಹತ್ತು ದಿನಗಳಿಂದ ಪ್ರತಿಷ್ಠಾಪಿಲಾಗಿರುವ ಗೌರಿ-ಶಿವ-ಗಂಗೆ-ನಂದಿ ಮೂರ್ತಿಗಳಿಗೆ ಭಕ್ತರು ವಿಶೇಷ ಪೂಜೆ ಸಲ್ಲಿಸಿದರು. ಗರ್ಭಗುಡಿಯಲ್ಲಿರುವ ನೂತನ ಮೂರ್ತಿಗಳಿಗೆ ವಿಶೇಷ ಪೂಜೆ ಸಲ್ಲಿಸಲಾಗಿತ್ತು. ಮಹಿಳೆಯರು ತಮ್ಮ ಕುಟುಂಬ ಸದಸ್ಯರೊಂದಿಗೆ ದೇವಸ್ಥಾನಕ್ಕೆ ತೆರಳಿ ದೇವರಿಗೆ ನೈವೇದ್ಯ ಅರ್ಪಿಸಿದರು. ಮಹಿಳೆಯರು ಗೌರಿಗೆ ಉಡಿ ತುಂಬಿ ಧನ್ಯತಾ ಭಾವ ಅನುಭವಿಸಿದರು.

ಮಧ್ಯಾನ್ಹ ಒಂದೂವರೆ ಗಂಟೆ ಸುಮಾರಿಗೆ ಪಟ್ಟಣದ ಮಾರುತಿ ದೇವಸ್ಥಾನದ ಮುಂಭಾಗದಿಂದ ಆರಂಭವಾದ ದ್ಯಾಮವ್ವನ ಸೋಗಿನ ಮೆರವಣಿಗೆಯು ಸಂಜೆ ಗೌರಿ-ಶಂಕರ ದೇವಸ್ಥಾನಕ್ಕೆ ತಲುಪಿತು. ಮೆರವಣಿಗೆಯುದ್ದಕ್ಕೂ ಡೊಳ್ಳಿನ ಮೇಳ, ಹಲಗೆ ನಾದಕ್ಕೆ ಜನರು ಹೆಜ್ಜೆ ಹಾಕಿ ಸಂಭ್ರಮಿಸಿದರು. ದ್ಯಾಮವ್ವನ ಸೋಗು ಸಾಗುವ ಮಾರ್ಗದ ಎರಡು ಬದಿಗಳಲ್ಲಿ ಮಹಿಳೆಯರು ಸೇರಿದಂತೆ ಅಪಾರ ಸಂಖ್ಯೆಯ ಜನರು ನಿಂತು ಮೆರವಣಿಗೆಯನ್ನು ವೀಕ್ಷಿಸಿದರು.

ಈ ಸಲ ಬಸಯ್ಯ ಪೂಜಾರಿ(ಮಠಪತಿ) ದ್ಯಾಮವ್ವನ ಸೋಗು ಹಾಕಿದ್ದರು. ಇವರಿಗೆ ಹಣಮಂತ ಕಾಮನಕೇರಿ ಸಾಥ್ ನೀಡಿದರು. ದ್ಯಾಮವ್ವನ ಸೇವಕಿಯರಾಗಿ ಬಾಲಕರಾದ ನಿತೀಶ ಒಡೆಯರ, ಕಿರಣ ಕಾಮನಕೇರಿ ಸೋಗು ಹಾಕಿದ್ದರೆ, ಮಹೇಶ ಅವಟಿ ಪೂಜಾರಿ ಸೋಗು ಹಾಕಿದ್ದರು.



ದ್ಯಾಮವ್ವ ಸೋಗು, ಸೇವಕಿಂ-ಯರ, ಪೂಜಾರಿ ಅಲಂಕಾರ-ತಯಾರಿಯನ್ನು ವಿಶ್ವನಾಥಯ್ಯ ಕಾಳಹಸ್ತೇಶ್ವರಮಠ, ರಾಹುಲ ಜಗತಾಪ, ಶಿವಪ್ಪ ಹಡಪದ, ಗೋಪಾಲ ಮ್ಯಾಗೇರಿ, ಬಸವಂತ ಅಡಗಿಮನಿ ನೆರವೇ-ರಿಸಿದರು. ದ್ಯಾಮವ್ವ ಸೋಗಿನ ಬಂಡಿಯನ್ನು ಹುಲ್ಲಪ್ಪ ಜಾಡರ, ಶ್ರೀಶೈಲ ಕೋಣಿನ, ಶಿವಾನಂದ ಸಾರವಾಡ, ಶಿವಾನಂದ ಬೇವನೂರ, ಸುರೇಶ ಪಡಶೆಟ್ಟಿ, ಬಸವರಾಜ ಯಳಮೇಲಿ, ಶ್ರೀಕಾಂತ ಬಾಡಗಿ, ಈರಪ್ಪ ಗಬ್ಬೂರ ಇತರರು ಎಳೆದರು. ದ್ಯಾಮವ್ವ ಸೋಗಿನ ಮೆರವಣಿಗೆಯಲ್ಲಿ ಸಂಗಪ್ಪ ವಾಡೇದ, ಬಸಣ್ಣ ದೇಸಾಯಿ, ಮಹಾಂತೇಶ ಹಂಜಗಿ, ಶ್ರೀಶೈಲ ಹಿರೇಮಠ, ಬಾಬು ಕುಂಟೋಜಿ,ಮಲ್ಲಯ್ಯ ನರಸಲಗಿಮಠ, ಶಿವಪ್ಪ ಖ್ಯಾಡದ, ಶಿವಾನಂದ ಸಾರವಾಡ, ಕಾಳಹಸ್ತೇಶ್ವರಯ್ಯ ಕಾಳಹಸ್ತೇಶ್ವರಮಠ, ಎ.ಐ.ಮಠಪತಿ, ಶಿವಪ್ಪ ಹೂಗಾರ, ಶರಣಪ್ಪ ನಾಡಗೌಡ, ಪಾವೆಡಪ್ಪ ಕರಮಾಳಕರ, ಮಲಕಾಜಿ ಕುಳಗೇರಿ, ಮುರಗೆಪ್ಪ ಪೂಜಾರಿ, ಅಪ್ಪಾಸಾಹೇಬ ಕಲ್ಲೂರ, ಬೀರಪ್ಪ ಪೂಜಾರಿ, ವಿರೇಶ ಹಿರೇಮಠ, ಮಲಕಾಜಿ ಹಂಗರಗಿ, ಮುರೆಗಪ್ಪ ಪೂಜಾರಿ, ಸಿದ್ದಣ್ಣ ಹಿರೇಕುರುಬರ ಸೇರಿದಂತೆ ಅಪಾರ ಸಂಖ್ಯೆಯ ಜನರು ಭಾಗವಹಿಸಿದ್ದರು.

ದ್ಯಾಮವ್ವನ ಸೋಗಿನ ಮೆರವಣಿಗೆ ಗೌರಿ-ಶಂಕರ ದೇವಸ್ಥಾನಕ್ಕೆ ತಲುಪಿದ ನಂತರ ದೇವಸ್ಥಾನದಲ್ಲಿ ಜಾತ್ರೆಯಂಗವಾಗಿ ಪ್ರತಿಷ್ಠಾಪಿಸಲಾಗಿದ್ದ ಗೌರಿ-ಶಿವ-ಗಂಗೆ-ನಂದಿ ದೇವರುಗಳನ್ನು ವಿವಿಧ ವಾದ್ಯಮೇಳದೊಂದಿಗೆ ಮೆರವಣಿಗೆ ಮೂಲಕ ಬಸವೇಶ್ವರ ದೇವಸ್ಥಾನದ ಬಸವ ತೀರ್ಥ ಬಾವಿಯಲ್ಲಿ ಸಂಜೆ ವಿಸರ್ಜಿಸಲಾಯಿತು. ಮೆರವಣಿಗೆ ಸಾಗುವ ರಸ್ತೆಯ ಎರಡು ಬದಿಯಲ್ಲಿ ಜಮಾಯಿಸಿದ್ದ ಜನರು ಉತ್ತತ್ತಿ, ಚುನಮರಿ, ಬಾರಿಕಾಯಿ ತೂರಿ ದೇವರಿಗೆ ನಮಸ್ಕರಿಸಿ ಭಕ್ತಿ ಸಮರ್ಪಿಸಿದ್ದು ಕಂಡುಬಂದಿತ್ತು.

# ಕಾವೇರಿ ನದಿಗೆ ಮಲೀನ ಸೇರ್ಪಡೆ: ವರದಿ ಸಲ್ಲಿಸಲು ತಜ್ಞರ ಸಮಿತಿ ರಚನೆ

ಬೆಳಗಾವಿ ಸುವರ್ಣಸೌಧ, : ಕಾವೇರಿ ನದಿಗೆ ಒಳಚರಂಡಿ ನೀರು, ಘನ ತ್ಯಾಜ್ಯ, ಕೈಗಾರಿಕೆ ತ್ಯಾಜ್ಯ ಹಾಗೂ ಇತರೆ ಸ್ವರೂಪದ ಮಲೀನಕಾರಕಗಳು ಸೇರ್ಪಡೆಗೊಂಡು ನೀರು ಕಲುಷಿತವಾಗಿ ಪರಿಸರಕ್ಕೆ ಆಗಿರುವ ಅನಾಹುತದ ತಡೆಯ ಬಗ್ಗೆ ಪರಿಶೀಲಿಸಿ ವರದಿ ಸಲ್ಲಿಸಲು ಕಳೆದ ಜೂನ್ ಮಾಹೆಯಲ್ಲಿ ತಜ್ಞರ ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ ಎಂದು ಅರಣ್ಯ, ಜೀವಿ ಪರಿಸ್ಥಿತಿ ಹಾಗೂ ಪರಿಸರ ಸಚಿವರಾದ ಈಶ್ವರ ಖಂಡ್ರೆ ಅವರು ಹೇಳಿದರು.

ವಿಧಾನ ಪರಿಷತ್‌ನಲ್ಲಿ ಡಿಸೆಂಬರ್ 16ರಂದು ಸದಸ್ಯರಾದ ಕುಶಾಲಪ್ಪ ಎಂ.ಪಿ. ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಅವರು ಉತ್ತರಿಸಿದರು.

ತಜ್ಞರ ಸಮಿತಿಯ ಸದಸ್ಯರು ಈಗಾಗಲೇ ಎರಡು ಬಾರಿ ಸಭೆ ನಡೆಸಿದ್ದಾರೆ. ತಜ್ಞರ ಸಮಿತಿಯು ಕಳೆದ ಜುಲೈ 4ರಂದು ಮೈಸೂರ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಕಾವೇರಿ ನದಿಗೆ ಭೇಟಿ ನೀಡಿ ನದಿಯ ಮಾಲಿನ್ಯದ ಬಗ್ಗೆ ಸದಸ್ಯರಿಂದ ವ್ಯಕ್ತವಾದ ಸಲಹೆ ಮತ್ತು ಅಭಿಪ್ರಾಯಗಳನ್ನು ಪಡೆದಿರುತ್ತದೆ.

ಕಾವೇರಿ ನದಿಯ ವ್ಯಾಪ್ತಿಯಲ್ಲಿ ಬರುವ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಾದೇಶಿಕ ಕಚೇರಿಗಳ ಅಧಿಕಾರಿಗಳಿಂದ ಮಾಹಿತಿ ವಿವರಗಳನ್ನು ಸಮಿತಿಯು ಪಡೆದು ಭಾಗೀದಾರರೊಂದಿಗೆ ಸಮಾಲೋಚನೆಗಳನ್ನು ನಡೆಸಿರುತ್ತದೆ. ತಜ್ಞರ ಸಮಿತಿಯು ಪರಸ್ಪರ ಪರ್ಯಾಲೋಚನೆ ನಡೆಸಿದ ತರುವಾಯ ಸದಸ್ಯರಿಂದ ವ್ಯಕ್ತವಾದ ಸಲಹೆ ಮತ್ತು ಅಭಿಪ್ರಾಯಗಳನ್ನು ಪರಿಶೀಲಿಸಿ ಹಾಗೂ ಪ್ರಾದೇಶಿಕ ಅಧಿಕಾರಿಗಳಿಂದ ಪಡೆದ ಮಾಹಿತಿಯನ್ನು ಪರಾಮರ್ಶಿಸಿ ಅಧ್ಯಯನ ನಡೆಸಿ ವಿವರವಾದ ವರದಿ ತಯಾರಿಸಿರುತ್ತದೆ.

ತಜ್ಞರ ಸಮಿತಿಯು ಈಗಾಗಲೇ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಮೂಲಕ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತದೆ. ಈ ವರದಿಯನ್ವಯ ನದಿಯ ರಕ್ಷಣೆಗಾಗಿ ಸರ್ಕಾರ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳುವ ನಿಟ್ಟಿನಲ್ಲಿ, ಕಾವೇರಿ ನದಿ ನೀರಿನ ಮಾಲಿನ್ಯ ನಿಯಂತ್ರಿಸಲು ಹಾಗೂ ತಡೆಯಲು ತಾಂತ್ರಿಕ ಸಮಿತಿಯು ನೀಡಿರುವ ವರದಿಯಲ್ಲಿ ಪ್ರಸ್ತಾಪಿಸಲಾಗಿರುವ ಅಲ್ಪಾವಧಿ ಮತ್ತು ಧೀರ್ಘಾವಧಿ ಕ್ರಿಯಾಯೋಜನೆಗಳ ಬಗ್ಗೆ ಹಾಗೂ ಮಾಡಲಾಗಿರುವ ಅವಲೋಕನಗಳು, ಶಿಫಾರಸ್ಸುಗಳು ಹಾಗೂ ನೀಡಿರುವ ಸಲಹೆ ಮತ್ತು ಮಾರ್ಗೋಪಾಯಗಳ ಬಗ್ಗೆ ಭಾಗೀದಾರ ಇಲಾಖೆಗಳಾದ ಕರ್ನಾಟಕ ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿ, ಪೌರಾಡಳಿತ ನಿರ್ದೇಶನಾಲಯ, ಕಾವೇರಿ ನೀರಾವರಿ ನಿಗಮ ನಿಯಮಿತ, ಗ್ರಾಮೀಣ ಅಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆ, ಕಂದಾಯ ಇಲಾಖೆಯ ಪ್ರಾದೇಶಿಕ ಆಯುಕ್ತರು, ಜಲ ಸಂಪನ್ಮೂಲ ಇಲಾಖೆಗಳ ಮತ್ತು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಮುಖ್ಯಸ್ಥರುಗಳು ಹಾಗೂ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಪರ್ಯಾಲೋಚಿಸಿ ಮಾಲಿನ್ಯ ತಡೆಗೆ ಸಮಗ್ರ ಕಾರ್ಯನೀತಿಯನ್ನು ರೂಪಿಸಬೇಕಿರುತ್ತದೆ ಎಂದು ಸಚಿವರಾದ ಈಶ್ವರ ಖಂಡ್ರೆ ಅವರು ತಿಳಿಸಿದರು.

## ಅಂಬೇಡ್ಕರ ನಿಗಮ ; ವಿವಿಧ ಯೋಜನೆಗಳಿಗೆ ಸಹಾಯಧನ

ಬಾಗಲಕೋಟೆ: : ಪ್ರಸಕ್ತ ಸಾಲಿಗೆ ಡಾ.ಬಿ.ಆರ್.ಅಂಬೇಡ್ಕರ ಅಭಿವೃದ್ದಿ ನಿಗಮದಿಂದ ಪರಿಶಿಷ್ಟ ಜಾತಿಯ ಸಮುದಾಯದ ಆರ್ಥಿಕ ಅಭಿವೃದ್ದಿಗಾಗಿ ಸ್ವಯಂ ಉದ್ಯೋಗ ಕೈಗೊಳ್ಳಲು ಸಹಾಯಧನ ನೀಡುವ ಸಲುವಾಗಿ ಅರ್ಜಿ ಆಹ್ವಾನಿಸಲಾಗಿದೆ.

ಘಟಕ ವೆಚ್ಚ 1 ಲಕ್ಷ ರೂ.ಗಳಿಗೆ ಸಹಾಯಧನವಾಗಿ 50 ಸಾವಿರ ರೂ, ಉಳಿದ 50 ಲಕ್ಷ ರೂ.ಗಳನ್ನು ಅವಧಿ ಸಾಲದ ಶೇ.4ರ ಬಡ್ಡಿದರದಲ್ಲಿ ನೀಡಲಾಗುತ್ತದೆ. ಸ್ವಾವಲಂಬಿ ಸಾರಥಿ-ಫುಡ್ ಕಾರ್ಟ ಉದ್ದೇಶಕ್ಕಾಗಿ ಸಾಲದ ಮೊತ್ತಕ್ಕೆ ಶೇ.75 ರಷ್ಟು ಸಹಾಯಧನ ಅಥ-ವಾ ಗರಿಷ್ಟ ಮೊತ್ತ 4 ಲಕ್ಷ ರೂ. ಉಳಿದ ಮೊತ್ತ ಬ್ಯಾಂಕ್ ಸಹಯೋಗದೊಂದಿಗೆ ನೀಡಲಾಗುತ್ತದೆ. ಕಳೆದ 2023-24 ಮತ್ತು ಪ್ರಸಕ್ತ 2024-25ನೇ ಸಾಲಿನಲ್ಲಿ ಈಗಾಗಲೇ ಅರ್ಜಿ ಸಲ್ಲಿಸಿದವರು ಪುನಃ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವದಿಲ್ಲ.

ಈಗಾಗಲೇ ಅರ್ಜಿ ಸಲ್ಲಿಸಿ ಉದ್ದೇಶಗಳ ಬದಲಾವಣೆಗೆ ಇಚ್ಚಿಸಿದಲ್ಲಿ ನಿಗಮದ ಕಲ್ಯಾಣ ಆಪ್‌ನ ಲಿಂಕ್‌ನಲ್ಲಿ ನೇರವಾಗಿ ಉದ್ದೇಶ ಬದಲಾವಣೆಗೆ ಮನವಿ ಸಲ್ಲಿಸಬಹುದು. ಹೊಸದಾಗಿ ಅರ್ಜಿ ಸಲ್ಲಿಸುವವರು ಕರ್ನಾಟಕ ಒನ್, ಗ್ರಾಮ ಒನ್ ಹಾಗೂ ಬೆಂಗಳೂರು ಒನ್ ಕೇಂದ್ರಗಳಲ್ಲಿ ಡಿಸೆಂಬರ 29 ರೊಳಗಾಗಿ ಅರ್ಜಿ ಸಲ್ಲಿಸುವಂತೆ ನಿಗಮದ ಜಿಲ್ಲಾ ವ್ಯವಸ್ಥಾಪಕ ರಮೇಶ ಚವ್ಹಾಣ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂಸಂ.08354-235214ಗೆ ಸಂಪರ್ಕಿಸಬಹುದಾಗಿದೆ.

## ಮೃತ ಕುಟುಂಬಕ್ಕೆ 10 ಲಕ್ಷ ರೂ. ಪರಿಹಾರ ವಿತರಣೆ

ಬಾಗಲಕೋಟೆ: : ಚಲಿಸುತ್ತಿರುವ ಬಸ್‌ನಿಂದ ಇಳಿಯಲು ಪ್ರಯತ್ನಿಸಿ ಕೆಳಗೆ ಬಿದ್ದು ಮೃತಪಟ್ಟ ಮಹಿಳೆ ಯಲ್ಲವ್ವ ಪಾತ್ರೋಟ ಅವರ ಕುಟುಂಬಸ್ಥರಾದ ಪತಿ ಸಣ್ಣಹನಮಂತ ಪಾತ್ರೋಟ ಅವರಿಗೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಅಪಘಾತ ಪರಿಹಾರ ನಿಧಿಯಿಂದ 10 ಲಕ್ಷ ರೂ.ಗಳ ಪರಿಹಾರಧನವನ್ನು ಬಾಗಲಕೋಟೆ ವಿಭಾಗೀಯ ನಿಯಂತ್ರಣಾಧಿಕಾರಿ ನಿತೀನ ಹೆಗಡೆ ಶುಕ್ರವಾರ ವಿತರಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಸಂಚಾರಿ ನಿಯಂತ್ರಣಾಧಿಕಾರಿ ಮೈತ್ರಿ ಇದ್ದರು.



# ಚಿವೇನಿಂಗ್ ಕರ್ನಾಟಕ: ಸ್ನಾತಕೋತ್ತರ ವಿದ್ಯಾರ್ಥಿವೇತನ ಒಡಂಬಡಿಕೆ ಸಹಿ ಕಾರ್ಯಕ್ರಮ

ಬೆಳಗಾವಿ ಸುವರ್ಣಸೌಧ, : ಕರ್ನಾಟಕ ಸಕಾರದ ಉನ್ನತ ಶಿಕ್ಷಣ ಇಲಾಖೆ ಹಾಗೂ ಭಾರತದ ಬ್ರಿಟಿಷ್ ಹೈ ಕಮಿಷನ್ ಸಹಯೋಗದಲ್ಲಿ ಮಹಿಳಾ ಪದವೀಧರೆಯರಿಗೆ ಅಂತಾರಾಷ್ಟ್ರೀಯ ಸ್ನಾತಕೋತ್ತರ ವಿದ್ಯಾರ್ಥಿ ವೇತನ ಚಿವೇನಿಂಗ್ ಕರ್ನಾಟಕ ಸ್ನಾತಕೋತ್ತರ ವಿದ್ಯಾರ್ಥಿ ವೇತನ ಒಡಂಬಡಿಕೆ ಸಹಿ ಕಾರ್ಯಕ್ರಮಕ್ಕೆ ಉನ್ನತ ಶಿಕ್ಷಣ ಸಚಿವರಾದ ಡಾ.ಎಂ.ಸಿ.ಸುಧಾಕರ ಅವರು ಚಾಲನೆ ನೀಡಿದರು.

ಸುವರ್ಣಸೌಧ ಮೂರನೇ ಮಹಡಿಯ ಸಭಾಂಗಣದಲ್ಲಿ ಡಿಸೆಂಬರ್ 16ರಂದು ನಡೆದ ಕಾರ್ಯಕ್ರಮದಲ್ಲಿ ಸಚಿವರು ಮಾತನಾಡಿ, ಚಿವೇನಿಂಗ್ ಕರ್ನಾಟಕ ಸ್ನಾತಕೋತ್ತರ ವಿದ್ಯಾರ್ಥಿ ವೇತನ ಕಾರ್ಯಕ್ರಮವು ಜಾಗತಿಕ ಸಹಯೋಗದೊಂದಿಗೆ ಶೈಕ್ಷಣಿಕ ಉತ್ಕೃಷ್ಟತೆ ಮತ್ತು ನಾಯಕತ್ವದ ಗುಣವನ್ನು ಉತ್ತೇಜಿಸುವ ಮೂಲಕ ವಿದ್ಯಾರ್ಥಿನಿಯರ ವೃತ್ತಿ ಜೀವನಕ್ಕೆ ಭದ್ರ ಬುನಾದಿ ಹಾಕುವ ಉತ್ತಮ ಯೋಜನೆಯಾಗಿದೆ ಎಂದು ತಿಳಿಸಿದರು.

ಜಾಗತಿಕವಾಗಿ ನಾವು ಬಲಿಷ್ಠರಾಗಲು ಶಿಕ್ಷಣವು ಸಹ ನಮಗೆ ಪ್ರಮುಖ ಅಸ್ತ್ರವಾಗಿದೆ. ಉತ್ತಮವಾದ ವ್ಯಕ್ತಿತ್ವ ಹೊಂದಲು ಮತ್ತು ನಾಯಕತ್ವ ಗುಣದೊಂದಿಗೆ ವಿದ್ಯಾರ್ಥಿಗಳು ದೃಢವಾದ ಹೆಜ್ಜೆಯನ್ನಿಡಲು ಪರಿಣಾಮಕಾ-ರಿಯಾದ ಶಿಕ್ಷಣದ ಅವಶ್ಯಕತೆಯಿದ್ದು, ಅಧ್ಯಯನಕ್ಕಾಗಿ ವಿದ್ಯಾರ್ಥಿಗಳನ್ನು ವಿದೇಶಕ್ಕೆ ಕಳುಹಿಸುವ ಇಂತಹ ಒಡಂಬಡಿಕೆ ಕಾರ್ಯಕ್ರಮದ ಅನುಷ್ಠಾನಕ್ಕೆ ರಾಜ್ಯ ಸರ್ಕಾರವು ಹೆಚ್ಚಿನ ಒತ್ತು ಕೊಡುತ್ತಿದೆ ಎಂದು ತಿಳಿಸಿದರು.

ಕರ್ನಾಟಕ ಮತ್ತು ಕೇರಳದ ಬ್ರಿಟಿಷ್ ಡೆಪ್ಯೂಟಿ ಹೈ ಕಮಿಷನರ್ ಚಂದ್ರು ಅಯ್ಯರ್ ಅವರು ಮಾತನಾಡಿ, ಮೂರು ವರ್ಷಗಳ ಈ ಕಾರ್ಯಕ್ರಮದ ಒಟ್ಟು ವೆಚ್ಚ ರೂ. 6 ಕೋಟಿಗಳಾಗಿದ್ದು, ಕರ್ನಾಟಕ ಸರ್ಕಾರವು ರೂ. 3 ಕೋಟಿ ಮತ್ತು ಉಳಿದ ಮೊತ್ತವನ್ನು ಯುನೈಟೆಡ್ ಕಿಂಗ್ಡಮ್‌ನ ಚಿವೇನಿಂಗ್ ಸೆಕ್ರೇಟ-ರಿಯೇಟ್‌ನಿಂದ ಭರಿಸಲಾಗುತ್ತದೆ ಎಂದು ತಿಳಿಸಿದರು. ಆರ್ಥಿಕ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳಾದ ಎಲ್. ಕೆ.ಅತೀಕ್ ಅವರು ಮಾತನಾಡಿ, ಚಿವೇನಿಂಗ್ ಕರ್ನಾಟಕ ಸ್ನಾತಕೋತ್ತರ ವಿದ್ಯಾರ್ಥಿ ವೇತನ ಕಾರ್ಯಕ್ರಮವು ವಿದ್ಯಾರ್ಥಿನಿಯರಿಗೆ ಸಾಕಷ್ಟು ಅನುಕೂಲಕರವಾಗಿದೆ. ವಿದ್ಯಾರ್ಥಿನಿಯರು ತಮ್ಮ ಇಚ್ಚೆಯ ಕ್ಷೇತ್ರದಲ್ಲಿ ಪ್ರಾವೀಣ್ಯತೆ ಪಡೆಯಲು ಮಾನ್ಯತೆ ಪಡೆದ ಯುನೈಟೆಡ್ ಕಿಂಗ್ಡಮ್‌ನ ಯಾವುದೇ ವಿಶ್ವವಿದ್ಯಾಲಯದಲ್ಲಿ ಅಧ್ಯಯನ ಮಾಡುವ ಸುವರ್ಣವಕಾಶವನ್ನು ಈ ಯೋಜನೆ ಕಲ್ಪಿಸುತ್ತದೆ ಎಂದು ತಿಳಿಸಿದರು.

ವಿಶೇಷವಾಗಿ ಸರ್ಕಾರಿ ಕಾಲೇಜುಗಳಿಂದ ಆಯ್ಕೆಯಾದ ವಿದ್ಯಾರ್ಥಿಗಳು ವಿದೇಶಕ್ಕೆ ಹೋಗಿ ಉನ್ನತ ಶಿಕ್ಷಣ ಪಡೆಯಲು ಈ ಕಾರ್ಯಕ್ರಮವು ಸದಾವಕಾಶ ಕಲ್ಪಿಸುತ್ತದೆ. ಶಿಕ್ಷಣ ಪಡೆಯುವುದು ಬರೀ ಉದ್ಯೋಗಕ್ಕಾಗಿ ಅಲ್ಲ; ಸಮಾಜದಲ್ಲಿ ಉತ್ತಮ ನಾಗರಿಕರಾಗಿ ಬಾಳಲು ದಾ-ರಿದೀಪವಾಗುತ್ತದೆ ಎಂದು ತಿಳಿಸಿದರು. ಶಿಕ್ಷಣದಲ್ಲಿ ಬಂಡವಾಳ ಹೂಡುವುದು ಬಹಳ ಮಹತ್ವದ ಕಾರ್ಯವಾಗಿದ್ದು, ಈ ಕಾರ್ಯಕ್ರಮವು ಮಹತ್ವದ ಗುರಿಯೊಂದಿಗೆ ಸಾಗುವ ವಿದ್ಯಾರ್ಥಿಗಳ ಏಳ್ಗೆಗೆ ದಾರಿದೀಪವಾಗಿದೆ ಎಂದು ತಿಳಿಸಿದರು.

ಉನ್ನತ ಶಿಕ್ಷಣ ಇಲಾಖೆಯ ಆಯುಕ್ತರಾದ ಮಂಜುಶ್ರೀ ಎನ್ ಅವರು ಪ್ರಾಸ್ತಾವಿಕ ಮಾತನಾಡಿ, ಯುನಿಟೆಡ್ ಕಿಂಗಡಮ್‌ನಲ್ಲಿ ಒಂದು ವರ್ಷದ ಸ್ನಾತಕೋತ್ತ ಪದವಿ ಪಡೆಯುವ ಮೂಲಕ ಕರ್ನಾಟಕದ ಸರ್ಕಾರಿ ಕಾಲೇಜುಗಳ ಪದವೀಧರೆಯರನ್ನು ಸಬಲೀಕರಣಗೊಳಿಸುವ ಗುರಿಯನ್ನು ಚಿವೇನಿಂಗ್ ಕರ್ನಾಟಕ ಸ್ನಾತಕೋತ್ತರ ವಿದ್ಯಾರ್ಥಿ ವೇತನ ಕಾರ್ಯಕ್ರಮವು ಹೊಂದಿದೆ ಎಂದು ತಿಳಿಸಿದರು.

ಈ ವಿದ್ಯಾರ್ಥಿ ವೇತನವು 2024-2027 ಮೂರು ವರ್ಷಗಳ ಅವಧಿಯಲ್ಲಿ ಪ್ರತಿ ವರ್ಷ 5 ಮಹಿಳಾ ಪದವೀಧರರಿಗೆ ಬೋಧನಾ ಶುಲ್ಕ, ಪ್ರಯಾಣ ಮತ್ತು ವಸತಿ ವೆಚ್ಚವನ್ನು ಸಂಪೂರ್ಣವಾಗಿ ಒಳಗೊಂಡಿರುತ್ತದೆ. 3 ವರ್ಷದಲ್ಲಿ ಒಟ್ಟು 15 ವಿದ್ಯಾರ್ಥಿನಿಯರು ಈ ಕಾರ್ಯಕ್ರಮದ ಪ್ರಯೋಜನೆ ಪಡೆಯಲಿದ್ದಾರೆ ಎಂದು ತಿಳಿಸಿದರು.

ಸಮಾರಂಭದಲ್ಲಿ ವಿಧಾನ ಪರಿಷತ್ ಸದಸ್ಯರಾದ ಮಂಜುನಾಥ ಭಂಡಾರಿ, ಬ್ರಿಟಿಷ್ ಹೈ ಕೌನ್ಸಿಲ್‌ನ ಸುಪ್ರಿಯಾ ಚಾವ್ಲಾ, ಮಂಜುನಾಥ ಕೆ.ಎನ್., ಉನ್ನತ ಶಿಕ್ಷಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಎಂ.ಎಸ್.ಶ್ರೀಕರ್, ಉನ್ನತ ಶಿಕ್ಷಣ ಇಲಾಖೆಯ ನಿರ್ದೇಶಕರಾದ ಡಾ.ಶೋಭಾ ಜಿ., ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಕುಲಪತಿಗಳಾದ ಪಿ.ಎಂ.ತ್ಯಾಗರಾಜ್, ಕುಲ ಸಚಿವರಾದ ಸಂತೋಷ, ಸರ್ ಎಂ.ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಕುಲಸಚಿವರಾದ ಪ್ರೊ.ವಿ ರಂಗಸ್ವಾಮಿ ಸೇರಿದಂತೆ ಇತರರು ಇದ್ದರು.

# ಗಾಂಧಿ ಭಾರತ ಕಾರ್ಯಕ್ರಮಕ್ಕೆ ವಿಧಾನ ಪರಿಷತ್ತಿನಲ್ಲಿ ಪಕ್ಷಾತೀತ ಬೆಂಬಲ ಮಹಾತ್ಮ ಗಾಂಧೀಜಿಯವರ ಹೋರಾಟ, ಸರಳತೆ, ತ್ಯಾಗ ಸ್ಮರಿಸಿದ ಸದನ

ಬೆಳಗಾವಿ ಸುವರ್ಣಸೌಧ, : 1924ರ ಡಿಸೆಂಬರ್ 26 ಮತ್ತು 27ರಂದು ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ಬೆಳಗಾವಿಯಲ್ಲಿ ನಡೆದ ಕಾಂಗ್ರೆಸ್ ಅಧಿವೇಶನಕ್ಕೆ 100 ವರ್ಷಗಳು ಪೂರ್ಣಗೊಂಡಿರುವ ಸಂದರ್ಭದಲ್ಲಿ ಶತಮಾನೋತ್ಸವ ನೆನಪಿಗಾಗಿ ಗಾಂಧೀ ಭಾರತ ಕಾರ್ಯಕ್ರಮವನ್ನು ಸರ್ಕಾರವು ಆಯೋಜಿಸುತ್ತಿರುವುದು ಸ್ವಾಗತಾರ್ಹ. ಪಕ್ಷಾತೀತವಾಗಿ ಈ ಕಾರ್ಯಕ್ರಮವನ್ನು ಆಯೋಜಿಸಬೇಕು ಎಂದು ವಿಧಾನ ಪರಿಷತ್‌ನಲ್ಲಿ ಎಲ್ಲ ಪಕ್ಷಗಳ ಸದಸ್ಯರು ಸಲಹೆ ನೀಡಿ ಬೆಂಬಲ ವ್ಯಕ್ತಪಡಿಸಿದರು.

ವಿಧಾನ ಪರಿಷತ್ತಿನಲ್ಲಿ ಇಂದು (ಡಿ.16ರಂದು) ನಡೆದ ವಿಶೇಷ ಚರ್ಚೆಯಲ್ಲಿ ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರಾದ ಕೆ.ಹೆಚ್.ಮುನಿಯಪ್ಪ ಅವರು ಮಾತನಾಡಿ, ತಾವು ಈ ಹಿಂದೆ ಕೇಂದ್ರ ಭೂಸಾ-ರಿಗೆ ರಾಜ್ಯ ಸಚಿವರಾಗಿದ್ದ ಸಂದರ್ಭದಲ್ಲಿ ಸಬರಮತಿಯಿಂದ ದಂಡಿವರೆಗಿನ ರಸ್ತೆ ಅಭಿವೃದ್ಧಿ ಪಡಿಸುವ ಕಾಮಗಾರಿಗೆ ಚಾಲನೆ ನೀಡುವ ಅವಕಾಶ ಸಿಕ್ಕಿತ್ತು. ಗಾಂಧೀಜಿಯವರ ಜೊತೆಗೆ ದೊಡ್ಡ ಸಂಖ್ಯೆಯಲ್ಲಿ ಮುಸ್ಲಿಮರು ಸಹ ಸ್ವಾತಂತ್ರ್ಯಕ್ಕಾಗಿ ಹೋರಾಡಿದ್ದಾರೆ. ಅನೇಕರು ಪ್ರಾಣ ತ್ಯಾಗ ಮಾಡಿದ್ದಾರೆ ಬ್ರಿಟಿಷರು ಉದ್ದೇಶ ಪೂರ್ವಕವಾಗಿ ಅಂತಹ ಹೆಸರುಗಳನ್ನು ದಾಖಲಿಸಿಲ್ಲ. ಗಾಂಧೀ-ಜಿಯವರು ಶೋಷಣೆ, ಅಸ್ಪೃಶ್ಯತೆ ನಿವಾರಣೆಗೆ ಶ್ರಮಿಸಿದ್ದರು. ಗಾಂಧೀಜಿಯವರ ಒತ್ತಾಸೆಯಿಂದಲೇ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರನ್ನು ಸಂವಿಧಾನ ರಚನೆಯ ಕರಡು ಸಮಿತಿ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲು ಸಾಧ್ಯವಾಗಿತ್ತು. ಬುದ್ಧ, ಬಸವ ಹೇಳಿದ ಮಾನವತಾವಾದ ಅವರ ಕನಸಾಗಿತ್ತು. ವಿರೋಧ ಪಕ್ಷದವರು ಕೂಡ ಇಂದು ಗಾಂಧೀ-ಜಿಯವರ ಬಗ್ಗೆ ಒಳ್ಳೆಯ ಮಾತನಾಡಿದ್ದಾರೆ. ಆದರೆ, ಗಾಂಧೀಜಿಯವರನ್ನು ಕೊಂದವರು ಯಾರು ಎಂಬ ಬಗ್ಗೆ ವಿಪಕ್ಷದ ಸದಸ್ಯರು ಉತ್ತರಿಸಲಿಲ್ಲ ಎಂದರು. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್, ಐಟಿ ಬಿಟಿ ಸಚಿವರಾದ ಪ್ರಿಯಾಂಕ್ ಖರ್ಗೆ ಮಾತನಾಡಿ, ಗಾಂಧೀಜಿಯವರು ಕಾಂಗ್ರೆಸ್ ಅಧ್ಯಕ್ಷರಾಗಿ ನೂರು ವರ್ಷ ಪೂರೈಸಿದ್ದಕ್ಕಾಗಿ ಮಾತ್ರ ಶತಮಾನೋತ್ಸವ ಮಾಡುತ್ತಿದ್ದೇವೆ ಎಂಬ ತಪ್ಪು ಸಂದೇಶ ಹೋಗಬಾರದು. ಅವರು ನೂರು ವರ್ಷದ ಹಿಂದೆ ಬೆಳಗಾವಿಗೆ ಬಂದಾಗ ಈ ಪುಣ್ಯಭೂಮಿಯಲ್ಲಿ ಒಂದು ನಿರ್ಧಾರ ಕೈಗೊಂಡು, ಭಾ?ವಾರು ಪ್ರಾಂತಗಳ ರಚನೆ ಆಧಾರದಲ್ಲಿ ಕನ್ನಡ ಭಾಷಿಕರು ಒಂದಾಗಬೇಕು ಎಂಬ ನಿರ್ಧಾರ ಕೈಗೊಂಡರು. ಈಗ ಕರ್ನಾಟಕ ಏಕೀಕರಣಗೊಂಡು ಮತ್ತು ರಾಜ್ಯಕ್ಕೆ ಈ ಹೆಸರು ಬಂದು ಐವತ್ತಕ್ಕೂ ಹೆಚ್ಚು ವರ್ಷಗಳಾಗಿವೆ. ಅದರ ಮಹತ್ವ ಅರಿಯಲು ಇತಿಹಾಸವನ್ನು ಸರಿಯಾಗಿ ಅರ್ಥ ಮಾಡಿಕೊಳ್ಳಬೇಕು. ನಾವು ಒಂದೇ ದೃಷ್ಟಿಕೋನದಿಂದ ನೋಡಿದರೆ ತಪ್ಪು ಸಂದೇಶ ಹೋಗುತ್ತದೆ. ಈ ಬೆಳಗಾವಿ ಪುಣ್ಯಭೂಮಿಯಿಂದ ಕರ್ನಾಟಕ ಏಕೀಕರಣದ ಮತ್ತು ಭಾಷಾವಾರು ಪ್ರಾಂತ್ಯಗಳ ರಚನೆಯ ಮಹತ್ವದ ಸಂದೇಶ ದೇಶಕ್ಕೆ ಹೋಗಿತ್ತು ಎಂಬುದನ್ನು ಅರಿಯಬೇಕು ಎಂದರು.

ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರಾದ ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ಎಲ್ಲ ಅನುಕೂಲಗಳಿದ್ದ ಗಾಂಧೀಜಿಯವರು ಸೂಟು, ಬಟ್ಟೆಗಳನ್ನು ತ್ಯಜಿಸಿ ಸರಳತೆ ಮೈಗೂಡಿಸಿಕೊಂಡರೇ, ಬಡ ಕುಟುಂಬದಿಂದ ಬಂದ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರು ಇರುವ ಸೂಟುಗಳನ್ನೇ ಅಚ್ಚುಕಟ್ಟಾಗಿ ಧರಿಸಿ ಉತ್ತಮ ಹೋಟೆಲುಗಳಲ್ಲಿ ವಸತಿ ಮಾಡುವ ಮೂಲಕ ತನ್ನ ತಳಸಮುದಾಯಕ್ಕೆ ಮಾದರಿಯಾದ, ಶಿಸ್ತಿನ ಬದುಕು ಪರಿಚಯಿಸಲು ಶ್ರಮಿಸಿದರು. ಬಾಬಾಸಾಹೇಬ್ ಅಂಬೇಡ್ಕರ್ ಅವರು ಮಹಾತ್ಮ ಗಾಂಧೀಜಿಯವರ ಅನೇಕ ವಿಚಾರಗಳ ಜೊತೆಗೆ ಭಿನ್ನಾಭಿಪ್ರಾಯ ಹೊಂದಿದ್ದರು ಕೂಡ ಪೂನಾ ಒಪ್ಪಂದಕ್ಕೆ ಸಹಿ ಹಾಕುವ ಮೂಲಕ ಮಹಾತ್ಮ ಗಾಂಧೀಜಿಯವರ ಪ್ರಾಣ ರಕ್ಷಿಸಿದರು ಎಂದರು. ದ ಪರಿಷತ್ ಸದಸ್ಯರಾದ ಬಿ.ಕೆ.ಹ-ರಿಪ್ರಸಾದ್ ಅವರು ಮಾತನಾಡಿ, ಸತ್ಯ ಮತ್ತು ಅಹಿಂಸೆಯನ್ನು ಮಹಾತ್ಮ ಗಾಂಧಿಯವರು ಪ್ರತಿಪಾದಿಸಿದ್ದರು. ಅದೇ ಕಾಲಘಟ್ಟದಲ್ಲಿ ಗೋಡ್ಸೆ ವಿಚಾರಗಳನ್ನು ನಂಬಿದ್ದ ಸಂಘಟನೆಗಳು ಹಿಂಸೆ, ಗಲಭೆಗಳನ್ನು ಸೃಷ್ಟಿಸುವಲ್ಲಿ ನಿರತರಾಗಿದ್ದರು. 1935ರಲ್ಲಿ ಬ್ರಿಟಿಷರು ಭಾರತ ಸ್ವಾತಂತ್ರ್ಯ ಕಾಯ್ದೆ ಘೋಷಿಸಿ, ದೇಶದ ಜನ ತಮ್ಮ ಆಯ್ಕೆಯನ್ನು ಮುಕ್ತವಾಗಿ ಕೈಗೊಳ್ಳಲು ಅವಕಾಶ ನೀಡಿತ್ತು. ಎಲ್ಲ ಬೆಳವಣಿಗೆಗಳ ನಡುವೆ ಸಮಗ್ರ ರಾಷ್ಟ್ರೀಯತೆಗಾಗಿ, ದೇಶದ ಐಕ್ಯತೆಗಾಗಿ ತಮ್ಮ ಸರ್ವಸ್ವವನ್ನು ತ್ಯಾಗ ಮಾಡಿ ಹೋರಾಡಿದ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ಬೆಳಗಾವಿಯಲ್ಲಿ ಏಕೈಕ ಕಾಂಗ್ರೆಸ್ ಅಧಿವೇಶನ ನಡೆದಿರುವುದು ಹೆಮ್ಮೆಯ ಸಂಗತಿ. ಇದೆ ಅಧಿವೇಶನದಲ್ಲಿ ಉದಯವಾಗಲಿ ನಮ್ಮ ಚೆಲುವ ಕನ್ನಡನಾಡು ಹುಯಿಲಗೋಳ ನಾರಾಯಣ-ರಾವ್ ಬರೆದ ಗೀತೆಯನ್ನು ಬಾಲಕಿ ಗಂಗೂಬಾಯಿ ಹಾನಗಲ್ ಅವರು ಹಾಡಿದ್ದು ಈ ನಾಡಗೀತೆಗೆ ಕೂಡ ಈಗ ನೂರು ವರ್ಷಗಳಾಗಿರುವುದು ಕನ್ನಡಿಗರೆಲ್ಲ ಅಭಿಮಾನ ಪಡಬೇಕಾದ ಸಂಗತಿಯಾಗಿದೆ ಎಂದರು. ಈ ವೇಳೆ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರಾದ ಡಾ.ಶರಣಪ್ರಕಾಶ್ ಪಾಟೀಲ, ಸಭಾ ನಾಯಕರಾದ ಎನ್.ಎಸ್.ಭೋಸರಾಜ, ಸದಸ್ಯರಾದ ಸಿ.ಟಿ.ರವಿ., ಎಸ್.ರವಿ, ಕೆ.ಎ.ತಿಪ್ಪೇಸ್ವಾಮಿ, ಉಮಾಶ್ರೀ, ಎನ್. ರವಿಕುಮಾರ್, ಡಾ.ಧನಂಜಯ ಸರ್ಜಿ, ಐವನ್ ಡಿ'ಸೋಜ, ಬಲ್ಕಿ? ಬಾನು, ಶ್ರೀನಿವಾಸ್, ಪಿ.ಹೆಚ್.ಪೂಜಾರ, ನಾಗರಾಜ ಯಾದವ್, ಕೆ. ಎಸ್.ನವೀನ್ ಹಾಗೂ ಮತ್ತಿತರರು ವಿಸ್ತೃತವಾಗಿ ಮಾತನಾಡಿ ಗಾಂಧೀ ಭಾರತ ಕಾರ್ಯಕ್ರಮವನ್ನು ಪಕ್ಷಾತೀತವಾಗಿ ಆಚರಿಸಲು ಸಲಹೆ ನೀಡಿದರು.

# ಸರಕು ಮತ್ತು ಸೇವೆಗಳ ತೆರಿಗೆ ತಿದ್ದುಪಡಿ ವಿಧೇಯಕಕ್ಕೆ ವಿಧಾನಸಭೆ ಅಂಗೀಕಾರ
## 80 ಸಾವಿರ ಪ್ರಕರಣಗಳಿಂದ 15 ಸಾವಿರ ಕೋಟಿ ರೂ. ತೆರಿಗೆ ಸಂಗ್ರಹಕ್ಕೆ ದಾರಿ ಸುಗಮ

ಬೆಳಗಾವಿ ಸುವರ್ಣಸೌಧ, : ತೆರಿಗೆ ಪಾವತಿದಾರರು ಹಾಗೂ ತೆರಿಗೆ ಅಧಿಕಾರಿಗಳ ನಡುವಣ ಗೊಂದಲ ನಿವಾರಿಸಿ, ಒನ್‌ಟೈಮ್ ಸೆಟಲ್‌ಮೆಂಟ್ ಮಾಡುವ ಮೂಲಕ 80,000 ಬಾಕಿ ಪ್ರಕರಣಗಳನ್ನು ಇತ್ಯರ್ಥಪಡಿಸಿ, ರಾಜ್ಯಕ್ಕೆ ಸುಮಾರು 15 ಸಾವಿರ ಕೋಟಿ ರೂ. ತೆರಿಗೆ ಸಂಗ್ರಹಕ್ಕೆ ದಾರಿ ಸುಗಮಗೊಳಿಸುವ ನಿಟ್ಟಿನಲ್ಲಿ ಸರಕು ಮತ್ತು ಸೇವೆಗಳ ತೆರಿಗೆ ನಿಯಮಗಳಿಗೆ ಎರಡನೆ ತಿದ್ದುಪಡಿ ತರುವ ವಿಧೇಯಕಕ್ಕೆ ವಿಧಾನಸಭೆಯಲ್ಲಿ ಅಂಗೀಕಾರ ದೊರೆತ್ತಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪರವಾಗಿ ಕಂದಾಯ ಸಚಿವರಾದ ಕೃಷ್ಣ ಭೈರೇಗೌಡ ಅವರು ವಿಧಾನಸಭೆಯಲ್ಲಿ ಸೋಮವಾರ 2024 ನೇ ಸಾಲಿನ ಸರಕು ಮತ್ತು ಸೇವೆಗಳ ತೆ-ರಿಗೆ (ಎರಡನೆ ತಿದ್ದುಪಡಿ) ವಿಧೇಯಕವನ್ನು ಮಂಡಿಸಿದರು. ವ್ಯಾಪಾರ ಸ್ನೇಹಿ ಹೆಜ್ಜೆಯ ಭಾಗವಾಗಿ ಸರಕು ಸೇವೆಗಳ ತೆರಿಗೆ ವಿಧೇಯಕಕ್ಕೆ ತಿದ್ದುಪಡಿ ತರಲಾಗುತ್ತಿದೆ ಎಂದರು.

ತೆರಿಗೆ ಪಾವತಿದಾರರ ಹಾಗೂ ತೆರಿಗೆ ಸಂಗ್ರಹಿಸುವ ಅಧಿಕಾರಿಗಳ ನಡುವಿನ ಗೊಂದಲಕ್ಕೆ ತೆರೆ ಎಳೆಯುವ ಹಾಗೂ ರಾಜ್ಯದಲ್ಲಿ ವ್ಯಾಪಾರ-ವಹಿವಾಟು ಸ್ನೇಹಿ ಹೆಜ್ಜೆಯ ಭಾಗವಾಗಿ ಸರಕು ಮತ್ತು ಸೇವೆಗಳ ತೆರಿಗೆ 2024 ವಿಧೇಯಕಕ್ಕೆ ಎರಡನೇ ತಿದ್ದುಪಡಿ ಮಾಡಲಾಗುತ್ತಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಸ್ಪಷ್ಟಪಡಿಸಿದರು.

ವಿಧೇಯಕ ಮಂಡಿಸಿ ಮಾತನಾಡಿದ ಕೃಷ್ಣ ಭೈರೇಗೌಡ ಅವರು, ಎಲ್ಲೆಲ್ಲಿ ತೆರಿಗೆದಾರರ ಹಾಗೂ ತೆರಿಗೆ ಅಧಿಕಾರಿಗಳ ನಡುವೆ ಗೊಂದಲ ಇದೆ, ಈ ಗೊಂದಲಗಳಿಗೆ ತೆರೆ ಎಳೆಯುವ ಹಾಗೂ ಪ್ರಕ್ರಿಯೆಯನ್ನು ಸರಳೀಕರಣಗೊಳಿಸುವುದು ಈ ತಿದ್ದುಪಡಿಯ ಪ್ರಮುಖ ಉದ್ದೇಶ. ಕಳೆದ ನಾಲ್ಕೈದು ವರ್ಷಗಳ ಅನುಭವದಲ್ಲಿ ಎಲ್ಲೆಲ್ಲಿ ಕಾನೂನುಗಳ ಅಗತ್ಯ ಇದೆ ಅದನ್ನು ಅನುಭವದ ಆಧಾರದಲ್ಲಿ ಗುರುತಿಸಲಾಗಿದೆ. ಹಾಗೂ ಕೆಲವು ವಿಚಾರಗಳನ್ನು ವ್ಯಾಖ್ಯಾನ ಮಾಡುವಾಗ ಒಂದಕ್ಕೊಂದು ತದ್ವಿರುದ್ಧವಾಗಿದ್ದ ವಿಚಾರಗಳನ್ನು ಸರಳೀಕರಣಗೊಳಿಸುವ ಕೆಲಸ ಈ ತಿದ್ದುಪಡಿಯಲ್ಲಿ ಮಾಡಲಾಗಿದೆ ಎಂದರು.

ತಿದ್ದುಪಡಿಯಿಂದ ಖಜಾನೆಗೆ 15,000 ತೆ-ರಿಗೆ ಸಂಗ್ರಹ : ಸರ್ಕಾರ ಹಾಗೂ ತೆರಿಗೆದಾರರ ನಡುವೆ 80,000 ಸಾವಿರ ವ್ಯಾಜ್ಯ ಪ್ರಕರಣಗಳು ವಿವಿಧ ಕಾರಣಗಳಿಗಾಗಿ ವಿಲೇವಾರಿಗೆ ಬಾಕಿ ಇರುವ ಕಾರಣದಿಂದ ರೂ.15,000 ಕೋಟಿ ತಕರಾರಿನಲ್ಲಿದೆ. ಈಗಿನ ತಿದ್ದುಪಡಿಯಿಂದ ಎಲ್ಲಾ ಪ್ರಕರಣಗಳೂ ಇತ್ಯರ್ಥವಾದರೆ ಖಜಾನೆಗೆ ರೂ.15,000 ಕೋಟಿ ಸಂಗ್ರಹವಾಗುವ ಸಾಧ್ಯತೆ ಇದೆ. ಅಧಿಕಾರಿಗಳ ಹಾಗೂ ತೆರಿಗೆ ಪಾವತಿದಾರರ ನಡುವೆ ಒಪ್ಪಂದ ಆಗದ ಕಾರಣ ಸುಮಾರು 80,000 ವ್ಯಾಜ್ಯ ಪ್ರಕರಣ ನ್ಯಾಯಾಲಯಗಳಲ್ಲಿವೆ. ಕಾನೂನು ಪ್ರಕ್ರಿಯೆಯಲ್ಲಿರುವ ಕಾರಣ ಬರುತ್ತಿರುವ ತೆರಿಗೆ ಸಹ ನಿಂತುಹೋಗಿದೆ ಎಂದರು.

"ಈ ಹಿಂದೆ ಮೌಲ್ಯ ವರ್ಧಿತ ತೆರಿಗೆ (ವ್ಯಾಟ್ ಪದ್ಧತಿ) ಜಾರಿಯಲ್ಲಿದ್ದ ಸಂದರ್ಭದಲ್ಲಿ ಅಂದಿನ ಹಣಕಾಸು ಸಚಿವರಾದ ಸಿದ್ದರಾಮಯ್ಯನವರು ವ್ಯಾಟ್ ಬಗೆಗಿನ ವ್ಯಾಜ್ಯಗಳ ಇತ್ಯರ್ಥಕ್ಕೆ ಒನ್ ಟೈಮ್ ಸೆಟಲ್ಮೆಂಟ್‌ಗೆ ಅವಕಾಶ ಕೊಟ್ಟಿದ್ದರು. ಪ್ರಸ್ತುತ ಇದೇ ಮಾದರಿಯನ್ನು ಮುಂದುವರೆಸಲು ನಿರ್ಧರಿಸಿ, 80,000 ಪ್ರಕರಣಗಳಿಗೆ ಒನ್‌ಟೈಮ್ ಸೆಟಲ್‌ಮೆಂಟ್ ಗೆ ಅವಕಾಶ ಮಾಡಿಕೊಡಲಾಗುತ್ತಿದೆ. ಈಗಲೇ ವ್ಯಾಜ್ಯವನ್ನು ಇತ್ಯರ್ಥಪಡಿಸಿಕೊಂಡರೆ ಬಡ್ಡಿ ಹಾಗೂ ದಂಡ ಹೊರತುಪಡಿಸಿ ಮೂಲ ಹಣ ಪಾವತಿ ಮಾಡಿದರೆ ಸಾಕು. ಈ ಸೆಟಲ್‌ಮೆಂಟ್‌ಗೆ ಅವಕಾಶ ನೀಡಿದರೆ, ಹಲವರು ಇತ್ಯರ್ಥಕ್ಕೆ ಮುಂದೆ ಬರಬಹುದು. ಇದರಿಂದ ಸರ್ಕಾರದ ಖಜಾನೆಗೆ ಹಣ ಹ-ರಿದುಬರಲಿದೆ ಎಂದರು. ತೆರಿಗೆದಾರರು ಜಿಎಸ್‌ಟಿ ನ್ಯಾಯಾಧೀಕರಣದಲ್ಲಿ ಪ್ರಕರಣ ದಾಖಲಿಸುವಾಗ ಭದ್ರತಾ ಠೇವಣಿ ರೂಪದಲ್ಲಿ ರೂ.50 ಕೋಟಿ ಹಣ ಠೇವಣಿ ಇಡಬೇಕು. ತೆರಿಗೆದಾರರ ಪಾಲಿಗೆ ಇದು ದೊಡ್ಡ ಹೊರೆ. ಹೀಗಾಗಿ ಈ ಪ್ರಮಾಣವನ್ನು ರೂ.20 ಕೋಟಿಗೆ ಇಳಿಸಬೇಕು ಎಂದು ಹಲವು ವ್ಯವಹಾರಸ್ಥರು ಕೇಳಿಕೊಂಡಿದ್ದರು.

ಅದರಂತೆ ಇದೀಗ ಭದ್ರತಾ ಠೇವಣಿ ಹಣವನ್ನು ರೂ.20 ಕೋಟಿ ರೂಪಾಯಿಗೆ ಉಳಿಸಲಾಗಿದೆ. ಇಲ್ಲದಿದ್ದರೆ, ತೆರಿಗೆದಾರರು ಸುಪ್ರೀಂ ಕೋರ್ಟ್ಗೆ ಹೋಗ್ತಾರೆ . ಇದರಿಂದ ಸರ್ಕಾರಕ್ಕೂ ನಷ್ಟ, ತೆರಿಗೆದಾರರಿಗೂ ಕಷ್ಟ" ಎಂದು ವಿವರಿಸಿದ ಅವರು, ಈ ಕಾನೂನುಗಳನ್ನು ಸರಳೀಕರಿಸುವ ಸಂಬಂಧ ಜಿಎಸ್‌ಟಿ ಕೌನ್ಸಿಲ್‌ನಲ್ಲಿ ಬಹುತೇಕ ರಾಜ್ಯಗಳು ಒಪ್ಪಿಗೆ ಸೂಚಿಸಿವೆ. ಕಳೆದ ಅ.01 ರಿಂದಲೇ ಜಾರಿ ಮಾಡಲೂ ಸಹ ರಾಜ್ಯಗಳು ಸಮ್ಮತಿಸಿವೆ. ಕರ್ನಾಟಕದಲ್ಲಿ ಅದಕ್ಕೂ ಮೊದಲೇ ಜಾರಿಗೆ ತರಲಾಗಿದೆ. ಸಚಿವ ಸಂಪುಟದ ಅನುಮತಿ ಪಡೆದು ರಾಜ್ಯಪಾಲರ ಒಪ್ಪಿಗೆಯೊಂದಿಗೆ ಸುಗ್ರೀವಾಜ್ಞೆ ಮೂಲಕ ಈ ವ್ಯವಸ್ಥೆಯನ್ನು ಈಗಾಗಲೇ ಜಾರಿಗೆ ತರಲಾಗಿದೆ. ಪ್ರಸ್ತುತ ಸದನದಲ್ಲಿ ಇದಕ್ಕೆ ಅನುಮತಿ ನೀಡಬೇಕು ಎಂದು ಮನವಿ ಮಾಡಿಕೊಳ್ಳುತ್ತೇನೆ" ಎಂದು ಅವರು ತಿಳಿಸಿದರು.

ಮದ್ಯ ಮಾಡಲು ಉಪಯೋಗವಾಗುವ ಸ್ಪಿರಿಟ್‌ಗೆ ತೆರಿಗೆ ವಿಧಿಸುವ ಅಧಿಕಾರದ ನಡುವೆ ರಾಜ್ಯ-ಕೇಂದ್ರ ಸರ್ಕಾರಗಳ ನಡುವೆ ತಕರಾರು ಈ ಹಿಂದಿನಿಂದಲೂ ಇತ್ತು. ಆದರೆ, ಇದೀಗ ಸ್ಪಿರಿಟ್ ರಾಜ್ಯ ಸರ್ಕಾರಕ್ಕೆ ಸಂಬಂಧಿಸಿದ ವಿಷಯವಾಗಿದ್ದು, ಇದರ ಮೇಲೆ ಜಿಎಸ್‌ಟಿ ತೆರಿಗೆ ವಿಧಿಸಬಾರದು ಎಂದು ಜಿಎಸ್‌ಟಿ ಸಭೆಯಲ್ಲಿ ನಿರ್ಧರಿಸಲಾಗಿದೆ. ಹೀಗಾಗಿ ಸ್ಪಿರಿಟ್ ಅನ್ನು ಜಿಎಸ್‌ಟಿಯಿಂದ ತೆಗೆದು ಹಾಕುತ್ತಿದ್ದೇವೆ ಎಂದು ಸಚಿವ ಕೃಷ್ಣ ಬೈರೇಗೌಡರು ಸದನಕ್ಕೆ ವಿವರಿಸಿದರು.

***

# ಖಾಲಿ ಹುದ್ದೆಗಳ ಭರ್ತಿಗೆ ಕ್ರಮ :ಸಚಿವ ದಿನೇಶ್ ಗುಂಡೂರಾವ್

ಬೆಳಗಾವಿ: ರಾಜ್ಯದ ಆರೋಗ್ಯಇಲಾಖೆ ಯಲ್ಲಿ ಒಟ್ಟು 69915 ಹುದ್ದೆಗಳು ಮಂಜೂರಾಗಿದ್ದು ಅವುಗಳಲ್ಲಿ 37045 ಹುದ್ದೆಗಳನ್ನು ಭರ್ತಿ ಮಾಡಿದ್ದು 32870 ಹುದ್ದೆಗಳು ಖಾಲಿ ಇವೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

ಅವರು ಇಂದು ವಿಧಾನ ಪರಿಷತ್ತಿನಲ್ಲಿ ಸದಸ್ಯ ಡಾ. ಎಂ. ಜಿ. ಮುಳೆ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದರು.

ಖಾಲಿಯಿರುವ ಹುದ್ದೆಗಳಲ್ಲಿ ಗ್ರೂಪ್-ಡಿ ಹುದ್ದೆಗಳನ್ನು ಶೇ.30 ರಷ್ಟು ಓಠಟಿ-ಅಟುಟುಭಿಚಿಟ ಗೂ, ಶೇ. 45 ರಷ್ಟು ಗ್ರೂಪ್-ಡಿ ಹುದ್ದೆಗಳನ್ನು ಒಟ್ಟಾರೆಯಾಗಿ ಶೇ. 75 ರಷ್ಟು ಮೀರದಂತೆ ಹೊರಗುತ್ತಿಗೆ ಮೂಲಕ ಟೆಂಡರ್ ಆಹ್ವಾನಿಸಿ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಿಗೆ ಜಿಲ್ಲಾಧಿಕಾರಿಗಳ ಅನುಮೋದನೆ ಪಡೆದು ನೇಮಕಾತಿ ಮಾಡಿಕೊಳ್ಳಲಾಗುತ್ತದೆ ಎಂದರು.

ರಾಜ್ಯದಲ್ಲಿ ಖಾಲಿಯಿರುವ ತಜ್ಞ ವೈದ್ಯರನ್ನು ಮತ್ತು ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ಕೆಲವು ಷರತ್ತಿಗೊಳಪಟ್ಟು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅನುಮತಿ ನೀಡಲಾಗಿದೆ. ಮತ್ತು

ಇಲಾಖೆಯ ಮುಖಾಂತರ ಸೇವಾನಿರತ ಸ್ನಾತಕೋತ್ತರ ವ್ಯಾಸಂಗ ಪೂರೈಸಿ ಬರುವ ತಜ್ಞ ವೈದ್ಯರನ್ನು ತಜ್ಞತ ಹುದ್ದೆಗೆ ನೇಮಿಸಲಾಗುತ್ತಿದೆ.

ಸ್ನಾತಕೋತ್ತರ ವ್ಯಾಸಂಗ ಪೂರೈಸಿ ಒಂದು ವರ್ಷದ ಕಡ್ಡಾಯ ಸೇವೆಗಾಗಿ ಬರುವ ವೈದ್ಯ ಅಭ್ಯರ್ಥಿ/ತಜ್ಞ ವೈದ್ಯ ಅಭ್ಯರ್ಥಿಗಳನ್ನು ವೈದ್ಯರ/ತಜ್ಞರ ಹುದ್ದೆಗಳಿಗೆ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಇಲಾಖೆಯಲ್ಲಿ ಖಾಲಿಯಿರುವ 120 ತಜ್ಞ ವೈದ್ಯರು ಹಾಗೂ 100 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾ-ರಿಗಳ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಿಕೊಳ್ಳಲು ಕ್ರಮ ಕೈಗೊಳ್ಳಲಾಗುತ್ತಿದೆ. ಈ ಮೂಲಕ ರೋಗಿಗಳಿಗೆ ಅಡಚಣೆಯಾಗದಂತೆ ಚಿಕಿತ್ಸೆ ನೀಡಲಾಗುತ್ತಿದೆ ಎಂದರು.

ಫಾರ್ಮಸಿ ಅಧಿಕಾರಿಯ 400 ಹುದ್ದೆ, ಕಿರಿಯ ವೈದ್ಯಾಧಿಕಾರಿ, ಪ್ರಯೋಗಶಾಲಾ ತಾಂತ್ರಿಕ ಅಧಿಕಾ-ರಿಯ 150 ಹುದ್ದೆ, ವಿಕಿರಣ ಶಾಸ್ತ್ರ ಚಿತ್ರಣ ಅಧಿಕಾ-ರಿಯ 8 ಹುದ್ದೆಗಳನ್ನು ನೇರ ನೇಮಕಾತಿಯಡಿ ಭರ್ತಿ ಮಾಡುವ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಪ್ರಸ್ತುತ ಅಭ್ಯರ್ಥಿಗಳ ಮೂಲ ದಾಖಲೆ ಪರಿಶೀಲನೆಯಲ್ಲಿದೆ.



ಇಲಾಖೆಯಲ್ಲಿ ಖಾಲಿ ಇರುವ 200 ಕಿರಿಯ ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿ ಹಾಗೂ 400 ಫಾರ್ಮಸಿ ಅಧಿಕಾರಿಗಳನ್ನು ನೇರ ನೇಮಕಾತಿಯಡಿ ಭರ್ತಿ ಮಾಡುವವರೆಗೆ ಜಿಲ್ಲಾ ಮಟ್ಟದ ಜಿಲ್ಲಾಧಿಕಾ-ರಿಗಳ ಅಧ್ಯಕ್ಷತೆಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲು ಅನುಮತಿ ನೀಡಲಾಗಿದೆ.

ಕಲ್ಯಾಣ ಕರ್ನಾಟಕ ವೃಂದದಲ್ಲಿನ ಖಾಲಿಯಿರುವ ಒಟ್ಟು 320 ವಿವಿಧ ಅರೆ ವೈದ್ಯಕೀಯ ಹುದ್ದೆಗಳನ್ನು ವಿಶೇಷ ನೇಮಕಾತಿ ಸಮಿತಿ ಮೂಲಕ ಭರ್ತಿ ಮಾಡಲು ಔಟಿಟಟುಟಿಜ ನಲ್ಲಿ ಅರ್ಜಿಗಳನ್ನು ಆಹ್ವಾನಿಸಿದ್ದು, ಅರ್ಹ ಅಭ್ಯರ್ಥಿಗಳ ದಾಖಲಾತಿ ಪರಿಶೀಲನಾ ಕಾರ್ಯ ಪೂರ್ಣಗೊಂಡಿದ್ದು, ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸುವ ಹಂತದಲ್ಲಿದೆ.

ಕಲ್ಯಾಣ ಕರ್ನಾಟಕ ವೃಂದದಲ್ಲಿನ ಸಹಾಯಕ ಕೀಟ ಶಾಸ್ತ್ರಜ್ಞರ ಹುದ್ದೆಯನ್ನು ಭರ್ತಿ ಮಾಡಲು ಅರ್ಜಿಗಳನ್ನು ಆಹ್ವಾನಿಸಿದ್ದು, ಸ್ವೀಕೃತವಾದ ಅರ್ಜಿಗಳನ್ನು ಪರಿಶೀಲಿಸಿ ಖಾಲಿಯಿರುವ ಹುದ್ದೆಯನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಮುಂದುವರೆದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿಯಿರುವ 9871 ಅರೆ ವೈದ್ಯಕೀಯ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದ್ದು, ಆರ್ಥಿಕ ಇಲಾಖೆಯಿಂದ ಅನುಮೋದನೆ ನೀಡಿದ ನಂತರ ಈ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

## ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವ ವಿದ್ಯಾನಿಲಯ ನಾಮಕರಣ ವಿಧೇಯಕ ಅಂಗೀಕಾರ

ಬೆಳಗಾವಿ ಸುವರ್ಣಸೌಧ : ರಾಯಚೂರು ವಿಶ್ವ ವಿದ್ಯಾನಿಲಯಕ್ಕೆ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವ ವಿದ್ಯಾನಿಲಯ ಎಂದು ಮರು ನಾಮಕರಣ ಮಾಡುವ ವಿಧೇಯಕಕ್ಕೆ ಸೋಮವಾರ ವಿಧಾನ ಸಭೆಯಲ್ಲಿ ಅಂಗೀಕಾರ ದೊರೆಯಿತು.

ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಸೋಮವಾರ 2024ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವ ವಿದ್ಯಾನಿಲಯ ತಿದ್ದುಪಡಿ ವಿಧೇಯಕವನ್ನು ಸದನದಲ್ಲಿ ಪರ್ಯಾಲೋಚನೆಗೆ ಪ್ರಸ್ತಾಪಿಸಿದಾಗ, ಸದನ ಧ್ವನಿ ಮತದಿಂದ ವಿಧೇಯಕಕ್ಕೆ ಅಂಗೀಕಾರ ನೀಡಿತು. ಈ ಹಿಂದೆ ರಾಯಚೂರು ವಿಶ್ವ ವಿದ್ಯಾನಿಲಯ ಎಂದು ಕರೆಯಲ್ಪಡುವ ವಿಶ್ವ ವಿದ್ಯಾನಿಲಯ ಇನ್ನೂ ಮುಂದೆ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವ ವಿದ್ಯಾನಿಲಯ ಮರು ನಾಮಕರಣಗೊಂಡಿದೆ. ಇದೇ ವೇಳೆ ಸಚಿವ ಡಾ.ಎಂ.ಸಿ.ಸುಧಾಕರ್ ಚಾಣಕ್ಯ ವಿಶ್ವ ವಿದ್ಯಾಲಯ ತಿದ್ದುಪಡಿ ವಿಧೇಯಕ ಅನುಮೋದನೆಗೆ ಪ್ರಸ್ತಾಪಿಸಿದಾಗ ಯಾವುದೇ ಚರ್ಚೆ ಇಲ್ಲದೆ ಸದನ ಅಂಗೀಕರಿಸಿತು.

ಈ ವಿಧೇಯಕದ ಉದ್ದೇಶವೇನೆಂದರೆ ರಾಜ್ಯ ಸರ್ಕಾರ ಮೂಲಕದ ಸಂಬಂಧಪಟ್ಟ ಕ್ಷೇತ್ರದಿಂದ ವಿಶೇಷ ತಜ್ಞರನ್ನು ವಿಶ್ವ ವಿದ್ಯಾನಿಲಯ ಆಡಳಿತ ಮಂಡಳಿಗೆ ನಾಮ ನಿರ್ದೇಶನ ಮಾಡಲು ಅವಕಾಶ ಕಲ್ಪಿಸುವುದಾಗಿದೆ.

# ವಿಫಲ ಕೊಳವೆ ಬಾವಿ ಮುಚ್ಚದೇ ಇದ್ದಲ್ಲಿ ಜೈಲು ಶಿಕ್ಷೆ

ಬೆಳಗಾವಿ ಸುವರ್ಣಸೌಧ : ಕೊಳವೆ ಬಾವಿಗಳನ್ನು ಸಮರ್ಪಕವಾಗಿ ಮುಚ್ಚದೇ ಚಿಕ್ಕ ಮಕ್ಕಳು ಬಿದ್ದು ಆಗುವ ಅವಘಢಗಳಿಗೆ ಬ್ರೇಕ್ ಹಾಕುವ ನಿಟ್ಟಿನಲ್ಲಿ ಇರುವ ನಿಯಮಗಳನ್ನು ಇನ್ನಷ್ಟು ಕಠಿಣಗೊಳಿಸುವ ಉದ್ದೇಶದಿಂದ ಕರ್ನಾಟಕ ಅಂತರ್ಜಲ (ಅಭಿವೃದ್ಧಿ ಮತ್ತು ನಿರ್ವಹಣೆ ವಿನಿಮಯ ಹಾಗೂ ನಿಯಂತ್ರಣ) ಅಧಿನಿಯಮ 2011 ಮತ್ತು ನಿಯಮಾವಳಿ 2012 ಕ್ಕೆ ತಿದ್ದುಪಡಿಯನ್ನು ವಿಧಾನಸಭೆಯಲ್ಲಿ ಅಂಗೀಕರಿಸಲಾಗಿದೆ. ವಿಫಲ ಕೊಳವೆ ಬಾವಿಗಳನ್ನು ಸಮರ್ಪಕವಾಗಿ ಮುಚ್ಚದೇ ಇದ್ದಲ್ಲಿ ಡ್ರಿಲ್ಲಿಂಗ್ ಏಜೆನ್ಸಿ ಹಾಗೂ ಇಂಪ್ಲಿಮೆಂಟಿಂಗ್ ಏಜೆನ್ಸಿಗಳಿಗೆ 25 ಸಾವಿರ ದಂಡ ಹಾಗೂ 1 ವರ್ಷಗಳ ಜೈಲು ಶಿಕ್ಷೆಯನ್ನು ವಿಧಿಸುವ ಮಸೂದೆ ಮಂಡಿಸಿ ವಿಧಾನಸಭೆಯಲ್ಲಿ ಅನುಮೋದನೆ ಪಡೆದುಕೊಳ್ಳಲಾಗಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್ ಎಸ್ ಭೋಸರಾಜು ತಿಳಿಸಿದರು.

ಇಂದು ಬೆಳಗಾವಿ ಸುವರ್ಣ ವಿಧಾನಸೌಧದ ವಿಧಾನಸಭೇಯಲ್ಲಿ ಮಸೂದೆ ಅಂಗಿಕಾರವಾದ ನಂತರ ಪ್ರತಿಕ್ರಿಯೆ ನೀಡಿದರು. ವಿಫಲ ಕೊಳವೆ ಬಾವಿಗಳನ್ನು ಮುಚ್ಚದೇ ಇರುವ ಮೂಲಕ ಹಲವಾರು ಮಕ್ಕಳು ಪ್ರಾಣ ಕಳೆದುಕೊಂಡಿದ್ದಾರೆ. ಇಂತಹ ಪ್ರಕರಣಗಳಿಗೆ ಬ್ರೇಕ್ ಹಾಕುವುದು ಸರಕಾರದ ಉದ್ದೇಶವಾಗಿದೆ. ಈ ಹಿನ್ನಲೆಯಲ್ಲಿ ಈ ತಿದ್ದುಪಡಿ ಮಸೂದೆಯನ್ನು ಮಂಡಿಸಲಾಗಿದ್ದು ಇಂದು ವಿಧಾನಸಭೇಯಲ್ಲಿ ಅಂಗೀಕಾರವಾಗಿದೆ.

15 ದಿನಗಳ ಮುಂಚಿತವಾಗಿ ಮಾಹಿತಿ ನೀಡುವುದು ಕಡ್ಡಾಯ: ಮಸೂದನೆಯ 11 ಎ ಸೆಕ್ಷನ್ ಪ್ರಕಾರ ಅಧಿಸೂಚಿತ ಪ್ರದೇಶ ಮತ್ತು ಅಧಿಸೂಚಿತವಲ್ಲದ ಪ್ರದೇಶಗಳಲ್ಲಿ ಕೊಳವೆಬಾವಿ ಕೊರೆಯಲು ಇಚ್ಚಿಸುವವರು ಸಂಬಂಧಪಟ್ಟ ಪಿಡಿಓ, ವಿಲೇಜ್ ಅಕೌಂಟೆಂಟ್, ಪಟ್ಟಣ ಪಂಚಾಯಿತಿ, ನಗರ ಸಭೆ ಮತ್ತು ಬಿಡಬ್ಲೂಎಸ್–ಎಸ್‌ಬಿ ಸಂಬಂಧಿಸಿದ ವಾರ್ಡ್ ಇಂಜಿನೀಯರ್‌ಗಳಿಗೆ 15 ದಿನಗಳ ಮುಂಚಿತವಾಗಿ ಮಾಹಿತಿ ನೀಡಬೇಕು. ಇದನ್ನು ಉಲ್ಲಂಘಿಸಿದ ಡ್ರಿಲ್ಲಿಂಗ್ ಏಜೆನ್ಸಿ/ ಇಂಪ್ಲಿಮೆಂಟಿಂಗ್ ಏಜೆನ್ಸಿಗಳಿಗೆ ಐದು ಸಾವಿರ ರೂಪಾಯಿಗಳ ಜುಲ್ಮಾನೆ ಹಾಗೂ ಮೂರು ತಿಂಗಳ ಸಜೆಯನ್ನು ವಿಧಿಸಲಾಗುವುದು.

ವಿಫಲ ಕೊಳವೆ ಬಾವಿಗಳನ್ನು ಮುಚ್ಚುವುದು ಕಡ್ಡಾಯ: ಕೊಳವೆ ಬಾವಿಗಳನ್ನು ಕೊರೆದ ನಂತರ ಡ್ರಿಲಿಂಗ್ ಏಜೆನ್ಸಿ ಮತ್ತು ಇಂಪ್ಲಿಮೆಂಟಿಂಗ್ ಏಜೆನ್ಸಿಗಳು ಕೊಳವೆ ಬಾವಿಗಳನ್ನು ಸ್ಟೀಲ್ ಕ್ಯಾಪ್ ಹಾಕಿ ಮುಚ್ಚವುದು ಕಡ್ಡಾಯವಾಗಿದೆ. ವಿಫಲ ಕೊಳವೆ ಬಾವಿಯನ್ನು ಕೆಸರು ಮಣ್ಣು ತುಂಬಿ ಮುಚ್ಚಬೇಕು ಹಾಗೂ 2ಥ2 ಅಡಿಯ ದಿಬ್ಬ ಮಾಡಿ ದಿಬ್ಬಕ್ಕೆ ಫೆನ್ಸಿಂಗ್. ಡ್ರಿಲಿಂಗ್ ಏಜೆನ್ಸಿ ಮತ್ತು ಇಂಪ್ಲಿಮೆಂಟಿಂಗ್ ಏಜೆನ್ಸಿಗಳು ಕೊಳವೆ ಬಾವಿ ಕೊರೆದ 24 ಗಂಟೆಯೊಳಗೆ ಮುಚ್ಚಿರುವ ಬಗ್ಗೆ ಫೋಟೋ ತಗೆದು ಸುರಕ್ಷಿತವಾಗಿ ಮುಚ್ಚಿರುವುದನ್ನು ತಪಾಸಣೆ ಮಾಡಿ ಧೃಢೀಕರಿಸಬೇಕು. ಈ ಬಗ್ಗೆ ಜಾಯಿಂಟ್ ಡಿಕ್ಲರೇಷನ್ ಅನ್ನು ಸ್ಥಳೀಯ ಪ್ರಾಧಿಕಾರಕ್ಕೆ ಸಲ್ಲಿಸುವುದು ಕಡ್ಡಾಯಗೊಳಿಸಲಾಗಿದೆ.

ಅಲ್ಲದೇ, ಜಮೀನಿನ ಮಾಲೀಕರು ಕೊಳವೆ ಬಾವಿ ರಿಪೇರಿ ಮಾಡಲು ಪಂಪ್ ಅನ್ನು ಹೊರ ತಗೆದಾಗ ಕೊಳವೆಬಾವಿಗೆ ಕ್ಯಾಪ್ ಹಾಕಿ ಮುಚ್ಚಬೇಕು. ಕೊಳವೆ ಬಾವಿಯನ್ನು ಪುನಃಶ್ಚೇತನ ಮಾಡಲು ಇಚ್ಚಿಸಿದಲ್ಲಿ ಜಮೀನು ಮಾಲೀಕರು ಕೊಳವೆ ಬಾವಿಗೆ ಮುಚ್ಚಳದಿಂದ ಮುಚ್ಚಿ ಸುರಕ್ಷತೆಯನ್ನು ಕಾಪಾಡಬೇಕು.

ಕೊಳವೆ ಬಾವಿ ಕೊರೆಯುವಾಗ ಸೈನ್ ಬೋರ್ಡ್ ಕಡ್ಡಾಯ: ಇನ್ನೂ ಕೊಳವೆ ಬಾವಿಯನ್ನು ಕೊರೆಯುವಾಗ ಎಲ್ಲ–ರಿಗೂ ಕಾಣುವ ರೀತಿಯಲ್ಲಿ ಕೊಳವೆ ಬಾವಿ ಕೊರೆಯುತ್ತಿರುವ ಬಗ್ಗೆ ಎಚ್ಚ–ರಿಕೆಯ ಬೋರ್ಡ್ ಅನ್ನು ಪ್ರದರ್ಶಿಸಬೇಕು. ಯಾವುದೇ ಅವಘಡಗಳು ಆಗದಂತೆ ಎಚ್ಚರವಹಿಸುವುದು ಕಡ್ಡಾಯವಾಗಿದೆ ಇದಕ್ಕಾಗಿ ಸುತ್ತಲೂ ಫೆನ್ಸಿಂಗ್ ನಿರ್ಮಿಸಿಕೊಳ್ಳಬೇಕು.

ಸ್ಥಳೀಯ ಪ್ರಾಧಿಕಾರ / ಅಧಿಕಾ–ರಿಗಳ ಜವಾಬ್ದಾರಿ: ಸ್ಥಳೀಯ ಪ್ರಾಧಿಕಾರ ಅಥವಾ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಕೊಳವೆ ಬಾವಿ ಕೊರೆಯುವ ಸಂಧರ್ಭದಲ್ಲಿ ಕೈಗೊಳ್ಳಬೇಕಾದ ಎಚ್ಚ–ರಿಕೆಯ ಅಂಶಗಳನ್ನು ಪಾಲಿಸುತ್ತಿರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ತಮ್ಮ ವ್ಯಾಪ್ತಿಯಲ್ಲಿ ಕೊರೆಸಲಾಗುತ್ತಿರುವ ಕೊಳವೆ ಬಾವಿಗಳ ಬಗ್ಗೆ ಅಂತರ್ಜಲ ಅಭಿವೃದ್ಧಿ ಇಲಾಖೆಗೆ ಮಾಹಿತಿಯನ್ನು ಸಲ್ಲಿಸಬೇಕು. ಇಂಪ್ಲಿಮೆಂಟಿಂಗ್ ಏಜೆನ್ಸಿಯವರು ಸಹ ಕೊಳವೆ ಬಾವಿಯನ್ನು ಮುಚ್ಚುವ ಬಗ್ಗೆ ನಿಗಾವಹಿಸುವಬೇಕು. ಅಲ್ಲದೇ ಪಿಡಿಓಗಳು ಗ್ರಾಮ ಪಂಚಾಯತ್ ಕಚೇರಿಯಲ್ಲಿ ಕೊಳವೆ ಬಾವಿ ಮುಚ್ಚುವ ವಿಧಾನಗಳ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸುವ ಬೋರ್ಡ್ ಹಾಕುವುದನ್ನು ಕಡ್ಡಾಯಗೊಳಿಸಲಾಗಿವೆ ಎಂದು ಸಚಿವರಾದ ಎನ್ ಎಸ್ ಭೋಸರಾಜು ತಿಳಿಸಿದರು.

ಜೈಲು ಶಿಕ್ಷೆ ಹಾಗೂ ದಂಡ: ಇಂಪ್ಲಿಮೆಂಟಿಂಗ್ ಏಜೆನ್ಸಿ ಹಾಗೂ ಡ್ರಿಲ್ಲಿಂಗ್ ಏಜೆನ್ಸಿಗಳು ಮಸೂದೆಯ 11 ಎ ಸೆಕ್ಷನ್‌ನಲ್ಲಿರುವ ನಿಯಮಗಳನ್ನು ಪಾಲಿಸದೇ ಇದ್ದಲ್ಲಿ ಹತ್ತು ಸಾವಿರ ಜುಲ್ಮಾನೆ ಹಾಗೂ ಒಂದು ವರ್ಷ ಜೈಲು ಶಿಕ್ಷೆಯನ್ನು ವಿಧಿಸಬಹುದಾಗಿದೆ. ಸೆಕ್ಷನ್ 21 ಎ ನಿಯಮಗಳನ್ನು ಯನ್ನು ಉಲ್ಲಂಘಿ–ಸುವ ಇಂಪ್ಲಿಮೆಂಟಿಂಗ್ ಏಜೆನ್ಸಿ/ ಡ್ರಿಲ್ಲಿಂಗ್ ಏಜೆನ್ಸಿಗಳು / ಸರ್ವಿಸಿಂಗ್ ಏಜೆನ್ಸಿಗಳಿಗೆ 25 ಸಾವಿರ ರೂಪಾಯಿಗಳ ಜುಲ್ಮಾನೆ ಹಾಗೂ ಒಂದು ವರ್ಷದ ಜೈಲು ಶಿಕ್ಷೆಯನ್ನು ವಿಧಿಸುವ ಅವಕಾಶವನ್ನು ಈ ಮಸೂದೆಯಲ್ಲಿ ಅಳವಡಿಸಲಾಗಿದೆ. ಅಲ್ಲದೇ, ತಮ್ಮ ಜವಾಬ್ದಾರಿ/ಕರ್ತವ್ಯಗಳನ್ನು ನಿಭಾಯಿಸುವಲ್ಲಿ ವಿಫಲವಾಗುವ ಅಧಿಕಾ–ರಿಗಳ ಮೇಲೂ ಕ್ರಮ ಕೈಗೊಳ್ಳಲು ಮಸೂದೆಯಲ್ಲಿ ನಿಯಮಗಳನ್ನು ಅಳವಡಿಸಲಾಗಿದೆ.

***

> **ಹೆಚ್ಚುತ್ತಿರುವ ಕೊಳವೆ ಬಾವಿಗಳಿಂದ ರಾಜ್ಯದಲ್ಲಿ ದಿನೇ ದಿನೇ ಅಂತರ್ಜಲ ಕುಸಿಯುತ್ತಿದೆ. ಇದನ್ನು ತಡೆಗಟ್ಟುವುದು ಹಾಗೂ ಕೊಳವೆ ಬಾವಿಗಳನ್ನು ಸಮರ್ಪಕವಾಗಿ ಮುಚ್ಚದೇ ಆಗುವ ಅವಘಢಗಳಿಗೆ ಬ್ರೇಕ್ ಹಾಕುವುದು ನಮ್ಮ ಉದ್ದೇಶವಾಗಿದೆ. ವಿಧಾನಸಭೆಯಲ್ಲಿ ಅಂಗೀಕರಿಸಲಾಗಿದ್ದು, ವಿಧಾನ ಪರಿಷತ್‌ನಲ್ಲೂ ಪ್ರಸ್ತುತ ಅಧಿವೇಶನದಲ್ಲಿ ಮಂಡಿಸಿ ಅನುಮೋದನೆ ಪಡೆದುಕೊಳ್ಳಲಾಗುವುದು.**
>
> **–ಎನ್ ಎಸ್ ಭೋಸರಾಜು (ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ)**

## ಜೈವಿಕ ತಂತ್ರಜ್ಞಾನ, ಅಂಗಾಂಶ ಕೃಷಿ ವಿಜ್ಞಾನ ಮಹತ್ವ ಕುರಿತು ಕಾರ್ಯಾಗಾರ

## ಜೈವಿಕ ತಂತ್ರಜ್ಞಾನದ ಬಳಕೆ ಬಹು ಮುಖ್ಯ : ಕುಲಸಚಿವ ಮುರಗಿ



**ಬಾಗಲಕೋಟೆ:** : ಪ್ರಸ್ತುತ ವಿಜ್ಞಾನ ವಿಷಯಗಳಲ್ಲಿನ ಅನೇಕ ಆವಿಷ್ಕಾರ ಹಾಗೂ ವಿವಿಧ ಕ್ಷೇತ್ರಗಳ ಸಂಶೋಧನೆಗಳಲ್ಲಿ ಜೈವಿಕ ತಂತ್ರಜ್ಞಾನದ ಪ್ರಾಮುಖ್ಯತೆ ಪಡೆದಿದೆ ಎಂದು ತೋಟಗಾರಿಕೆ ವಿವಿಯ ಕುಲಸಚಿವ ಮಹಾದೇವ ಮುರಗಿ ಹೇಳಿದರು.

ತೋವಿವಿಯ ಆವರಣದಲ್ಲಿರುವ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರದಲ್ಲಿ ಜೈವಿಕ ತಂತ್ರಜ್ಞಾನ ಮತ್ತು ಅಂಗಾಂಶ ಕೃಷಿ ವಿಜ್ಞಾನ ಕುರಿತು ಹಮ್ಮಿಕೊಂಡ ವೈಜ್ಞಾನಿಕ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು ಅಂಗಾಂಶ ಕೃಷಿ ವಿಜ್ಞಾನ ತೋಟಗಾರಿಕೆ ಕ್ಷೇತ್ರದ ಉತ್ತಮ ತಂತ್ರಜ್ಞಾನವಾಗಿದ್ದು, ಅನೇಕ ಬಗೆಯ ಸಸಿಗಳನ್ನು ಉತ್ಪಾದಿಸುವ ತಂತ್ರಜ್ಞಾನ ಇದಾಗಿದೆ. ಇಂತಹ ತಂತ್ರಜ್ಞಾನವನ್ನು ಗ್ರಾಮೀಣ ಭಾಗದ ಮಕ್ಕಳಲ್ಲಿ ಪರಿಚಯಿಸುವ ಕಾರ್ಯವನ್ನು ವಿಜ್ಞಾನ ಶಿಕ್ಷಕರು ಮಾಡಬೇಕೆಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಮ್. ವಿವೇಕಾನಂದ ಮಾತನಾಡಿ, ಶಿಕ್ಷಕರು ವಿದ್ಯಾರ್ಥಿಗಳಲ್ಲಿ ಪ್ರಸ್ತುತ ವೈಜ್ಞಾನಿಕ ಬೆಳವಣಿಗೆಗಳ ಮಾಹಿತಿಯನ್ನು ಅವಶ್ಯವಾಗಿದ್ದು, ಇದರಿಂದ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು. ಜೊತೆಗೆ ವಿಜ್ಞಾನ ಶಿಕ್ಷಕರು ಈ ತರಹದ ವೈಜ್ಞಾನಿಕ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಭಾಗವಹಿಸಬೇಕು ಎಂದರು.

ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ತೋವಿವಿಯ ಸಹಾಯಕ ಪ್ರಾಧ್ಯಾಪಕ ಡಾ.ಮಹಾಂತೇಶ ನಾಯಕ ಅವರು ಜೈವಿಕ ವಿಜ್ಞಾನವು ಪ್ರಸ್ತುತ ವೈಜ್ಞಾನಿಕ ಬೆಳವಣಿಗೆಯಲ್ಲಿ ವಹಿಸುತ್ತಿರುವಂತಹ ಮಹತ್ತರ ಪಾತ್ರವನ್ನು ವಿವರವಾಗಿ ತಿಳಿಸಿಕೊಟ್ಟರು. ಇನ್ನೋರ್ವ ಸಹಾಯಕ ಪ್ರಾಧ್ಯಾಪಕ ಡಾ.ಸರ್ವಮಂಗಳ ಚೋಳಿನ ಬೆಳೆ ಸುಧಾರಣೆಯಲ್ಲಿ ಅನುವಂಶಿಕತೆ, ವಿಕಾಸ ಮತ್ತು ಆಣ್ವಿಕ ಗುರುತುಗಳ ಬಗ್ಗೆ ಮಾಹಿತಿಯನ್ನು ಶಿಕ್ಷಕರಿಗೆ ನೀಡಿದರು. ಡಾ.ಸಯ್ಯದ ವಾಜೀದ ಮುಲ್ಲಾ, ಶಿಕ್ಷಕರಿಗಾಗಿ ಜೈವಿಕ ತಂತ್ರಜ್ಞಾನ ಹಾಗೂ ಅಂಗಾಂಶ ಕೃಷಿ ವಿಜ್ಞಾನದ ಪ್ರಾತ್ಯಕ್ಷಿಕೆಗಳನ್ನು ಪ್ರಯೋಗಗಳ ಮೂಲಕ ವಿವರವಾಗಿ ತಿಳಿಸಿದರು.

ಪ್ರಾರಂಭದಲ್ಲಿ ತೋವಿವಿಯ ಪ್ರಾಧ್ಯಾಪಕ ಡಾ.ವಸಂತ ಗಾಣಿಗೇರ ಮಾತನಾಡಿ ವಿಜ್ಞಾನಕ್ಕೆ ಸಂಬಂಧಿಸಿದ ಅನೇಕ ಹೊರ ಮತ್ತು ಒಳಾಂಗಣ ಪ್ರಾತ್ಯಕ್ಷಿಕೆಗಳನ್ನು ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರದಲ್ಲಿ ಅನುಷ್ಠಾನಗೊಳಿಸಿದ್ದು, ಇದರ ಸದುಪಯೋಗವನ್ನು ಗ್ರಾಮೀಣ ವಿದ್ಯಾರ್ಥಿಗಳು ಬಳಸಿಕೊಳ್ಳುವಂತಾಗಬೇಕು. ವಿಜ್ಞಾನಕ್ಕೆ ಸಂಬಂಧಿಸಿದ ನೂತನ ತಣತ್ರಜ್ಞಾನಗಳ ತರಬೇತಿ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಅದರ ಸಂಪೂರ್ಣ ಮಾಹಿತಿ ಪಡೆದುಕೊಂಡು ಸದುಪಯೋಗ ಪಡಿಸಿಕೊಳ್ಳಲು ತಿಳಿಸಿದರು.

ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಎಮ್. ಎಸ್.ಬಡದಾನಿ, ವಿಜ್ಞಾನ ವಿಷಯ ಪರಿವೀಕ್ಷಕ ಎಮ್. ಎಸ್.ನ್ಯಾಮಗೌಡ, ಗಣಿತ ವಿಷಯ ಪರಿವೀಕ್ಷಕ ಎಸ್. ಎಸ್.ಹಳವರ ಸೇರಿದಂತೆ ಇತರರು ಉಪಸ್ಥಿತ–ರಿದ್ದರು. ಕಾರ್ಯಕ್ರಮದ ಕೊನೆಯಲ್ಲಿ ಆಸೀಫ ಬಾಗವಾನ ವಂಧಿಸಿದತೆ, ಈರಣ್ಣಾ ಬುಳ್ಳಾ ಕಾರ್ಯಕ್ರಮ ನಿರೂಪಿಸಿದರು. ಬಾಗಲಕೋಟೆ ಜಿಲ್ಲೆಯ ಒಟ್ಟು 90 ಶಿಕ್ಷಕರು ಕಾರ್ಯಾಗಾರದಲ್ಲಿ ಪಾಲ್ಗೊಂಡಿದ್ದರು.

## ನೇಸರಗಿ ಡಿಗ್ರಿ ಕಾಲೇಜಿಗೆ ೨ ಕೋಟಿ ರೂ. ಅನುಧಾನ ಮಂಜೂರು



ನೇಸರಗಿ. ಇಲ್ಲಿನ ಸರ್ಕಾರಿ ಪದವಿ ಕಾಲೇಜಿನ ಕಾರ್ಯಕ್ರಮ ವೇದಿಕೆ ಸಭಾಂಗಣ (ಶಾಮಿಯಾನ ) ನಿರ್ಮಾಣಕ್ಕೆ ಮತ್ತು ನಾಲ್ಕು ಕೊಟ್ಟಡಿಗಳ ನಿರ್ಮಾಣ–ಕ್ಕೆ ಶಾಸಕ ಬಾಬಾಸಾಹೇಬ ಪಾಟೀಲ ಅವರ ಕಾರ್ಯದಕ್ಷತೆಯಿಂದ ಕಾಲೇಜು ಮೂಲಭೂತ ಸೌಕರ್ಯ ಅಭಿವೃದ್ಧಿ ಕಾಮಗಾರಿ, ಉನ್ನತ ಶಿಕ್ಷಣ ಇಲಾಖೆಯ ಕಾಲೇಜು ಶಿಕ್ಷಣ ಇಲಾಖೆ 2024–25 ನೇ ಸಾಲಿನ ಸಾಮಾನ್ಯ ಯೋಜನೆಯ ಹೊಸ ಕಾಮಗಾರಿಗೆ 2 ಕೋಟಿ ರೂಪಾಯಿಗಳ ಅನುಧಾನ ಮಂಜೂರಾಗಿದ್ದು ನೇಸರಗಿ ಭಾಗದ ವಿದ್ಯಾರ್ಥಿಗಳು , ಶಿಕ್ಷಣ ಪ್ರೇಮಿಗಳು ಶಾಸಕ ಬಾಬಾಸಾಹೇಬ ಪಾಟೀಲರ ಕಾರ್ಯಕ್ಕೆ ಪ್ರಶಂಶೆ ವ್ಯಕ್ತಪಡಿಸಿದ್ದಾರೆ.

ಬಾಕ್ಸ್. ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದ ಯಾವುದೇ ಕೆಲಸ ಕಾರ್ಯಗಳು ಆಗುತ್ತಾ ಇಲ್ಲಾ ಎಂಬ ವಿರೋಧ ಪಕ್ಷದ ವಾದಕ್ಕೆ ತದ್ವಿರುದ್ಧ ಎಂಬುವಂತೆ ನನ್ನ ಕ್ಷೇತ್ರದ ರಸ್ತೆ, ಮೂಲಭೂತ ಸೌಕರ್ಯ, ದೇವಸ್ಥಾನ ಅಭಿವೃದ್ಧಿಗೆ, ಶಾಲಾ ನಿರ್ಮಾಣ, ಕಾಲೇಜು ಸುಧಾರಣೆ, ಕಿತ್ತೂರು ಪಟ್ಟಣದಲ್ಲಿ ಥೀಮ್ ಪಾರ್ಕ್ ನಿರ್ಮಾಣ,ಇನ್ನೂ ಅನೇಕ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಕೆಲವು ಪ್ರಾರಂಭವಾಗಬೇಕಿದ್ದು ಮತಕ್ಷೇತ್ರದ ಎಲ್ಲ ಕ್ಷೇತ್ರಗಳಲ್ಲಿ ಕಾರ್ಯ ಮಾಡಲಾಗುವದು ಅದೇ ರೀತಿ ನೇಸರಗಿ ಸರ್ಕಾರಿ ಪದವಿ ಕಾಲೇಜಿಗೆ ಅನುಧಾನ ಮಂಜೂರಾಗಿದ್ದು ಶೀಘ್ರ ಕಾಮಗಾರಿ ಪ್ರಾರಂಭವಾಗಲಿದೆ.

## ಎರಡು ದಿನದಲ್ಲಿ ಕಳ್ಳತನ ಪ್ರಕರಣವನ್ನು ಭೇದಿಸಿದ ಹುಕ್ಕೇರಿ ಪೋಲಿಸ್ ಇನ್ಸಪೇಕ್ಟರ ಮಹಾಂತೇಶ



ಹುಕ್ಕೇರಿ. ಡಿ. 17.ಕಳೆದ ಎರಡು ದಿನಗಳ ಹಿಂದೆ ಹುಕ್ಕೇರಿ ನಗರದಲ್ಲಿ ಜರುಗಿದ ಎರಡು ಕಳ್ಳತನ ಪ್ರಕರಣವನ್ನು ಹುಕ್ಕೇರಿ ಪೋಲಿಸ್ ಇನ್ಸಪೇಕ್ಟರ ಮಹಾಂತೇಶ ಬಸ್ಸಾಪೂರೆ ಭೇದಿಸುವಲ್ಲಿ ಸಫಲರಾಗಿದ್ದಾರೆ.

ಪಟ್ಟಣದ ಬುದ್ದ ಬಸವ ಅಂಬೇಡ್ಕರ್ ಕೋ ಆಪರೇಟಿವ ಸೋಸೈಟಿ ಮತ್ತು ಕಿರಾಣಿ ಅಂಗಡಿ ಕಳ್ಳತನವಾಗಿ 48 ಘಂಟೆಗಳ ಸಮಯದಲ್ಲಿ ಕಳ್ಳನನ್ನು ಬಂಧಿಸಿ ಹುಕ್ಕೇರಿ ನ್ಯಾಯಾಲಯಕ್ಕೆ ಒಪ್ಪಿಸಿದ್ದಾರೆ.

ಕಳ್ಳತನ ಪ್ರಕರಣವನ್ನು ಬೆಳಗಾವಿ ಪೋಲಿಸ ಅಧಿಕ್ಷಕ ಭೀಮಾಶಂಕರ ಗುಳೆದ ಗಂಭೀರವಾಗಿ ಪರಿಗಣಿಸಿ ಎರಡು ತಂಡಗಳನ್ನು ರಚಿಸಿ ಅವರ ಮಾರ್ಗದರ್ಶನದ ಮೇರೆಗೆ 26 ವರ್ಷದ ಹುಕ್ಕೇರಿ ನಗರದ ಸ್ವಾಮಿ ವಿವೇಕಾನಂದ ನಗರದ ರಾಘವೇಂದ್ರ ಶಿವಶಂಕರ ದೊಡಮನಿ ಇವನ್ನು ಬಂಧಿಸಿ ನ್ಯಾಯಾಲಯಕ್ಕೆ ಒಪ್ಪಿಸಿದ್ದಾರೆ.

ಬಂಧಿತನಿಂದ ಐದು ಸಾವಿರ ರೂಪಾಯಿ ನಗದು ಮತ್ತು ಕಳ್ಳತನಕ್ಕೆ ಉಪಯೋಗಿಸಿದ್ದ ಒಂದು ಲಕ್ಷ ರೂಪಾಯಿಯ ಬಜಾಜ್ ಪಲ್ಸರ ದ್ವಿ ಚಕ್ರ ವಾಹನ ವಶಪಡಿಸಿಕೊಂಡಿದ್ದಾರೆ. ಬೆಳಗಾವಿ ಹೆಚ್ಚುವರಿ ಎಸ್ ಪಿ ಶೃತಿ ಮತ್ತು ರಾಮಗೊಂಡ ಬಸರಗಿ ಮತ್ತು ಗೋಕಾಕ ಡಿ ಎಸ್ಪಿ ಡಿ ಎಚ್ ಮುಲ್ಲಾ ರವರ ಮಾರ್ಗದರ್ಶನದಲ್ಲಿ ಸಿಬ್ಬಂದಿ ಗಳಾದ ಚಂದ್ರಶೇಖರ ಗಸ್ತಿ, ಎ ಎಸ್ ಸನದಿ, ರವಿ ಢಂಗ, ಮಂಜು ಕಬ್ಬೂರಿ, ಅಜೀತ ನಾಯಿಕ, ರಮೇಶ ಹನಮನ್ನವರ, ಕುಮಾರ ಕರೆನ್ನವರ, ಬಸವರಾಜ ನಾವಿ ಇವರನ್ನೂ ಒಳಗೊಂಡ ಅಪರಾಧ ಪತ್ತೆ ದಳವು ಎರಡು ಪ್ರಕರಣಗಳನ್ನು ಪತ್ತೆ ಮಾಡಿದ ಸಿಬ್ಬಂದಿಗಳಿಗೆ ಬೆಳಗಾವಿ ಜಿಲ್ಲಾ ಪೋಲಿಸ್ ವ–ರಿಷ್ಟಾಧಿಕಾರಿ ಭೀಮಾಶಂಕರ ಗುಳೆದ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

## ವೀರ ಯೋಧ ಮಹೇಶ ವಾಲಿಯವರ ಅಂತ್ಯಕ್ರೀಯೆ ಸಕಲ ಸರಕಾರಿ ಗೌರವಗಳೊಂದಿಗೆ



ಗೋಕಾಕ: ತಾಲೂಕಿನ ಕುಂದರನಾಡಿನ ಈರನಹಟ್ಟಿ ಗ್ರಾಮದ ಯೋಧ ಮಹೇಶ ನಿಂಗಪ್ಪ ವಾಲಿ 24 ಶನಿವಾರದಂದು ಜಮ್ಮು ಕಾಶ್ಮೀರದ ಲೇ ಲಡಾಕ್‌ನಲ್ಲಿ ಕಾರ್ಯನಿರ್ವಹಿಸುತ್ತಿರುವಾಗ ಭೂ ಕುಸಿತದಿಂದ ಮೃತಪಟ್ಟ ಘಟನೆ ನಡೆಸಿದ್ದು ಮಂಗಳವಾರದಂದು ವೀರ ಯೋಧ ಮಹೇಶ ವಾಲಿಯವರ ಅಂತ್ಯಕ್ರೀಯೆ ಸಕಲ ಸರಕಾರಿ ಗೌರವಗಳೊಂದಿಗೆ ಜರುಗಿತು.

ಮೃತ ಯೋಧ ಮಹೇಶ ನಿಂಗಪ್ಪ ವಾಲಿ ಕಳೆದ ಆರು ವರ್ಷಗಳ ಹಿಂದೆ ಭಾರತೀಯ ಸೇನೆಗೆ ಸೇರಿದ್ದರು. ಪ್ರಾಥ–ಮಿಕ, ಪ್ರೌಢ ಶಿಕ್ಷಣವನ್ನು ಅಂಕಲಗಿಯಲ್ಲಿ ಮುಗಿಸಿದ್ದು, ಪಿಯೂಸಿ ವಿದ್ಯಾಭ್ಯಾಸವನ್ನು ಶ್ರೀ ಅಡವಿಸಿದ್ದೇಶ್ವರ ಮಠದ ಪಿಯೂ ಕಾಲೇಜಿನಲ್ಲಿ ಪೂರೈಸಿದ್ದಾರೆ. ಬೆಳಗಾವಿಯ ಲಿಂಗರಾಜ ಕಾಲೇಜಿನಲ್ಲಿ ಬಿಕಾಂ ಪದವಿ ಪಡೆದ ಯೋಧ ಮಹೇಶ ವಾಲಿ 2016ರಲ್ಲಿ ಭಾರತೀಯ ಸೇನೆಯ ಸಿಓ ಸೇವೆನ್ ಇಂಜನೀಯರಿಂಗ್ ರೇಜಿಮೆಂಟನಲ್ಲಿ ಸೇವೆಗೆ ಸೇರಿದ್ದರು. ಕಳೆದ ಕೆಲವು ತಿಂಗಳುಗಳ ಹಿಂದೆಯೇ ಯೋಧನ ಮದುವೆ ನಿಶ್ಚಯವಾಗಿ ಬರುವ ಫೆಬ್ರುವ–ರಿಯಲ್ಲಿ ಸಪ್ತಪದಿ ತುಳಿಯಲಿದ್ದರು ವಿಧಿಯಾಟದಿಂದಾಗಿ ಕಳೆದ ಡಿ.14ರಂದು ಜಮ್ಮು ಕಾಶ್ಮೀರದ ಲೇ ಲಡಾಕ್‌ನಲ್ಲಿ ಕರ್ತವ್ಯದಲ್ಲಿದ್ದಾಗ ಬೆಟ್ಟ ಕುಸಿತದಿಂದಾಗಿ ಮೃತಪಟ್ಟಿದ್ದಾರೆ.

ಮೃತ ಯೋಧ ಮಹೇಶ ತಂದೆ ನಿಂಗಪ್ಪ ವಾಲಿ ಸಹ ಭಾರತೀಯ ಸೇನೆಯ ಬಿಎಸ್‌ಎಫ್ ಯೋಧರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದು, ತಾಯಿ ಸವಿತಾ ಮಗನಲ್ಲಿ ದೇಶಪ್ರೇಮ ಬೆಳೆಸಿ ಮಗನನ್ನು ಸೈನ್ಯಕ್ಕೆ ಸೇರುವಂತೆ ಉತ್ಸಾಹ ತುಂಬಿದ್ದರು. ಹಸೆಮನೆ ಏರಬೇಕಾದ ಗ್ರಾಮದ ಹುಡುಗನ ಪಾರ್ಥಿವ ಶರೀರ ಬರುವದನ್ನು ಕಂಡು ಗ್ರಾಮಸ್ಥರು ಮಮ್ಮಲ ಮರುಗಿದರು.

ಬೆಳಿಗ್ಗೆ 7ಗಂಟೆಗೆ ಬೆಳಗಾವಿ ವಿಮಾನ ನಿಲ್ದಾಣದಲ್ಲಿ ಬಂದಿಳಿದ ಯೋಧನ ಪಾರ್ಥಿವ ಶರೀರಕ್ಕೆ ಬೆಳಗಾವಿ ಜಿಲ್ಲಾಧಿಕಾರಿ, ತಹಶೀಲದಾರ ಸೇರಿ ಅಧಿಕಾರಿಗಳು ಅಂತಿಮ ನಮನ ಸಲ್ಲಿಸಿದರು. ಈರನಹಟ್ಟಿ ಗ್ರಾಮದ ವೀರ ಯೋಧ ಮಹೇಶ ವಾಲಿಯವರ ಪಾರ್ಥಿವ ಶರೀರ ಅಂಕಲಗಿ ಗ್ರಾಮದಿಂದ ಮೆರವಣಿಗೆ ಮೂಲಕ ಈರನಹಟ್ಟಿ ಗ್ರಾಮಕ್ಕೆ 11.30ಕ್ಕೆ ಕರೆತರಲಾಯಿತು. ಈರನಹಟ್ಟಿ ಗ್ರಾಮದ ಸರಕಾರಿ ಶಾಲೆಯಲ್ಲಿ ಯೋಧನ ಪಾರ್ಥಿವ ಶರೀರ ಅಂತಿಮ ದರ್ಶನಪಡೆದರು ಸ್ವಗ್ರಾಮದಲ್ಲಿ ಯೋಧನ ಅಂತ್ಯಕ್ರೀಯೆ ಸಕಲ ಸರಕಾರಿ ಗೌರವಗಳೊಂದಿಗೆ ಯೋಧರು ಮೂರು ಸುತ್ತು ಗುಂಡು ಹಾರಿಸುವ ಮೂಲಕ ಗೌರವ ನಮನ ಸಲ್ಲಿಸಿದರು. ಯೋಧನ ಅಂತ್ಯಕ್ರೀಯೆಯಲ್ಲಿ ಯುವನಾಯನ ಅಮರನಾಥ ಜಾರಕಿಹೊಳಿ, ತಹಶೀಲದಾರ ಮೋಹನ ಭಸ್ಮೆ, ಶಾಸಕರ ಆಪ್ತ ಸಹಾಯಕ ಭೀಮನಗೌಡ ಪೋಲಿಸಗೌಡ್ರ ಸೇ–ರಿದಂತೆ ವಿವಿಧ ಇಲಾಖೆಯ ಅಧಿಕಾ–ರಿಗಳು, ಜನಪ್ರತಿನಿಧಿಗಳು, ಶಾಲಾ ಶಿಕ್ಷಕರು, ಶಾಲಾ ವಿದ್ಯಾರ್ಥಿಗಳು ಗ್ರಾಮಸ್ಥರು ಪಾಲ್ಗೊಂಡಿದ್ದರು.

## ವಿಧಾನ ಸಭೆಯಲ್ಲಿ ಸಚಿವ ಸಂತೋಷ್ ಲಾಡ್ ಮಾಹಿತಿ

## ಶಕ್ತಿ ಯೋಜನೆ : ನಾಲ್ಕು ನಿಗಮಗಳಿಗೆ ರೂ.6543 ಕೋಟಿ ಬಿಡುಗಡೆ

ಬೆಳಗಾವಿ ಸುವರ್ಣಸೌಧ ಜೂನ್ 2023 ರಂದು ಜಾರಿಗೆ ಬಂದಿರುವ ಶಕ್ತಿ ಯೋಜನೆಗೆ ರಾಜ್ಯದಲ್ಲಿ ಉತ್ತಮ ಸ್ಪಂದನೆ ದೊರೆತಿದೆ. ರಾಜ್ಯ ಸರ್ಕಾರದಿಂದ ನವೆಂಬರ್ 2024ರ ವರೆಗೆ ನಾಲ್ಕು ರಸ್ತೆ ಸಾರಿಗೆ ನಿಗಮಗಳಿಗೆ ಶಕ್ತಿ ಯೋಜನೆಯಡಿ ರೂ.6543 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ವಿಧಾನ ಸಭೆಯಲ್ಲಿ ಮಾಹಿತಿ ನೀಡಿದರು.

ಬೆಳಗಾವಿ ಸುವರ್ಣ ಸೌಧದಲ್ಲಿ ಜರುಗುತ್ತಿರುವ ಚಳಿಗಾಲ ಅಧಿವೇಶನದಲ್ಲಿ, ಸೋಮವಾರ ವಿಧಾನ ಸಭೆಯ ಪ್ರಶ್ನೋತ್ತರ ಕಲಾಪದ ವೇಳೆ, ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಅವರ ಪರವಾಗಿ ಸಚಿವ ಸಂತೋಷ್ ಲಾಡ್ ಉತ್ತರಿಸಿದರು.

ಶಕ್ತಿ ಯೋಜನೆ ಜಾರಿಯಾದಾಗಿನಿಂದ ನಾಲ್ಕು ನಿಗಮದ ಬಸ್‌ಗಳಲ್ಲಿ ಪ್ರತಿನಿತ್ಯ 1.16 ಕೋಟಿ ಜನರು ಪ್ರಯಾಣ ಮಾಡುತ್ತಿದ್ದಾರೆ. ಸರ್ಕಾರ ಶಕ್ತಿಯೋಜನೆಯಡಿ ರೂ.8237 ಕೋಟಿ ಅನುದಾನವನ್ನು ಮಂಜೂರು ಮಾಡಿದೆ. ಇದರಲ್ಲಿ ರೂ.6543 ಕೋಟಿ ಈಗಾಗಲೇ ನಿಗಮಗಳಿಗೆ ಪಾವತಿ ಮಾಡಿದ್ದು, ಉಳಿದ 1694 ಕೋಟಿ ಹಣವನ್ನು ಹಂತ ಹಂತವಾಗಿ ನೀಡಲಾಗುವುದು ಎಂದರು.

ಸಾರಿಗೆ ನಿಗಮದ ನೌಕರರೊಂದಿಗೆ ಸಂಧಾನ: ಸಾರಿಗೆ ನಿಗಮಗಳ ನೌಕರರ ವೇತನವನ್ನು ಕೈಗಾರಿಕಾ ಒಪ್ಪಂದಗಳ ಅನ್ವಯ, ಪ್ರತಿ 4 ವರ್ಷಗಳಿಗೊಮ್ಮೆ ಪರಿಷ್ಕರಿಸಬೇಕು. ಕೋವಿಡ್ ಕಾರಣದಿಂದ ಕಳೆದ ಬಾರಿ 2020ಕ್ಕೆ ಪರಿಷ್ಕ–ರಿಸಬೇಕಾದ ವೇತನವನ್ನು 2023ರಲ್ಲಿ ಪರಿಷ್ಕರಿಸಲಾಯಿತು. ಡಿ.31ರ ಒಳಗಾಗಿ ಖುದ್ದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿಯವರು ನಿಗಮದ ನೌಕರರೊಂದಿಗೆ ಸಂಧಾನ ಒಪ್ಪಂದ ಮಾಡಿಕೊಳ್ಳಲಿದ್ದಾರೆ. ಯಾವುದೇ ಕಾರಣಕ್ಕೂ ನೌಕರರು ಮುಷ್ಕರ ಹೂಡದಂತೆ ಕ್ರಮ ಕೈಗೊಳ್ಳಲಾಗುವುದು ಎಂದರು.

4304 ಬಸ್ ಖರೀದಿ: 5000 ಬಸ್ ಖರೀದಿಸುವುದಾಗಿ ಸರ್ಕಾರ ಹೇಳಿತ್ತು. ಇದುವರೆಗೂ 4304 ಬಸ್‌ಗಳನ್ನು ಖರೀದಿಸಲಾಗಿದೆ. ಉಳಿದ ಬಸ್‌ಗಳನ್ನು ಸಹ ಶೀಘ್ರ ಖರೀದಿಸಿ ಅಗತ್ಯ ಇರುವ ಕಡೆ ನೀಡಲಾಗುವುದು ಎಂದರು.

ಈ ಸಂದರ್ಭದಲ್ಲಿ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಮಾತನಾಡಿ, ಸರ್ಕಾರ ಕೂಡಲೇ ಸಾರಿಗೆ ನೌಕರರ ವೇತನ ಪರಿಷ್ಕರಣೆ ಮಾಡಬೇಕು. ನೌಕರರು ಜನವರಿಯಿಂದ ಮುಷ್ಕರ ಕೈಗೊಳ್ಳುವುದಾಗಿ ತಿಳಿಸಿದ್ದಾರೆ. ಈ ಕುರಿತು ಮನಗೆ ಬಂದು ಮನವಿಯನ್ನು ಸಹ ನೀಡಿದ್ದಾರೆ ಎಂದರು. ಶಾಸಕ ಡಾ.ಅಶ್ವಥ್ ನಾರಾಯಣ ಸಿ.ಎನ್. ಮಾತನಾಡಿ, ಸರ್ಕಾರ ಸಾರಿಗೆ ನಿಗಮಗಳಿಗೆ ನೀಡಬೇಕಾದ ಬಾಕಿ ಹಣ ನೀಡಿ ವೇತನ ಪರಿಷ್ಕರಣೆಗೆ ಅನುವು ಮಾಡಿಕೊಡಬೇಕು ಎಂದು ಕೋರಿದರು. ಈ ಮನವಿಗೆ ಹಲವು ಶಾಸಕರು ಧ್ವನಿಗೂಡಿಸಿದರು.

# ಬೆಳಗಾವಿಯಲ್ಲಿ ಸುಸಜ್ಜಿತ ಬಾಲಭವನ ನಿರ್ಮಾಣ ನನ್ನ ಸಂಕಲ್ಪ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್

## 20 ಕೋಟಿ ರೂಪಾಯಿ ವೆಚ್ಚದಲ್ಲಿ ಬಾಲಭವನ ನಿರ್ಮಾಣಕ್ಕೆ ಸಚಿವರಿಂದ ಶಂಕುಸ್ಥಾಪನೆ

ಬೆಳಗಾವಿ: ಬೆಂಗಳೂರಿನ ಬಾಲಭವನಕ್ಕಿಂತ ಸುಂದರವಾಗಿ, ವಿಶಿಷ್ಟವಾಗಿ ಬೆಳಗಾವಿ ಬಾಲಭವನ ನಿರ್ಮಿಸಬೇಕೆನ್ನುವುದು ನನ್ನ ಸಂಕಲ್ಪ. 20 ಕೋಟಿ ರೂಪಾಯಿ ವೆಚ್ಚದಲ್ಲಿ ಸುಸಜ್ಜಿತ ಬಾಲಭವನ ಬೆಳಗಾವಿಯಲ್ಲಿ ನಿರ್ಮಾಣಗೊಳ್ಳಲಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಳಗಾವಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಬೆಂಗಳೂರಿನ ಜವಾಹರ ಬಾಲಭವನ ಸೊಸೈಟಿ, ನಿರ್ಮಿತಿ ಕೇಂದ್ರ ಹಾಗೂ ಜಿಲ್ಲಾ ಬಾಲ ಭವನ ಸಮಿತಿ ಸಂಯುಕ್ತ ಆಶ್ರಯದಲ್ಲಿ ನೂತನವಾಗಿ ನಿರ್ಮಾಣಗೊಳ್ಳಲಿರುವ ಜಿಲ್ಲಾ ಬಾಲ ಭವನಕ್ಕೆ ಭೂಮಿ ಪೂಜೆ ನೆರವೇರಿಸಿ, ಮಾತನಾಡಿದ ಅವರು, ಬೆಳಗಾವಿ ಎರಡನೇ ರಾಜಧಾನಿ ಮಟ್ಟಕ್ಕೆ ಬೆಳೆಯುತ್ತಿದೆ. ಅದಕ್ಕೆ ತಕ್ಕಂತೆ ಇಲ್ಲಿ ಅಭಿವೃದ್ಧಿ ಕೆಲಸಗಳು ಕೂಡ ನಡೆಯಬೇಕು, ಮೂಲಭೂತ ಸೌಲಭ್ಯಗಳು ಕೂಡ ನಿರ್ಮಾಣವಾಗಬೇಕು.

ನಮ್ಮ ಇಲಾಖೆಯಿಂದ ಜಿಲ್ಲೆಗೆ ಅನೇಕ ಯೋಜನೆಗಳನ್ನು ತರಲಾಗುತ್ತಿದೆ. ಇಷ್ಟೊಂದು ದೊಡ್ಡ ಜಿಲ್ಲೆಗೆ ಈವರೆಗೂ ಒಂದು ಸುಸಜ್ಜಿತ ಭಾಲಭವನ ಇಲ್ಲ, ನಮ್ಮ ಇಲಾಖೆಗೆ ಸುಸಜ್ಜಿತ ಕಟ್ಟಡ ಕೂಡ ಇಲ್ಲ. ಈ ಹಿನ್ನೆಲೆಯಲ್ಲಿ ಬಾಲಭವನಕ್ಕೆ ಮತ್ತು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸ್ವಂತ ಕಟ್ಟಡ ನಿರ್ಮಾಣಕ್ಕೆ ನಿರ್ಧರಿಸಲಾಗಿದೆ ಎಂದು ತಿಳಿಸಿದರು.

ನಗರದ ಮಧ್ಯದಲ್ಲಿಯೇ 4 ಎಕರೆ ಈ ವಿಶಾಲ ಜಾಗವನ್ನು ಗುರುತಿಸಿ ಬಾಲಭವನ ನಿರ್ಮಾಣಕ್ಕೆ ನಿರ್ಧರಿಸಲಾಗಿದೆ. ಈ ಜಾಗದ ಮಾರುಕಟ್ಟೆ ಮೌಲ್ಯ100 ಕೋಟಿಗೂ ಅಧಿಕ. ಇದರ ಜೊತೆಗೆ, ನಮ್ಮ ಇಲಾಖೆಯ ಕಟ್ಟಡ ನಿರ್ಮಾಣಕ್ಕೆ ಸಹ ನಿರ್ಧರಿಸಲಾಗಿದೆ, ಇದಕ್ಕೆ 6 ಕೋಟಿ ರೂ. ಮಂಜೂರಾಗಿದ್ದು, ಇಷ್ಟರಲ್ಲೇ ಹಣ ಬಿಡುಗಡೆಯಾಗಲಿದೆ. ಬಾಲಭವನಕ್ಕೆ ಈಗಾಗಲೆ 20 ಕೋಟಿ ರೂ. ಮಂಜೂರು ಮಾಡಲಾಗಿದೆ, ಈಗಾಗಲೇ 2 ಕೋಟಿ ರೂ. ಬಿಡುಗಡೆ ಕೂಡ ಆಗಿದೆ ಎಂದು ಸಚಿವರು ಮಾಹಿತಿ ನೀಡಿದರು. ಮಕ್ಕಳಿಗಾಗಿ ರೈಲು, ಫ್ಯಾಂಟಸಿ ಪಾರ್ಕ್ ಸೇರಿದಂತೆ, ಆಟದೊಂದಿಗೆ ಕಲಿಯುವುದಕ್ಕೆ ಅವಕಾಶವಾಗುವಂತೆ ಸರ್ವವಿಧದ ಸೌಕರ್ಯಗಳನ್ನು ಬಾಲಭವನ ಒಳಗೊಳ್ಳಲಿದೆ. ಮಕ್ಕಳಿಗೆ ಕಲಿಯುವುದಕ್ಕೆ ಮತ್ತು ನಲಿಯುವುದಕ್ಕೆ ಇದೊಂದು ಅತ್ಯುತ್ತಮ ಸ್ಥಳವಾಗಬೇಕೆನ್ನುವುದೇ ನನ್ನ ಉದ್ದೇಶ ಎಂದರು.

**ಗೃಹಲಕ್ಷ್ಮೀ ಯೋಜನೆಗೆ ಪ್ರಚಾರ ಅವಶ್ಯ : ಇದೇ ವೇಳೆ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿ,**

ನಮ್ಮ ಸರ್ಕಾರ ಕೊಟ್ಟ ಮಾತಿನಂತೆ ಗೃಹಲಕ್ಷ್ಮೀ ಯೋಜನೆಯನ್ನು ಜಾರಿಗೆ



ತರಲಾಗಿದೆ. ನಮ್ಮ ನಿರೀಕ್ಷೆಗೂ ಮೀರಿ ಯೋಜನೆ ಯಶಸ್ವಿಯಾಗಿರುವುದು ನಮಗೆಲ್ಲ ಹೆಮ್ಮೆ ತರುವ ಸಂಗತಿಯಾಗಿದೆ. ಆದರೆ, ಗೃಹಲಕ್ಷ್ಮೀ ಯೋಜನೆಗೆ ಪ್ರಚಾರದ ಅವಶ್ಯಕತೆ ಇದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು. ಮಹಾರಾಷ್ಟ್ರ ಸೇರಿದಂತೆ ಬೇರೆ ರಾಜ್ಯಗಳಲ್ಲೂ ನಮ್ಮ ಯೋಜನೆಗಳನ್ನು ಕಾಪಿ ಮಾಡಲಾಗುತ್ತಿದೆ. ಇದು ಗೃಹಲಕ್ಷ್ಮೀ ಯೋಜನೆಯ ಜನಪ್ರಿಯತೆಗೆ ಸಾಕ್ಷಿ. ನಾಳೆ ಗೃಹಲಕ್ಷ್ಮೀ ಯೋಜನೆಯನ್ನು ಜನೋಪಯೋಗಿಯಾಗಿ ಮತ್ತು ಸ್ವಾವಲಂಬನೆಗಾಗಿ ಬಳಸಿದ ಮಹಿಳೆಯರನ್ನು ವಿಧಾನಸೌಧಕ್ಕೆ ಕರೆದುಕೊಂಡು ಹೋಗುತ್ತಿದ್ದೇನೆ. ಅವರಿಗೆಲ್ಲ ಆಡಳಿತ ಸೌಧವನ್ನು, ಆಡಳಿತ ವ್ಯವಸ್ಥೆಯನ್ನು ಹತ್ತಿರದಿಂದ ತೋರಿಸುವ ಪ್ರಯತ್ನ ಮಾಡುತ್ತಿದ್ದೇನೆ ಎಂದು ಸಚಿವರು ಹೇಳಿದರು.

**ಕಾನೂನಿಗಿಂತ ದೊಡ್ಡವರು ಯಾರು ಇಲ್ಲ :** ಪಂಚಮಸಾಲಿ ಮೀಸಲಾತಿ ಹೋರಾಟದ ಕುರಿತು ಪ್ರತಿಕ್ರಿಯಿಸಿದ ಸಚಿವರು, ಕಾನೂನಿನ ಚೌಕಟ್ಟಿನಲ್ಲಿ ಹೋರಾಟ ಮಾಡೋಣ. ಪ್ರಚೋದನಾತ್ಮಕ ಹೋರಾಟ ಮಾಡುವುದು ಬೇಡ. ಕಾನೂನಿಗಿಂತ ದೊಡ್ಡವರು ಯಾರೂ ಇಲ್ಲ ಎಂದು ಸಚಿವರು ಹೇಳಿದರು. ಈ ವೇಳೆ ಬೆಳಗಾವಿ ಉತ್ತರ ಕ್ಷೇತ್ರದ ಶಾಸಕ ರಾಜು ಸೇಠ್, ಬಾಲಭವನ ಸೊಸೈಟಿ ಅಧ್ಯಕ್ಷರಾದ ಜಿ.ಆರ್.ನಾಯ್ಡು, ಜಿಲ್ಲಾ ಪಂಚಾಯತ್ ಸಿಇಓ ರಾಹುಲ್ ಶಿಂಧೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರ್ದೇಶಕರಾದ ಎನ್.ಸಿದ್ದೇಶ್ವರ, ಕಾರ್ಪೊರೇಟ–ರ್ ಸಂದೀಪ್, ಸಚಿವರ ವಿಶೇಷ ಕರ್ತವ್ಯಾಧಿಕಾರಿ ಬಿ.ಎಚ್.ನಿಶ್ಚಲ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ನಾಗರಾಜ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 06, Issue : 264, Postal Reg No. PMG/KA/NK/BM/135/22-24 / POST AT Vantamury Colony Post Office